ಬೀದರ * ಕಲಬುರಗಿ * ರಾಯಚೂರು * ಕೊಪ್ಪಳ * ಬಳ್ಳಾರಿ * ಬಾಗಲಕೋಟೆ * ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕ ಪ್ರಸಾರ
Postal Registration No. BDR/054/2024-2026 • EMAIL ID:mallammanudi@gmail.com

# ಮಲ್ಲಮ್ಮ ನುಡಿ

Mallammanudi Regional NewsPaper
ಸಂಪಾದಕರು: ರಮೇಶರೆಡ್ಡಿ
ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 332 | PAGE- ಪುಟ 8 | ಬುಧುವಾರ 01.01.2025 ಬೀದರ | RNI NO:KARKAN/2011/48371 | RS.ಬೆಲೆ 2/-

## ಸಂಪಾದಕೀಯ

ಆತ್ಮೀಯರೇ,

'ಮಲ್ಲಮ್ಮ ನುಡಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆ 12 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿ ಈಗ 13 ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿರುವ ಈ ಸಂದರ್ಭದಲ್ಲಿ ಇಂದಿನಿಂದ ಇನ್ನೊಂದು ಹೊಸತನಕ್ಕೆ ಹೆಜ್ಜೆ ಇಡುತ್ತಿದೆ. 2025 ರ ಜನೇವರಿ 1 ರಿಂದ(ಇಂದಿನಿಂದ) ವರ್ಣರಂಜಿತವಾಗಿ (ಕಲರ್)ನಿಮ್ಮ ಕೈಸೇರಲಿದೆ. ಈಗಾಗಲೇ ತಮ್ಮೆಲ್ಲರ ಆಸೆ, ಒತ್ತಾಸೆಯಂತೆ ಪತ್ರಿಕೆಯನ್ನು ಡಿಜಿಟಲೀಕರಣಗೊಳಿಸಿ ನೀವು ಇದ್ದಲ್ಲಿಯೇ ನಿಮ್ಮ ಕೈಗೆಟುಕುವ ವ್ಯವಸ್ಥೆ ಮಾಡಿದ್ದೇವೆ. ಈಗ ಮತ್ತೆ ಕಲರನಲ್ಲಿ ಪ್ರಿಂಟಿಂಗ್ ಮಾಡುವ ಸಾಹಸಕ್ಕೆ ಇಳಿದಿದ್ದು ತಮ್ಮೆಲ್ಲರ ಸಹಕಾರ ಈಗ ಬಹಳ ಮುಖ್ಯವಾಗಿದೆ. ಒಂದು ದಿನಪತ್ರಿಕೆ ಕಲರನಲ್ಲಿ ಪ್ರಿಂಟ್ ಆಗಬೇಕೆಂದರೆ ಅದರ ಹಿಂದೆ ಬಹಳಷ್ಟು ಶ್ರಮ, ಸಾಹಸವಿದೆ. ಆ ಸಾಹಸಕ್ಕೆ ನಾನು ಮುಂದಾಗಿದ್ದು, ಓದುಗರು, ಹಿತೈಸಿಗಳು, ಚಂದಾದಾರರು, ಪತ್ರಿಕೆಯ ವಿತರಕರು,



ಇಂತಿ ತಮ್ಮವ
ರಮೇಶರಡ್ಡಿ, ಸಂಪಾದಕ

ಎಲ್ಲಕ್ಕೂ ಹೆಚ್ಚಾಗಿ ವರದಿಗಾರರು ನನಗೆ ಊರುಗೋಲಾಗಿ ನಿಂತುಕೊಳ್ಳಬೇಕಿದೆ. ತಮ್ಮೆಲ್ಲರ ಸಹಾಯ, ಸಹಕಾರ ಈಗ ದೊರೆಯುತ್ತಿರುವಂತೆ ಮುಂದಿನ ದಿನಗಳಲ್ಲಿಯೂ ಸಿಗಬೇಕಿದೆ. ಅಂದಾಗ ನನ್ನ ಪ್ರಯತ್ನ ಸಾಫಲ್ಯಗೊಳ್ಳಲು ಸಾಧ್ಯ. ಆ ನಿಟ್ಟಿನಲ್ಲಿ ತಾವೆಲ್ಲರೂ ಹೊಸ ವರ್ಷಕ್ಕೆ ನಮ್ಮ ಪತ್ರಿಕೆಯನ್ನು ಕಲರನಲ್ಲಿ ನೋಡಬಹುದಾಗಿದೆ. ನಮ್ಮ ವರದಿಗಾರರ ಜವಾಬ್ದಾರಿಯೂ ಇದ-ರಿಂದ ಹೆಚ್ಚಾಗಲಿದ್ದು ಆ ದಿಸೆಯಲ್ಲಿ ನನಗೆ ಸಹಕಾರ ಕೊಡುತ್ತೀರೆಂದು ಆಶಿಸಿದ್ದೇನೆ. 'ಮಲ್ಲಮ್ಮ ನುಡಿ' ಪತ್ರಿಕೆ ನಿಮ್ಮೆಲ್ಲರದು. ಅದನ್ನು ಪ್ರೋತ್ಸಾಹಿಸಿ, ಬೆಳೆಸುವುದು ನಿಮ್ಮಗಳ ಮೇಲಿದೆ. ಅದು ನಿಮ್ಮಿಂದ ಸಾಧ್ಯವಾಗುತ್ತದೆ ಎಂಬ ಅಚಲ ವಿಶ್ವಾಸ ನನ್ನದಾಗಿದ್ದು, ತಮ್ಮೆಲ್ಲರಿಗೂ ಹೊಸ ವರ್ಷದ ಶುಭಾಶಯಗಳನ್ನು ಕೋರುತ್ತ. ಪತ್ರಿಕೆಯನ್ನು ಕಲರನಲ್ಲಿ ಸ್ವಾಗತಿಸಿ, ಶುಭಕೋರಲು ವಿನಂತಿಸುತ್ತೇನೆ.

## ಶುಭಾಶಯಗಳು



'ಮಲ್ಲಮ್ಮ ನುಡಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆ 12 ವರ್ಷ ಪೂರೈಸಿ 13 ನೇ ವಸಂತಕ್ಕೆ ಕಾಲಿಡುತ್ತಿರುವುದು ಸಂತಸದ ಗಳಿಗೆ. ಈ ಅವಧಿಯಲ್ಲಿ ಪತ್ರಿಕೆ ಬಹಳಷ್ಟು ಬೆಳೆದಿದ್ದು, ಹೊಸ ಹೊಸ ಯೋಜನೆಗಳ ಮೂಲಕ ಓದುಗರಿಗೆ ನಿತ್ಯ ಗುಣಮಟ್ಟದ ಸುದ್ದಿಗಳನ್ನು ನೀಡುತ್ತ ಸಾಗಿ ಬಂದಿದೆ. ಈಗ ಡಿಜಿಟಲೀಕರಣಗೊಂಡಿದ್ದು, ಮನೆಯಲ್ಲೇ ಪತ್ರಿಕೆ ಕೈಗೆಟುಕುತ್ತಿದೆ. ಇದರೊಂದಿಗೆ ಜನೇವರಿ 1 ರಿಂದ ಕಲರ ಪತ್ರಿ-ಕೆಯಾಗಿ ಹೊರಬರುತ್ತಿರುವುದು ಸಂತಸದ ಸಂಗತಿ. ಇದು ಪತ್ರಿಕೆಯ ಇನ್ನೊಂದು ದಿಟ್ಟ ಹೆಜ್ಜೆಯಾಗಿದೆ. ಈ ಸಂದರ್ಭದಲ್ಲಿ ಪತ್ರಿಕೆ ಹಾಗೂ ಸಂಪಾದಕ ರಮೇಶರಡ್ಡಿ ಅವರನ್ನು ಅಭಿನಂದಿಸಿ ಶುಭಾಶಯ ಕೋರುತ್ತೇನೆ. ಎಲ್ಲವೂ ಒಳ್ಳೆಯದಾಗಲಿ.

ಪೂಜ್ಯ ಶ್ರೀ ವೇಮನಾನಂದ ಮಹಾಸ್ವಾಮಿಗಳು, ರಡ್ಡಿ ಗುರುಪೀಠ, ಎರೆಹೊಸಹಳ್ಳಿ. ಹರಿಹರ ತಾಲ್ಲೂಕು.

## ನಾಳೆ ಆಕ್ಸಿಲೈಫ್ ಆಸ್ಪತ್ರೆ ಲೋಕಾರ್ಪಣೆ: ಗದ್ದಗಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 31 :–: ನೌಬಾದ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಯ ಜನರಿಗೆ ಉತ್ತಮ ಚಿಕಿತ್ಸೆ ನೀಡಲು ಎಸ್‌ಬಿ ಪಾಟೀಲ ಡೆಂಟಲ್ ಹಾಸ್ಪಿಟಲ್ ಎದುರುಗಡೆ ನೌಬಾದನಲ್ಲಿ ನೂತನವಾಗಿ ನಿರ್ಮಿಸಿದ ಆಕ್ಸಿಲೈಫ್ ಆಸ್ಪತ್ರೆ ಜನವರಿ 2 ರಂದು ಬೆಳಿಗ್ಗೆ 11–30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಂದ ಲೋಕಾರ್ಪಣೆಗೊಳ್ಳಲಿದೆ ಎಂದು ಆಸ್ಪತ್ರೆಯ ಅಧ್ಯಕ್ಷ ಚಂದ್ರಕಾಂತ ಗದ್ದಗಿ ಹೇಳಿದರು.

ಮಂಗಳವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಮೂವತ್ತು ವರ್ಷಗಳಿಂದ ವಸಂತ ನರಸಿಂಗ್ ಕಾಲೇಜು, ಎಂ.ಜಿ. ಕಾನೂನು ಮಹಾವಿದ್ಯಾಲಯ ಸೇರಿದಂತೆ ಇತರೆ ಶಾಲಾ ಕಾಲೇಜುಗಳನ್ನು ನಡೆಸುತ್ತ ಈ ಭಾಗದಲ್ಲಿ ಶೈಕ್ಷಣಿಕ ಸೇವೆ ಮಾಡುತ್ತ ಬರುತಿದ್ದು ಈಗ ಆರೋಗ್ಯ ಸೇವೆ ನೀಡಲು ಸೂಪರ ಸ್ಪೇಷಾಲಿಟಿ ಹಾಗೂ ಮಲ್ಟಿ ಆಸ್ಪತ್ರೆ ಪ್ರಾರಂಭಿಸಲಾಗುತ್ತಿದೆ. ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಅನುಕುಲ ಆಗಲೆಂದು ಈ ಆಸ್ಪತ್ರೆ ತೆರೆಯಲಾಗಿದೆ. ಸಾರ್ವಜನಿಕರು ಇದರ ಸದುಪಯೊಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಆಸ್ಪತ್ರೆಯ ವ್ಯವಸ್ಥಾಪಕ ಟ್ರಸ್ಟಿಗಳಾದ ಡಾ. ಪ್ರಿಯಾ ಗದ್ದಗಿ ಮೋದಿ ಮಾತನಾಡಿ,.

ಇಲ್ಲಿ ಎಲ್ಲಾ ರೀತಿಯ ಮಲ್ಟಿ ಸ್ಪೆಶಾಲಿಟಿ ಸೌಲಭ್ಯಗಳು ಲಭ್ಯ ಇರಲಿವೆ. ಅಂಬುಲೆನ್ಸ್ ವ್ಯವಸ್ಥೆ, ತುರ್ತು ಚಿಕಿತ್ಸಾ ಘಟಕ ಇರಲಿದೆ. 50 ಹಾಸಿಗೆಯ ಈ ಆಸ್ಪತ್ರೆಯಲ್ಲಿ ಸುಮಾರು 25 ರಿಂದ 30 ಜನ ಸಿಬ್ಬಂದಿಗಳು, ನಸಿರ್ಂಗ್ ವಿದ್ಯಾರ್ಥಿಗಳು 24*7 ಲಭ್ಯ ಇರಲಿದ್ದಾರೆ ಎಂದು ಮಾಹಿತಿ ನೀಡಿದರು. ಡಾ. ಅನಮೋಲ್ ಮೋದಿ ಮಾತನಾಡಿ ನೌಬಾದ ಸುತ್ತಮುತ್ತಲಿನ ಜನತೆ ಸಿಟಿ ಒಳಗೆ ಹೋಗದೆ ತಕ್ಷಣವೇ ನೌಬಾದನಲ್ಲೇ ಚಿಕಿತ್ಸೆ ಒದಗಿಸುವ ಉದ್ದೇಶ ಹೊಂದಿದ್ದೇವೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಸುದ್ದಿಗೋಷ್ಟಿಯಲ್ಲಿ ಶ್ರೀ ಶಿವಲಿಂಗ ವಿದ್ಯಾವರ್ಧಕ ಎಜುಕೇಶನ್ ಟ್ರಸ್ಟ್ ಕಾರ್ಯದರ್ಶಿಗಳು ಹಾಗೂ ಪ್ರಾಚಾರ್ಯರಾದ ಶ್ರೀಮತಿ ಚಿನ್ನಮ್ಮ ಗದ್ದಗಿ ಉಪಸ್ಥಿತರಿದ್ದರು.

# ಕಪನೂರ ಪರಮಾಪ್ತ ಬಿಜೆಪಿ ಶಾಸಕ ಮತ್ತಿಮಡು ರಾಜೀನಾಮೆ ಯಾವಾಗ? : ಸಚಿವ ಪ್ರಿಯಾಂಕ್ ಖರ್ಗೆ





ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ :ಡಿ.31: ಆತ್ಮಹತ್ಯೆ ಮಾಡಿಕೊಂಡ ಸಚಿನ್ ಪಾಂಚಾಳ ಬರೆದಿದ್ದ ಎನ್ನಲಾಗಿರುವ ಡೆತ್ ನೋಟ್ ನಲ್ಲಿ ಮೊದಲ ಹೆಸರಿರುವ ರಾಜು ಕಪನೂರಗೆ ಪರಮಾಪ್ತರಾಗಿರುವ ಬಿಜೆಪಿ ಶಾಸಕ ಬಸವರಾಜ್ ಮತ್ತಿಮಡು ಅವರ ರಾಜೀನಾಮೆ ಯಾವಾಗ ಪಡೆಯುತ್ತೀರಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.

ಬಿಜೆಪಿ 'ಎಕ್ಸ್' ಖಾತೆಯಲ್ಲಿ ಬರೆದುಕೊಂಡಿರುವ ಪೋಸ್ಟ್ ವೊಂದಕ್ಕೆ ಪ್ರತಿಕ್ರಿಯಿಸಿರುವ ಸಚಿವ ಖರ್ಗೆ ಅವರು, ಕಲಬುರಗಿ ಗ್ರಾಮೀಣ ಕ್ಷೇತ್ರದ ಬಿಜೆಪಿ ಶಾಸಕ ಬಸವರಾಜ್ ಮತ್ತಿಮಡು ಅವರು ನನ್ನ ಸಹೋದರ ಎಂದು ರಾಜು ಕಪನೂರ್ ಹೇಳಿರುವ ವಿಡಿಯೋ, ಮತ್ತಿಮಡು ಮತ್ತು ಕಲಬುರಗಿ ನಗರ ಬಿಜೆಪಿ ಅಧ್ಯಕ್ಷರಾಗಿರುವ ಚಂದು ಪಾಟೀಲ್ ಅವರೊಂದಿಗೆ ಇರುವ ಫೋಟೋಗಳನ್ನು 'ಎಕ್ಸ್' ನಲ್ಲಿ ಪ್ರಕಟಿಸಿದ್ದಾರೆ.

ನಿಮ್ಮದೇ ಪಕ್ಷದ ಅಭ್ಯರ್ಥಿಗಳು ಯಾರು, ನಿಮ್ಮದೇ ಪಕ್ಷದ ಶಾಸಕರು ಯಾರು, ನಿಮ್ಮದೇ ಪಕ್ಷದ ಮುಖಂಡರು ಯಾರು ಎಂದು ಗುರುತು ಹಿಡಿಯಲು ಸಾಧ್ಯವಾಗುವುದಾದರೆ ಈ ಫೋಟೋಗಳಲ್ಲಿ ಇರುವ ನಿಮ್ಮವರನ್ನು ಗುರುತಿಸಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ಟಾಂಗ್ ನೀಡಿದ್ದಾರೆ.

ಹಲವು ಬಿಜೆಪಿ ಮುಖಂಡರು, ಶಾಸಕರು ರಾಜು ಕಪನೂರಗೆ ಪರಮಾಪ್ತರಿದ್ದಾರೆ, ಅವರ ರಾಜೀನಾಮೆಯನ್ನು ಯಾವಾಗ ಕೇಳುವಿರಿ ಎಂದು ಬಿಜೆಪಿಗೆ ಟ್ಯಾಗ್ ಮಾಡಿ ಪ್ರಶ್ನೆ ಮಾಡಿದ್ದಾರೆ.

ಮುತ್ತಿಗೆ ಹಾಕಲು ಬರುವಾಗ ವಿಜಯೇಂದ್ರರವರು ತಮ್ಮ ಪಕ್ಷದ ಯಾವ ಯಾವ ಶಾಸಕರು ರಾಜು ಕಪನೂರ ಜೊತೆಗೆ ಆಪ್ತರಾಗಿದ್ದಾರೆ ಎನ್ನುವ ಬಗ್ಗೆ ಹೋಮ್ ವರ್ಕ್ ಮಾಡಿಕೊಂಡು ಬರುವುದು ಉತ್ತಮ. ಕಲಬುರಗಿ ಮನೆಗೆ ಮುತ್ತಿಗೆಗೆ ಬರುವಾಗ ಈ ಎಲ್ಲಾ ಫೋಟೋಗಳನ್ನೂ ಹಿಡಿದು ಬರಬೇಕು ಎಂದು ನನ್ನ ಮನವಿ ಎಂದು ಸಚಿವ ಖರ್ಗೆ ಬರೆದಿದ್ದಾರೆ.

## ಹೊಸ ವರ್ಷದಲ್ಲಾದರೂ ಅರ್ಹರಿಗೆ ಸ್ಥಾನ ಸಿಗಲಿ : ಡಾ.ಸಿದ್ರಾಮ ವಾಘಮಾರೆ



ಬಳ್ಳಾರಿ :ಡಿ.31: ನೂತನ ಹೊಸ ವರ್ಷಾಚರಣೆಯ ಸಂದರ್ಭದಲ್ಲಿ ಹಿಂದುಳಿದ ಮತ್ತು ಶೋಷಿತ ಸಮುದಾಯಗಳ ಅವಕಾಶ ವಂಚಿತ ಸಮಾಜ ಸೇವಕರು ಮತ್ತು ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದವರಿಗೆ ನಿಗಮ ಮಂಡಳಿಗಳಲ್ಲಿ ಖಾಲಿ ಇರುವ ಅಧ್ಯಕ್ಷಸ್ಥಾನ, ನಿರ್ದೇಶಕರ ಹಾಗೂ ಸದಸ್ಯರ ಸ್ಥಾನವನ್ನು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಭರ್ತಿ ಮಾಡಲಿ ಎಂದು ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷ ಡಾ.ಸಿದ್ರಾಮ ವಾಘಮಾರೆ ಅವರು ಅಹಿಂದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡಿದ್ದಾರೆ.

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಳೆದ ಹಲವಾರು ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದವರು ಅನೇಕರಿದ್ದಾರೆ. ಅದರಲ್ಲಿ ನಾನೂ ಒಬ್ಬನಾಗಿದ್ದೇನೆ. ದೇವರಾಜ್ ಅರಸು ಬಳಿಕ ಸಾಮಾಜಿಕ ನ್ಯಾಯದ ಹರಿಕಾರರೆನಿಸಿರುವ

(2ನೇ ಪುಟ ನೋಡಿ)

## ಸಂಘಗಳು ಸಮಾಜಮುಖಿ ಕೆಲಸ ಮಾಡಿದಾಗ ಮಾತ್ರ ಗೌರವ ಹೆಚ್ಚಾಗುತ್ತದೆ: ರುದ್ರಮುನಿ ಶಿವಾಚಾರ್ಯರು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಡಿ.31:ಸಂಘಗಳು ಸಮಾಜಮುಖಿ ಕೆಲಸ ಮಾಡಿದಾಗ ಮಾತ್ರ ಸಂಘಗಳ ಗೌರವ ಹೆಚ್ಚಾಗುತ್ತದೆ. ಎಂದು ಚಾಂಬೋಳದ ಶ್ರೀ ರುದ್ರಮುನಿ ಶಿವಾಚಾರ್ಯರು ಅಭಿಪ್ರಾಯ ಪಟ್ಟರು ಹಳ್ಳಿಖೇಡ(ಬಿ) ಗ್ರಾಮದ ಮಾತೋಶ್ರೀ ಕಸ್ತೂರಿಬಾಯಿ ತಾಳಂಪಳ್ಳಿ ಪ್ರೌಢಶಾಲೆಯಲ್ಲಿ ವೀರಶೈವ ಲಿಂಗಾಯತ ನೌಕರರ ಸಂಘ ಏರ್ಪಡಿಸಿದ ನೂತನ ವರ್ಷದ ದಿನದರ್ಶಿಕೆ ಹಾಗೂ ಸನ್ಮಾನ ಸಮಾರಂಭದಲ್ಲಿ ಮಾತನಾಡುತ್ತಾ. ಈ ಸದ್ದಿ ಬಿಡುಗಡೆ ಮಾಡಿದ ದಿನದರ್ಶಿಕೆ ಶರಣರ ವಚನಗಳೊಳಗೊಂಡಿದ್ದು ಇದೊಂದು ಉತ್ತಮ ದಿನದರ್ಶಿಕೆಯಾಗಿದೆ ವಿಶ್ವಗುರು ಬಸವಣ್ಣನವರು ಪ್ರತಿಪಾದಿಸಿದ ಕಾಯಕ ದಾಸೋಹ ಸಿದ್ಧಾಂತ ಅನುಕರಣೆಯಿಂದ ಒಳ್ಳೆಯ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ. ಎಂದರು ಹಾಗೂ ಮಕ್ಕಳಿಗೆ ಶಿಕ್ಷಣದ ಜೊತೆಗೆ ಒಳ್ಳೆಯ ಸಂಸ್ಕಾರ ನೀಡಬೇಕೆಂದು ಹೇಳಿದರು ಸಂಘದ ಗೌರವ ಅಧ್ಯಕ್ಷರ ಡಾಕ್ಟರ್ ನಾಗನಾಥ ಹುಲಸೂರೆ ಮಾತನಾಡಿ ಸಂಘವು ಕಳೆದ 15 ವರ್ಷದಿಂದ ದಿನದರ್ಶಿಕೆ ಬಿಡುಗಡೆ ಮಾಡುತ್ತಿದ್ದು ಹಾಗೂ ಈ ಸಂಘ ಅನೇಕ ಸಮಾಜಮುಖಿ ಕೆಲಸ ಮಾಡುತ್ತಿದೆ ಎಂದರು. ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಮಂಜುಳಾ ಎಸ್ ಗಂಗಾ ಉದ್ಘಾಟನ ಭಾಷಣ ಮಾಡಿದರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಆಗಮಿಸಿದ ಡಾ. ಕೆ.ಬಿ ಮಜಗೆ, ಜಿಲ್ಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ರವಿಂದ್ರರೆಡ್ಡಿ ಮಾಲಿ ಪಾಟೀಲ್, ತಾಲೂಕ ಶಿಕ್ಷಕರ ಸಂಘದ ಅಧ್ಯಕ್ಷರಾದ ಮುರುಗೇಂದ್ರ, ಕಸಾಪ ಅಧ್ಯಕ್ಷರಾದ ಸಿದ್ದಲಿಂಗ ನಿರ್ಣಾ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮಲ್ಲಿಕಾರ್ಜುನ ಸಂಗಮಕರ್ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷರು ಸಂಘದ ಅಧ್ಯಕ್ಷರಾದ ಶ್ರೀಕಾಂತ್ ಸೂಗಿ ಮಾತನಾಡಿ ಮುಂಬರುವ ದಿನಗಳಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದರು. ಅತಿಥಿಗಳಾಗಿ ಡಾಕ್ಟರ್ ಲಕ್ಷ್ಮಿಕಾಂತ್ ನಾಗರಾಜ್ ಸಿರಮುಂಡಿ, ರವೀಂದ್ರ, ಮೊಳಕೆರಿ, ಶಶಿಧರ್ ಪಾಟೀಲ್, ಸುಭಾಷ್ ಗಂಗಾ, ಭಾಗವಹಿಸಿದರು ಈ ಸಂದರ್ಭದಲ್ಲಿ ಕುವೆಂಪು ಜನ್ಮ ದಿನಾಚರಣೆ ಆಚರಿಸಲಾಯಿತು ಭಕ್ತರಾಜ ಚಿತಾಪೂರೆ ಪ್ರಾಸ್ತಾವಿಕವಾಗಿ ಮಾತನಾಡಿದರು, ಸುಭಾಷಗಂಗಾ ಸ್ವಾಗತಿಸಿದರು, ಕಾರ್ಯದರ್ಶಿಯಾದ ಸದಾಶಿವಯ್ಯಾ ಹೀರೆಮಠ ನಿರೂಪಿಸಿದರು, ಮಲ್ಲಿಕಾರ್ಜುನ ಹಚ್ಚೆ ವಂದಿಸಿದರು. ಕಾರ್ಯಕ್ರಮದಲ್ಲಿ ಮಡೆಪ್ಪಾ ಕುಂಬಾರ ಶ್ರೀಧರ ಚವ್ಹಾಣ, ರೇವಣಸಿದ್ದಯ್ಯಾ ಸ್ವಾಮಿ, ರಾಜಕುಮಾರ ಆರ್ಯ, ಮಂಜುನಾಥ ಅಶೋಕ ಕುಂಬಾರ, ರಾಜಣ್ಣಾ ಕುಂಬಾರ, ಪಾಂಡುರಂಗ, ಶಿವಶರಣ ಶಿರಮುಂಡಿ, ಸುನೀಲ ಪಾಟೀಲ, ನಿಲೇಶ ಮಹೇಂದ್ರಕರ್ ಶಾಲಾ ಮುಖ್ಯಗುರುಗಳು, ಶಿಕ್ಷಕರು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಭಾಗವಹಿಸಿದರು

## ಭೀಮಾನದಿಗೆ ಕಬ್ಬಿನ ಲಾರಿ: ಚಾಲಕ ನಾಪತ್ತೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ ಡಿ.31:ಚಾಲಕನ ನಿಯಂತ್ರಣ ತಪ್ಪಿ ಕಬ್ಬು ತುಂಬಿಕೊಂಡು ಹೊರಟಿದ್ದ ಲಾರಿ ಭೀಮಾ ನದಿಗೆ ಉರುಳಿ ಬಿದ್ದ ಪರಿಣಾಮ ಚಾಲಕ ನಾಪತ್ತೆಯಾದ ಘಟನೆ ದೇವಲಗಾಣಗಾಪುರ ಬಳಿ ಸಂಭವಿಸಿದೆ. ಇಟಗಾ–ಗಾಣಗಾಪುರ ಗ್ರಾಮದ ಮಧ್ಯೆ ಇರುವ ಭೀಮಾ ನದಿ ಸೇತುವೆ ಮೇಲೆ ಲಾರಿ ಹೊರಟಿದ್ದಾಗ ಈ ದುರ್ಘಟನೆ ನಡೆದಿದೆ.

ಅಗ್ನಿಶಾಮಕ ದಳ ಸಿಬ್ಬಂದಿ ಘಟನಾ ಸ್ಥಳಕ್ಕೆ ಧಾವಿಸಿದ್ದು ನಾಪತ್ತೆಯಾದ ಲಾರಿ ಚಾಲಕನಿಗಾಗಿ ಶೋಧ ಕಾರ್ಯ ಆರಂಭಿಸಿದ್ದಾರೆ.

ದೇವಲಗಾಣಗಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾಂಗ್ರೆಸ್ ಸರ್ಕಾರದಲ್ಲಿ ಸರಣಿ ಹಗರಣಗಳು; ಸಚಿವರುಗಳ ಬೆದರಿಕೆಯಿಂದಾಗಿ ಆತ್ಮಹತ್ಯೆಗಳು: ಹಣಮಂತ ಇಟಗಿ



ಮಲ್ಲಮ್ಮ ನುಡಿ ವಾರ್ತೆ
ಓ ರಫೀಕ್ ಪಟೇಲ್

ಯಾದಗಿರಿ:ಡಿ.31: ರಾಜ್ಯದಲ್ಲಿ ಹಾಲಿ ಸರ್ಕಾರದ ಆಡಳಿತ ಬಂದಾಗಿನಿಂದ ಸರಕಾರದಲ್ಲಿರುವವರ ಬೆದರಿಕೆಯ ಕಾರಣಕ್ಕೆ ಸರಣಿ ಆತ್ಮಹತ್ಯೆ ಪ್ರಕರಣಗಳು, ಸರಣಿ ಹಗರಣಗಳು ನಡೆಯುತ್ತಿದ್ದು, ಕಾಂಗ್ರೆಸ್ ರಾಜ್ಯದ ಜನತೆಗೆ ಆತ್ಮಹತ್ಯೆಗಳ ಭಾಗ್ಯ ನೀಡಿದೆ ಎಂದು ಬಿಜೆಪಿ ಜಿಲ್ಲಾ ವಕ್ತಾರ ಹಣಮಂತ ಇಟಗಿ ಆರೋಪಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಗುತ್ತಿಗೆದಾರ ಸಚಿನ್ ಪಾಂಚಾಳ ಅವರು ಆತ್ಮಹತ್ಯೆ ದೇಶಾದ್ಯಂತ ಸುದ್ದಿಯಾಗಿದೆ. ಅವರು ಬರೆದಿಟ್ಟ 7 ಪುಟಗಳ ಡೆತ್ ನೋಟಿನಲ್ಲಿ ಸಚಿವ ಪ್ರಿಯಾಂಕ್ ಖರ್ಗೆಯ ಆಪ್ತ, ರಾಜು ಕಪನೂರನಿಂದ ಕಿರುಕುಳದ ಉಲ್ಲೇಖವಿದೆ.

ಹೀಗಾಗಿ ಸಚಿನ್ ಪಾಂಚಾಳ್ ಆತ್ಮಹತ್ಯೆ ಸಚಿವ ಪ್ರಿಯಾಂಕ್ ಖರ್ಗೆ ಕೃಪಾಪೋಷಿತ ರೌಡಿ, ಅನೇಕರಿಗೆ ಕೊಲೆ ಬೆದರಿಕೆ ಹಾಕಿದ ಪ್ರಕರಣಗಳನ್ನು ಎದುರಿಸುತ್ತಿರುವ ರಾಜು ಕಪನೂರನ ನೇರ ಬೆದರಿಕೆಯಿಂದ ಆಗಿದೆ ಎಂಬುದು ಡೆತ್ ನೋಟ್ ನಿಂದ ದೃಢವಾಗಿದೆ ಎಂದು ಅವರು ಹೇಳಿದರು.

ಮುಡಾ, ವಾಲ್ಮೀಕಿ, ಭೋವಿ ಸೇರಿದಂತೆ ಸಾಲು ಸಾಲು ಹಗರಣಗಳು ಈ ಹಗರಣಗಳಿಗೆ ಅಮಾಯಕರ ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗುವಂತೆ ಮಾಡಿ ಅವರು ಆತ್ಮಹತ್ಯೆ ಮಾಡಿಕೊಂಡ ಘಟನೆಗಳು ಒಂದರ ಮೇಲೆ ಒಂದರಂತೆ ಆಗುತ್ತಿವೆ.

ವಾಲ್ಮೀಕಿ ನಿಗಮದ ವ್ಯವಸ್ಥಾಪಕ ಚಂದ್ರಶೇಖರ ಆತ್ಮಹತ್ಯೆ, ಲಕ್ಷ್ಮಿ ??ೀ ಹೆಬ್ಬಾಳ್ಕರ್ ಪಿಎ ಹೆಸರು ಬರೆದಿಟ್ಟು ರುದ್ರಣ್ಣ ಯಡವಣ್ಣವರ ಆತ್ಮಹತ್ಯೆ, ದಾವಣಗೆರೆಯಲ್ಲಿ ಗುತ್ತಿಗೆದಾರೊಬ್ಬರ ಆತ್ಮಹತ್ಯೆ, ಮಾಗಡಿಯಲ್ಲಿ ಲಾರಿ ಮಾಲಿಕರೊಬ್ಬರು ಲಂಚ ಕೊಡಲಾಗದೆ ಆತ್ಮಹತ್ಯೆ, ಯಾದಗಿರಿ ಶಾಸಕ ಪರಶುರಾಮ್ ಆತ್ಮಹತ್ಯೆ ಆಗಿವೆ ಈದೀಗ ಸಚಿನ್

(2ನೇ ಪುಟ ನೋಡಿ)

## ರಾಷ್ಟ್ರಮಟ್ಟದ ಸ್ಪರ್ಧೆಗಾಗಿ ಸಹನಾ ಕೊಣ್ಣೂರ ಭೂಪಾಲಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31–ತಾಲೂಕಿನ ಶಿರೂರ ಪಟ್ಟಣದ ಸಿದ್ದೇಶ್ವರ ಪ್ರೌಢಶಾಲೆಯ ವಿದ್ಯಾರ್ಥಿನಿ ಸಹನಾ ಸುರೇಶ ಕೊಣ್ಣೂರ ಮಧ್ಯಪ್ರದೇಶದ ಭೂಪಾಲನಲ್ಲಿ ಜ.3 ರಿಂದ ನಡೆಯಲಿರುವ 31 ನೇ ರಾಷ್ಟ್ರಮಟ್ಟದ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾಳೆ.

ಈಚೆಗೆ ಕಲಬುರ್ಗಿಯಲ್ಲಿ ಜರುಗಿದ್ದ ರಾಜ್ಯಮಟ್ಟದ ಮಕ್ಕಳ ವಿಜ್ಞಾನ ಸಮಾವೇಶದಲ್ಲಿ ಭಾಗಿಯಾಗಿ 'ಸಿರಿಧಾನ್ಯಗಳು ಅದ್ಭುತ ಆಹಾರ' ಎಂಬ ಸಂಶೋಧನಾ ಪ್ರಬಂಧ ಮಂಡಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದ ಸಹನಾ ಕೊಣ್ಣೂರ ಈಗ ರಾಷ್ಟ್ರಮಟ್ಟದಲ್ಲಿ ಇದೇ ಪ್ರಬಂಧ ಮಂಡಿಸಲು ಭೂಪಾಲಗೆ ತೆರಳುತ್ತಿದ್ದಾಳೆ.

ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಮಂಡಳಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಭಾರತ ಸರ್ಕಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಇವರ ಸಹಯೋಗದಲ್ಲಿ ಜ.3 ರಿಂದ 6 ರವರೆಗೆ ಭೂಪಾಲನ ಶ್ಯಾಮಲಾ ಹಿಲ್ಸ್ ರವೀಂದ್ರ ಭವನದಲ್ಲಿ ನಡೆಯುವ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಸಹನಾ ಕೊಣ್ಣೂರ ಭಾಗವಹಿಸಲಿದ್ದಾಳೆ ಎಂದು ಮಾರ್ಗದರ್ಶನ ಮಾಡಿದ ಸಿದ್ದೇಶ್ವರ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ ಸಂಜಯ ನಡುವಿನಮನಿ ತಿಳಿಸಿದ್ದಾರೆ.

## ಒಂದನೇ ಪುಟದಿಂದ

## ಕಾಂಗ್ರೆಸ್ ಸರ್ಕಾರದಲ್ಲಿ ಸರಣಿ ಹಗರಣಗಳು;

ಪಾಂಚಾಳ ಆತ್ಮಹತ್ಯೆಯಾಗಿದೆ ಎಂದು ಅವರು ದೂರಿದರು.

ಈದೀಗ ಈ ಆತ್ಮಹತ್ಯೆ ಡೆತ್ ನೋಟ್ ನಲ್ಲಿ ಕಲ್ಬುರ್ಗಿ ಜಿಲ್ಲೆಯ ಹಿಂದು ಸಮಾಜದ ಶ್ರೀಗಳಾದ ಸಿದ್ದಲಿಂಗ ಸ್ವಾಮೀಜಿ, ಬಿಜೆಪಿ ನಾಯಕರಾದ ಶಾಸಕ ಬಸವರಾಜ ಮತ್ತಿಮೂಡ, ಚಂದುಪಾಟೀಲ್ ಚಿತ್ತಾಪೂರದ ಮಣಿಕಂತ ರಾಠೋಡ ಅವರ ಕೊಲೆಗೆ ಮಹಾರಾಷ್ಟ್ರದ ರೌಡಿಗಳಿಗೆ ಸೂಪಾರಿ ಕೊಟ್ಟಿರುವ ಸಂಗತಿ ಬಯಲಾಗಿದೆ. ಈ ಮೂಲಕ ಸರ್ಕಾರ ಆತ್ಮಹತ್ಯೆಗಳನ್ನು ಮಾಡಿಸಲು ಕಾರಣವಾಗಿದ್ದಲ್ಲದೇ ಈದೀಗ ರಾಜಕೀಯ ಪ್ರೇರಿತ ಕೊಲೆಗಳು ಮಾಡಿಸಲು ಮುಂದಾಗಿರುವುದು ಅತ್ಯಂತ ನೀಚ ಸ್ಥರಕ್ಕೆ ಇಳಿಯುತ್ತಿದೆ ಎನ್ನಲು ಇದಕ್ಕಿಂತ ಬೇರೆ ಸಾಕ್ಷಿ ಬೇಕಿಲ್ಲ.

ಒಟ್ಟಾರೆ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಈ ಸರ್ಕಾರ ಆತ್ಮಹತ್ಯೆಗಳನ್ನು, ಕೊಲೆಗಳನ್ನು ಮಾಡಿಸಲೆಂದೇ ಕುಳಿತಿದೆ ಎಂಬುದು ಸ್ಪಷ್ಟವಾಗಿದೆ ಎಂದು ಆರೋಪಿಸಿದ ಅವರು, ಕೂಡಲೇ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ಪಡೆಯಬೇಕು ಎಂದು ಒತ್ತಾಯಿಸಿದರು.

ಕಲ್ಬುರ್ಗಿ ಜಿಲ್ಲೆಯಲ್ಲಿ ಈಗಾಗಲೇ ಅನೇಕ ಆತ್ಮಹತ್ಯೆ, ಕೊಲೆ ಪ್ರಕರಣಗಳು ನಡೆದಿವೆ. ಅವನ್ನು ಮುಚ್ಚಿ ಹಾಕಿದ ಷಡ್ಯಂತ್ರ ಹಿಂದೆ ನಡೆದಿವೆ. ನಡೆಯುತ್ತಲೇ ಇವೆ. ಈದೀಗ ಕಾಂಗ್ರೆಸ್ಸಿನವರು ಸಚಿನ್ ಪಾಂಚಾಳರ ಕುಟುಂಬದವರನ್ನು ಬೆಳಗಿನ ಜಾವ 3 ಗಂಟೆಗೆ ಭೇಟಿ ಕೊಟ್ಟದ್ದು ಅವರನ್ನು ಓಲೈಕೆ ಮಾಡಿ ಪ್ರಕರಣ ಮುಚ್ಚಿಹಾಕಲು ಯತ್ನಿಸಿದ್ದು, ಅದು ಸಾಧ್ಯವಾಗದಿದ್ದಾಗ ಮತ್ತೆ ಅವರ ಕುಟುಂಬದಲ್ಲಿರುವ ಹೆಣ್ಣುಮಕ್ಕಳಿಗೆ ಬೆದರಿಕೆ ಹಾಕುತ್ತಾರೆ. ಗುಲ್ಬರ್ಗದ ಪೊಲೀಸ್ ಇಲಾಖೆ ಖರ್ಗೆ ಮತ್ತು ಕುಟುಂಬದ ಕಪಿಮುಷ್ಟಿಯೊಳಗಿದೆ ಎಂದು ಆರೋಪಿಸಿದರು.

ಹಿಂದೆ, ಇದೇ ಸರಕಾರದ ಸಚಿವ ನಾಗೇಂದ್ರ ಅವರೂ ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ರಾಜೀನಾಮೆ ಕೊಟ್ಟಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಂದು ಕ್ಷಣವೂ ತಡ ಮಾಡದೆ. ಪ್ರಿಯಾಂಕ ಖರ್ಗೆಯವರ ರಾಜೀನಾಮೆ ಪಡೆದುಕೊಳ್ಳಲಿ. ಯಾವುದೋ ನೆಪ ಮಾಡಿ, ರಕ್ಷಿಸುವ ದುಸ್ಸಾಹಸ ಬೇಡ ಎಂದು ಅವರು ಹೇಳಿದರು.

ರಾಜ್ಯಾದ್ಯಕ್ಷರಿಂದ ಸಂತ್ರಸ್ತರ ಮನೆಗೆ ಭೇಟಿ, ಕಾಂಗ್ರೆಸ್ ನಿಂದ ಮದ್ಯರಾತ್ರಿ ಭೇಟಿ ಧಮಕಿ:

ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ವಿಪಕ್ಷ ನಾಯಕ ನಾರಾಯಣಸ್ವಾಮಿ, ವಿಧಾನಪರಿಷತ್ ಸದಸ್ಯರು, ಸ್ಥಳೀಯ ಶಾಸಕರು, ಪಕ್ಷದ ಜಿಲ್ಲಾ ಅಧ್ಯಕ್ಷರು, ಭಾಲ್ಕಿ ತಾಲ್ಲೂಕಿನ ಮೃತರ ಗ್ರಾಮಕ್ಕೆ ಭೇಟಿ ಕೊಟ್ಟಿದ್ದಾರೆ. ಸಚಿನ್ ಅವರ ಕುಟುಂಬವನ್ನು ಭೇಟಿ ಮಾಡಿದ್ದಾರೆ. ಆ ಹಿಂದುಳಿದ ವರ್ಗದ ಬಡ ಕುಟುಂಬದಲ್ಲಿ ಸಚಿನ್‌ಗೆ 5 ಜನರು ಸಹೋದರಿಯರಿದ್ದಾರೆ. ಬಡ ಕುಟುಂಬಕ್ಕೆ ಆರ್ಥಿಕವಾಗಿ ನೆರವು ನೀಡಬೇಕು ಮತ್ತು ಪ್ರಕರಣ ಸಿಬಿಐ ತನಿಖೆಗೆ ಒಪ್ಪಿಸಬೇಕು ಏಕೆಂದರೆ ಸಚಿನ್ ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿಕೊಂಡಿದ್ದಾಗ ಅವರ ಇಬ್ಬರು ಸಹೋದರಿಯರಾದ ಸವಿತಾ, ಸುನೀತಾ ಮಧ್ಯಾಹ್ನವೇ 2.15ಕ್ಕೆ ಪೊಲೀಸ್ ಠಾಣೆಗೆ ಧಾವಿಸಿದ್ದರು. ಗೋಗರೆದು ಪ್ರಾಣ ಉಳಿಸಲು ಕೋರಿದರೆ, ಅವರ ಮನವಿಯನ್ನು ಕಿಂಚಿತ್ತೂ ಲೆಕ್ಕಿಸದೆ, ಪಿಎಸ್ಐ ಅಮಾನವೀಯವಾಗಿ ನಡೆದುಕೊಂಡಿದ್ದಾರೆ. ದೂರಿನ ಸಂಬಂಧ ಅವರನ್ನು ಪೊಲೀಸ್ ಸ್ಟೇಷನ್ ಗಳಿಗೆ ತಿರುಗಾಡಿಸಿದ್ದರು.

ಕೊಟ್ಟ ದೂರು ಸ್ವೀಕರಿಸಿಲ್ಲ: ಸಚಿನ್ ಹುಡುಕುವ ಕೆಲಸವನ್ನೂ ಮಾಡಿಲ್ಲ:

ಸಚಿನ್ ಆತ್ಮಹತ್ಯೆ ಪೋಸ್ಟ್ ಮಾಡಿದ ನಂತರ ಕುಟುಂಬದವರು ದೂರು ನೀಡಲು ಹೋದರೂ ಅಮಾನವೀಯವಾಗಿ ವರ್ತಿಸಿದ್ದಾರೆ. ಪೊಲೀಸ್ ಅಧಿಕಾರಿಗಳ ವರ್ತನೆಯು ಮೃಗೀಯವಾಗಿದೆ ಎಂದು ದೂರಿದರು.

**ಬಿಜೆಪಿ ಮುಖಂಡರ ಕೊಲೆಗೆ ಸಂಚು:**

ಹಿಂದೂ ಸಮಾಜದ ಸಿದ್ದಲಿಂಗ ಸ್ವಾಮೀಜಿ, ಶಾಸಕ ಬಸವರಾಜ ಮತ್ತಿಮೂಡ, ಕಲಬುರ್ಗಿಯ ಬಿಜೆಪಿ ನಾಯಕರಾದ ಚಂದುಪಾಟೀಲ, ಮಣಿಕಂತ ರಾಠೋಡ್ ಅವರ ಕೊಲೆಗೆ ಸಂಚು ರೂಪಿಸಿದ್ದಾಗಿ ಡೆತ್ ನೋಟ್ ತಿಳಿಸಿದೆ. ಸಿದ್ದಲಿಂಗ ಸ್ವಾಮೀಜಿ ಅವರ ಧ್ವನಿ ಅಡಗಿಸಲು ಮಹಾರಾಷ್ಟ್ರದ ಸುಪಾರಿ ಕಿಲ್ಲರ್‌ಗಳನ್ನು ಬಳಸುವ ವಿಚಾರವೂ ಡೆತ್ ನೋಟಿನಲ್ಲಿದೆ. ಎಲ್ಲ ರೀತಿಯಿಂದಲೂ ರಾಜ್ಯದ ಅತ್ಯಂತ ಶಕ್ತಿಶಾಲಿ ಖರ್ಗೆ ಕುಟುಂಬದ ವಿರುದ್ಧ ತನಿಖೆ ಮಾಡಲು ಪೊಲೀಸ್ ಇಲಾಖೆಯಿಂದ ಸಾಧ್ಯವಿಲ್ಲ. ಹಾಗಾಗಿ ಇದೊಂದು ಗಂಭೀರ ವಿಚಾರ. ಆದ್ದರಿಂದ ಇದರ ಸಿಬಿಐ ತನಿಖೆ ಅತ್ಯಗತ್ಯವಾಗಿದೆ ಎಂದು ಹೇಳಿದರು.


ಸುದ್ದಿಗೋಷ್ಠಿಯಲ್ಲಿ ನಗರಸಭೆ ಅಧ್ಯಕ್ಷೆ ಕು. ಲಲಿತಾ ಅನಪೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪರಶುರಾಮ ಕುರಕುಂದಿ, ಮಾಧ್ಯಮ ಸಹ ಸಂಚಾಲಕ ಚಂದ್ರಶೇಖರ ಕಡೇಸೂರ ಇದ್ದರು.


## ಹೊಸ ವರ್ಷದಲ್ಲಾದರೂ ಅರ್ಹರಿಗೆ ಸ್ಥಾನ ಸಿಗಲಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎರಡನೇ ಬಾರಿಗೆ ಮುಖ್ಯಮಂತ್ರಿ ಆಗಿದ್ದಾರೆ. ಯಾವುದೇ ಕಪ್ಪು ಚುಕ್ಕೆ ಇಲ್ಲದೇ ಉತ್ತಮ ಆಡಳಿತ ನಡೆಸುತ್ತಿದ್ದಾರೆ. ಅಹಿಂದ ಮುಖ್ಯಮಂತ್ರಿಯಾಗಿ ತಮ್ಮ ಈ ಅಧಿಕಾರಾವಧಿಯಲ್ಲಿ ಹಿಂದುಳಿದ, ಶೋಷಿತ ಸಮುದಾಯಗಳ ಸಮಾಜ ಸೇಕವರು, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ ಖಾಲಿ ಇರುವ ನಿಗಮ, ಮಂಡಳಿಗಳಿಗಳ ಪದಾಧಿಕಾರಿಗಳ ಸ್ಥಾನವನ್ನು ಭರ್ತಿ ಮಾಡಬೇಕು. ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಆ ಮೂಲಕ ಸಾಮಾಜಿಕ ನ್ಯಾಯ ನೀಡುತ್ತಾರೆಂಬ ನಿರೀಕ್ಷೆಯಲ್ಲಿದ್ದೇವೆ ಎಂದು ಅವರು ತಿಳಿಸಿದ್ದಾರೆ. ಹೊಸ ವರ್ಷದ ಈ ಸಂದರ್ಭದಲ್ಲಿ ಎಲ್ಲರಿಗೂ ಶುಭ ಕೋರಿದ ಅವರು ದೈವೀ ಅನುಗ್ರಹದಿಂದ ಎಲ್ಲ ಸಮುದಾಯದ ಜನರಲ್ಲಿ ಸುಖ, ಶಾಂತಿ, ನೆಮ್ಮದಿಗಳು ಲಭಿಸಲಿ. ವಿಶೇಷವಾಗಿ ಬೀದರ್ ಜಿಲ್ಲೆಯ ಉಸ್ತುವಾರಿ ಮಂತ್ರಿಗಳು, ಅರಣ್ಯ ಸಚಿವರಾದ ಈಶ್ವರ್ ಖಂಡ್ರೆ, ಪೌರಾಡಳಿತ ಸಚಿವರಾದ ರೆಹಮಾನ್ ಖಾನ್, ಮಾಜಿ ಸಚಿವರಾದ ರಾಜಶೇಖರ್ ಪಾಟೀಲ್ ಮತ್ತು ಸಚಿವ ಸಂಪುಟದ ಎಲ್ಲ ಮಾನ್ಯರು ತಮ್ಮ ಬೇಡಿಕೆ ಈಡೇರಿಸುತ್ತಾರೆಂಬ ನಂಬಿಕೆ ಇದೆ ಎಂದು ಅವರು ತಿಳಿಸಿದ್ದಾರೆ.

## ಹಲಬರ್ಗಾದ ರಾಚೋಟೇಶ್ವರ ಸಂಸ್ಥಾನ ಮಠದಲ್ಲಿ ಮನೆ ಮಾಡಿದ ಸಂಭ್ರಮ

## ಸಿದ್ಧರಾಮೇಶ್ವರ ಜಾತ್ರೆ, ದ್ವಾದಶ ಪಟ್ಟಾಧಿಕಾರ ಮಹೋತ್ಸವ ಇಂದಿನಿಂದ











**ಹಾವಗಿಲಿಂಗೇಶ್ವರ**

**ಶ್ರೀ ನಾಲ್ಕನೇ ಪೀಠಾಧಿಪತಿ**

ಐನೂರು ವರ್ಷಗಳ ಇತಿಹಾಸದ ರಾಚೋಟೇಶ್ವರ ಮಠಕ್ಕೆ ಈವರೆಗೆ ನಾಲ್ವರು ಪೀಠಾಧಿಪತಿಗಳಾಗಿದ್ದಾರೆ. ಹಾವಗಿಲಿಂಗೇಶ್ವರ ಶಿವಾಚಾರ್ಯರು ನಾಲ್ಕನೆಯವರು.

ಮಠ ಸ್ಥಾಪಿಸಿದ ರಾಚೋಟೇಶ್ವರರು ಮೊದಲ ಪೀಠಾಧಿಪತಿ. ಅವರು ಮಠಕ್ಕೆ ಬಂದ ಭಕ್ತರ ಸಂಕಷ್ಟ ಪರಿಹರಿಸುತ್ತಿದ್ದರು. ಮಳೆ ಬಾರದಿದ್ದಾಗ ಅನುಷ್ಠಾನದ ಮೂಲಕ ವರುಣನ ಕೃಪೆ ಆಗುವಂತೆ ಮಾಡುತ್ತಿದ್ದರು.

ಎರಡನೇ ಪೀಠಾಧಿಪತಿಯಾಗಿದ್ದ ಸಿದ್ಧರಾಮೇಶ್ವರರು ಬರಗಾಲದ ಕಾರಣ ಗ್ರಾಮದಲ್ಲಿ ನೀರಿಗೆ ಹಾಹಾಕಾರ ಉಂಟಾದಾಗ, ತಮ್ಮ ಕೈಯ್ಯಾರೆ ಬಾವಿ ತೋಡಿ, ಜನರ ಬಾಯಾರಿಕೆ ನೀಗಿಸಿದ್ದರು. ಆ ಬಾವಿಯಲ್ಲಿ ಇಂದಿಗೂ ನೀರಿನ ಸೆಲೆ ಬತ್ತಿಲ್ಲ. ನಂತರ ಅಧಿಕಾರ ವಹಿಸಿಕೊಂಡವರು ಕರಿಬಸವೇಶ್ವರ ಶಿವಯೋಗಿಗಳು. ಹಾಲಿ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ತಮ್ಮ ಗುರುಗಳ ಮಾರ್ಗದರ್ಶನದಲ್ಲಿ ಸಮಾಜೋಧಾರ್ಮಿಕ ಕಾರ್ಯಗಳಲ್ಲಿ ನಿರತರಾಗಿದ್ದಾರೆ. ಮಠವನ್ನು ಮಾದರಿಯಾಗಿ ರೂಪಿಸಿದ ಶ್ರೇಯ ಅವರದ್ದಾಗಿದೆ.

**ಆಧ್ಯಾತ್ಮಿಕ ಚಟುವಟಿಕೆ ತಾಣ ಹಲಬರ್ಗಾ ಮಠ**

ಹಲಬರ್ಗಾ ಗ್ರಾಮದ ರಾಚೋಟೇಶ್ವರ ಸಂಸ್ಥಾನ ಮಠದ ಆಧ್ಯಾತ್ಮಿಕ ಚಟುವಟಿಕೆಗಳ ತಾಣವಾಗಿದೆ.

12 ವರ್ಷಗಳ ಹಿಂದೆ ಕಿರಿದಾಗಿದ್ದ ಮಠ ಹಾವಗಿಲಿಂಗೇಶ್ವರ ಶ್ರೀಗಳ ಸಂಕಲ್ಪ ಹಾಗೂ ಪರಿಶ್ರಮದಿಂದಾಗಿ ವಿಶಾಲ ಮಠವಾಗಿ ಬದಲಾಗಿದೆ. ಸುತ್ತಮುತ್ತಲಿನ ಗ್ರಾಮಗಳಲ್ಲಿ ಮಾದರಿ ಮಠವಾಗಿ ಗಮನ ಸೆಳೆಯುತ್ತಿದೆ.

ಶ್ರೀ ಸೋಮೇಶ್ವರ ನಿವಾಸ ಹಾಗೂ ಹಾನಗಲ್ ಕುಮಾರ ಶಿವಯೋಗಿಗಳ ನೂತನ ಮೂರ್ತಿ ಮಠಕ್ಕೆ ಹೊಸ ಸೇರ್ಪಡೆಯಾಗಿವೆ.

ಮಠದ ನೆಲಮಾಳಿಗೆಯಲ್ಲಿ ರಾಚೋಟೇಶ್ವರ, ಕುಮಾರ ಶಿವಯೋಗಿಗಳ ಮೂರ್ತಿಗಳಿವೆ. ಶಿವನ ಮೂರ್ತಿ ಒಳಗೊಂಡ ಅಂದದ ಉದ್ಯಾನವೂ ಇದೆ.

ಮೊದಲ ಮಹಡಿಯಲ್ಲಿ ಆಧ್ಯಾತ್ಮಿಕ ಧ್ಯಾನ ಮಂದಿರ ಇದೆ. ಎರಡನೇ ಮಹಡಿಯಲ್ಲಿ ಸುಸಜ್ಜಿತ ಶ್ರೀ ಸೋಮೇಶ್ವರ ನಿಲಯವಿದೆ.

ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 31 : ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದ ರಾಚೋಟೇಶ್ವರ ಸಂಸ್ಥಾನ ಮಠದಲ್ಲಿ ಜ. 1 ರಿಂದ 11 ರ ವರೆಗೆ ಸಿದ್ಧರಾಮೇಶ್ವರ ನಮ್ಮೂರ 12ನೇ ಜಾತ್ರೆ ಹಾಗೂ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರ ದ್ವಾದಶ ಪಟ್ಟಾಧಿಕಾರ ಮಹೋತ್ಸವ ಹಮ್ಮಿಕೊಳ್ಳಲಾಗಿದೆ.

ಜಾತ್ರೆ ಪ್ರಯುಕ್ತ ಮಠದಲ್ಲಿ ನಿತ್ಯ ರಾಚೋಟೇಶ್ವರ ಕತ???? ಗದ್ದುಗೆಗೆ ರುದ್ರಾಭಿಷೇಕ ಪೂಜೆ, ಸಂಜೆ ಸುಮಂಗಲೆಯರಿಂದ ಗಂಗಾ ಪೂಜೆ, ರಾತ್ರಿ ಧರ್ಮಸಭೆ ಹಾಗೂ ಅನ್ನ ದಾಸೋಹ ನಡೆಯಲಿದೆ.

ಬುಧವಾರ ರಾತ್ರಿ 8ಕ್ಕೆ ನಡೆಯುವ ಸಮಾರಂಭದಲ್ಲಿ ಸಂಸದ ಸಾಗರ್ ಖಂಡ್ರೆ ಜಾತ್ರೆಯನ್ನು ಉದ್ಘಾಟಿಸಲಿದ್ದಾರೆ. ಹಾನಗಲ್ ಕುಮಾರ ಶಿವಯೋಗಿಗಳ ನೂತನ ಮೂರ್ತಿಯ ಅನಾವರಣವನ್ನೂ ಮಾಡಲಿದ್ದಾರೆ. ಭಾತಂಬ್ರಾದ ಶಿವಯೋಗೀಶ್ವರ ಸ್ವಾಮೀಜಿ ಸಾನಿಧ್ಯ ಹಾಗೂ ಹಾವಗಿಲಿಂಗೇಶ್ವರ ಶಿವಾಚಾರ್ಯ ನೇತೃತ್ವ ವಹಿಸಲಿದ್ದಾರೆ.

ಜ. 7 ರಂದು ಬೆಳಿಗ್ಗೆ 9.30ಕ್ಕೆ ಹುಲಸೂರಿನ ಶಿವಾನಂದ ಸ್ವಾಮೀಜಿ ಸಾನಿಧ್ಯದಲ್ಲಿ ಜರುಗುವ ಕಾರ್ಯಕ್ರಮದಲ್ಲಿ ದ್ವಾದಶ ಪಟ್ಟಾಧಿಕಾರ ಮಹೋತ್ಸವಕ್ಕೆ ಚಾಲನೆ ಸಿಗಲಿದೆ. ರಾತ್ರಿ 9.30ಕ್ಕೆ ಮಠದಲ್ಲಿ ನಿರ್ಮಿಸಿದ ನೂತನ ಶ್ರೀ ಸೋಮೇಶ್ವರ ನಿವಾಸವನ್ನು ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು ಉದ್ಘಾಟಿಸಲಿದ್ದಾರೆ.

ಜ. 8 ರಂದು ಬೆಳಿಗ್ಗೆ 10ಕ್ಕೆ ರಂಭಾಪುರಿ ಜಗದ್ಗುರುಗಳ ಸಾನಿಧ್ಯದಲ್ಲಿ ಹಾವಗಿಲಿಂಗೇಶ್ವರ ಶ್ರೀಗಳ ದ್ವಾದಶ ಪಟ್ಟಾಧಿಕಾರ ಮಹೋತ್ಸವ, ಬೆಳಿಗ್ಗೆ 11.30ಕ್ಕೆ ಧರ್ಮಸಭೆ ಜರುಗಲಿದೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸಭೆಯನ್ನು ಉದ್ಘಾಟಿಸಲಿದ್ದಾರೆ.

ಜ.9 ರಂದು ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ, ಜ. 10 ರಂದು ದ್ವಾದಶ ಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಮಠದ ಶ್ರೀಗಳ ಪೀಠಾರೋಹಣ ಹಾಗೂ ಬೆಳ್ಳಿ ಕಿರೀಟ ಧಾರಣೆ ನಡೆಯಲಿದೆ.

ಜ. 11 ರಂದು ಬೆಳಿಗ್ಗೆ 10.30ಕ್ಕೆ ಗ್ರಾಮದಲ್ಲಿ 12 ಪೂಜ್ಯರ ಮೆರವಣಿಗೆ ಜರುಗಲಿದೆ. ನಂತರ ಮಂಟಪ ಪೂಜೆ ನಡೆಯಲಿದೆ. ಅನಂತರ ಧರ್ಮಸಭೆ ಜರುಗಲಿದ್ದು, ಮಠಾಧೀಶರು, ಗಣ್ಯರು ಪಾಲ್ಗೊಳ್ಳಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅಧ್ಯಕ್ಷತೆ ವಹಿಸಲಿದ್ದಾರೆ.

ಜಾತ್ರೆಯ ಅಂಗವಾಗಿ ಮಠಕ್ಕೆ ಸುಣ್ಣ, ಬಣ್ಣ ಬಳಿಯಲಾಗಿದೆ. ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ. ಗ್ರಾಮದಲ್ಲಿ ಜಾತ್ರೆಯ ಸಂಭ್ರಮ ಮನೆ ಮಾಡಿದೆ.

# ತಾಳಿಕೋಟಿ ಬಂದ ಸಂಪೂರ್ಣ ಯಶಸ್ವಿ




ತಾಳಿಕೋಟಿ:ಡಿ.31:ಡಾ.ಬಿ.ಆರ್. ಅಂಬೇಡ್ಕರ್ ಅವರ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಸಂಸತ್ತಿನಲ್ಲಿ ನೀಡಿರುವ ಅವಮಾನಕರ ಹೇಳಿಕೆಯನ್ನು ಖಂಡಿಸಿ ಮಂಗಳವಾರ ವಿವಿಧ ದಲಿತ ಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ಕರೆ ಕೊಟ್ಟಿದ್ದ ತಾಳಿಕೋಟಿ ಬಂದ್ ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಪಟ್ಟಣದಲ್ಲಿ ಬೆಳಿಗ್ಗೆ 8 ಗಂಟೆಯಿಂದ ಸಂಜೆ 6:00 ವರೆಗೆ ಎಲ್ಲಾ ವ್ಯಾಪಾರ ವಹಿವಾಟಗಳು, ಸರ್ಕಾರಿ ಖಾಸಗಿ ಶಾಲಾ ಕಾಲೇಜುಗಳು ಮುಚ್ಚಲ್ಪಟ್ಟಿದ್ದವು. ಆಸ್ಪತ್ರೆ ಔಷಧ ಅಂಗಡಿ ವೈದ್ಯಕೀಯ ಸೇವೆಗಳು ಎಂದಿನಂತೆ ಕಾರ್ಯನಿರ್ವಹಿಸಿದವು. ಇಡೀ ಪಟ್ಟಣ ಸ್ತಬ್ಧಗೊಂಡು ಬಂದ್ ಸಂಪೂರ್ಣ ಯಶಸ್ವಿ ಯಾಯಿತು. ಸಂಜೆ 6:00 ಘಂಟೆ ಬಳಿಕ ಮತ್ತೆ ಎಲ್ಲಾ ವ್ಯಾಪಾರ ವಹಿವಾಟಗಳು ಆರಂಭವಾಗಿ ಪಟ್ಟಣ ಮತ್ತೆ ಸಹಜ ಸ್ಥಿತಿಗೆ ಮರಳಿತು. ಮುಂಜಾನೆ ಇಂದಲೇ ಅಂಬೇಡ್ಕರ್ ಭವನದ ಹತ್ತಿರ ನೂರಾರು ಸಂಖ್ಯೆಯಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಕೈಯಲ್ಲಿ ಡಾ.ಅಂಬೇಡ್ಕರ್ ಅವರ ಭಾವಚಿತ್ರದ ಪ್ಲೇ ಕಾರ್ಡ್ ಹಿಡಿದುಕೊಂಡು ಶ್ರೀ ಬಸವೇಶ್ವರ ವೃತ್ತದಲ್ಲಿ ಘೋಷಣೆಗಳನ್ನು ಕೂಗಿದರು. ಅಮಿತ್ ಶಾ ಅವರ ಅಣಕು ಶವ ಯಾತ್ರೆಯನ್ನು ನಡೆಸಿ ಪ್ರತಿಭಟನಾಕಾರರು ಎಲ್ಲರ ಗಮನ ಸೆಳೆದರು. ಅಲ್ಲಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಅಂಬೇಡ್ಕರ್ ಸರ್ಕಲ್, ಅಂಬಾಭವಾನಿ ಮಂದಿರ, ಕತ್ರಿ ಬಜಾರ್, ಶಿವಾಜಿ ಸರ್ಕಲ್, ಮಹಾರಾಣಾ ಪ್ರತಾಪ ಸಿಂಹ ಸರ್ಕಲ್, ಬಸ್ ನಿಲ್ದಾಣ ಮಾರ್ಗವಾಗಿ ಮತ್ತೇ ಬಸವೇಶ್ವರ ವೃತ್ತಕ್ಕೆ ತಲುಪಿ ಅಲ್ಲಿ ಬಹಿರಂಗ ಸಭೆಯಾಗಿ ಮಾರ್ಪಟ್ಟಿತು. ಅಲ್ಲಿ ಪ್ರತಿಭಟನಾಕಾರರು ಅಮಿತ್ ಶಾ ಅವರ ಪ್ರಕೃತಿ ಧಹಿಸಿ ಟೈರ್ ಸುಟ್ಟು ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು. ಬಹಿರಂಗ ಸಭೆಯಲ್ಲಿ ಮಾತನಾಡಿದ ಯುವ ಮುಖಂಡ ಜೈ ಭೀಮ್ ಮುತ್ತಗಿ ಅವರು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಕೇಂದ್ರ ಸಚಿವ ಅಮಿತ್ ಶಾ ದಲಿತ ವಿರೋಧಿ ಮಾತ್ರವಲ್ಲ ಸಂವಿಧಾನ ವಿರೋಧಿ ವ್ಯಕ್ತಿ, ಅವರ ಈ ಉದ್ಧಟತನವನ್ನು ದಲಿತ ಸಮುದಾಯ ಎಂದೂ ಸಹಿಸುವುದಿಲ್ಲ, ಅವರ ಈ ಹೇಳಿಕೆಯನ್ನು ಜಿಲ್ಲೆಯ ಸಂಸದರಾಗಲಿ ಅಥವಾ ಇತರ ಜನ ಪ್ರತಿನಿಧಿಗಳಾಗಲಿ ಖಂಡಿಸದೆ ಇರುವುದು ದುಃಖದ ಸಂಗತಿ ಇದರ ಉತ್ತರವನ್ನು ನಾವು ಬರಲಿರುವ ದಿನಗಳಲ್ಲಿ ನೀಡುತ್ತೇವೆ ಎಂದ ಅವರು ಪ್ರಧಾನ ಮಂತ್ರಿ ಮೋದಿಯವರು ಇಲ್ಲಿವರೆಗೆ ಅವರ ರಾಜೀನಾಮೆಯನ್ನು ಪಡೆಯದೆ ಇರುವುದು ಇವರಿಗೆ ಸಂವಿಧಾನದ ಮೇಲೆ ನಂಬಿಕೆ ಇಲ್ಲ ಎಂದು ತೋರಿಸುತ್ತದೆ, ಆದಷ್ಟು ಬೇಗ ಅವರ ರಾಜಿನಾಮೆ ಪಡೆದು ಅವರನ್ನು ಸಚಿವ ಸಂಪುಟದಿಂದ ವಜಾ ಗೊಳಿಸಬೇಕು, ಅವರ ಸಂಸತ್ ಸದಸ್ಯತ್ವವನ್ನೂ ರದ್ದುಗೊಳಿಸಬೇಕು ಹಾಗೂ ಅಮಿತ್ ಶಾ ಅವರು ಇಡೀ ದೇಶದ ಜನತೆಗೆ ಕ್ಷಮೆ ಯಾಚಿಸಬೇಕು ಅವರು ಹೀಗೆ ಮಾಡದೇ ಹೋದರೆ ಮುಂದಿನ ದಿನಗಳಲ್ಲಿ ಇದಕ್ಕಿಂತಲೂ ಉಗ್ರವಾದ ಹೋರಾಟವನ್ನು ನಾವು ನಡೆಸಬೇಕಾಗುತ್ತದೆ ಎಂದ ಅವರು ಇಂದಿನ ಬಂದ್ ಯಶಸ್ವಿಗೆ ಸಹಕರಿಸಿದ ಪಟ್ಟಣದ ಸರ್ವ ಸಮಾಜದ ಗಣ್ಯರಿಗೆ ಹಾಗೂ ಸೂಕ್ತ ಪೊಲೀಸ್ ಬಂದೋಬಸ್ತ್ ಕಲ್ಪಿಸಿದ ಪೊಲೀಸ್ ಇಲಾಖೆಗೂ ಒಕ್ಕೂಟವು ಋಣಿಯಾಗಿದೆ ಎಂದರು. ಇದೇ ಸಂದರ್ಭದಲ್ಲಿ ಡಿಎ???ಸ್ (ನಾಗವಾರ) ಬಣದ ರಾಜ್ಯ ಸಂಚಾಲಕ ಲಕ್ಷ್ಮಿನಾರಾಯಣ ಅವರು ನಿಧನರಾದ ಹಿನ್ನಲೆ ಅವರಿಗೆ ಒಕ್ಕೂಟದ ವತಿಯಿಂದ ಒಂದು ನಿಮಿಷದ ಮೌನ ಆಚರಿಸಿ ಶ್ರದ್ಧಾಂಜಲಿ ಅರ್ಪಿಸಲಾಯಿತು. ನಂತರ ತಹಸಿಲ್ದಾರ್ ಕೀರ್ತಿ ಚಾಲಕ್ ಅವರ ಮುಖಾ ಗೌರವಾನ್ವಿತ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು. ಈ ಸಮಯದಲ್ಲಿ ವಿವಿಧ ದಲಿತ ಪರ ಸಂಘಟನೆಗಳ ಒಕ್ಕೂಟದ ಗೌರವ ಅಧ್ಯಕ್ಷರಾದ ಎಸ್.ಬಿ.ಕಟ್ಟಿಮನಿ, ಅಧ್ಯಕ್ಷ ಮುತ್ತಪ್ಪ ಚಮಲಾಪೂರ, ಉಪಾಧ್ಯಕ್ಷ ಬಸವರಾಜ ಕಟ್ಟಿಮನಿ, ಪ್ರಧಾನ ಕಾರ್ಯದರ್ಶಿ ದೇವೇಂದ್ರ ಹಾದಿಮನಿ, ಕಾರ್ಯದರ್ಶಿ ನಾಗೇಶ್ ಕಟ್ಟಿಮನಿ, ಮಹೇಶ ಚಲವಾದಿ, ಹಣಮಂತ ಕೊಡಗಾನೂರ, ಸಿದ್ದು ಬಾರಿಗಿಡದ, ಮುಸ್ಲಿಂ ಸಮಾಜದ ಮುಖಂಡ ಅಲ್ಲಾಭಕ್ಷ ನವಾಜ ಕಟ್ಟಿ, ಎಂ.ಆರ್. ಮಕಾನದಾರ, ಮೋದಿನಸಾನ ಗಾರ್ಜಿ, ಗುರುರಾಜ ಗುಡಿಮನಿ, ಶಾಂತಪ್ಪತಮ್ಮದಡ್ಡಿ, ರವಿ ಕಟ್ಟಿಮನಿ, ಗುರುಪ್ರಸಾದ್ ಗೊಟಖಂಡಕಿ, ಕಾಶಿನಾಥ ಕಾರಗನೂರ, ಗೋಪಾಲ್ ಕಟ್ಟಿಮನಿ ರಾಮಣ್ಣ ಕಟ್ಟಿಮನಿ, ಬಸವರಾಜ ಬಳಗಾನೂರ, ಬಾಬು ಮಿಣಜಗಿ ಹಾಗೂ ತಾಲೂಕಿನ ದಲಿತ ಸಮಾಜದ ಮುಖಂಡರು ಹಿರಿಯರು ಇದ್ದರು. ಸೂಕ್ತ ಪೊಲೀಸ್ ಬಂದೋಬಸ್ತ್: ಬಂದ್ ಸಮಯದಲ್ಲಿ ಯಾವುದೇ ಅಹಿತಕರ ಘಟನೆ ನಡೆದಂತೆ ನೋಡಿಕೊಳ್ಳಲು ಡಿವೈಎಸ್ಪಿ ಬಲ್ಲಪ್ಪ ನಂದಗಾಂವಿ ಇವರ ಮಾರ್ಗದರ್ಶನದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿತ್ತು.

# ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರಕ್ಕೆ ಚಾಲನೆ



ಕಲಬುರಗಿ:ಡಿ.31: ಸರ್ಕಾರಿ ಪದವಿ ಪೂರ್ವ ಕಾಲೇಜು( ಎಂಪಿಎಚ್‌ಎಸ್ ) ಸೂಪರ್ ಮಾರ್ಕೆಟ್ ಕಲಬುರಗಿ ಇಲ್ಲಿನ ಎನ್‌ಎಸ್‌ಎಸ್ ಘಟಕದ ವತಿಯಿಂದ ಜ್ಯೋತಿಬಾಪುಲೆ ವೇದಿಕೆಯಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರವನ್ನು ಉಪ ನಿರ್ದೇಶಕರಾದ ಅಶೋಕ್ ಶಾಸ್ತ್ರಿ ಅವರು ಉದ್ಘಾಟಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ಪ್ರಾಂಜಲ ಮನಸ್ಸಿನಿಂದ ಯಾವುದೇ ಕೆಲಸದಲ್ಲಾದರೂ ಕಾರ್ಯನಿರತರಾಗಬೇಕು ಮತ್ತು ಶಿಕ್ಷಣದ ಜೊತೆಗೆ ಸಮಾಜಮುಖಿ ಸೇವೆ ಮಾಡಬೇಕೆಂದರು. ಕಲಬುರಗಿ ವಿಭಾಗೀಯ ಎನ್‌ಎಸ್‌ಎಸ್ ಅಧಿಕಾರಿಗಳಾದ ಡಾ. ಚಂದ್ರಶೇಖರ್ ದೊಡ್ಡಮನಿ ಮಾತನಾಡಿ ವಿದ್ಯಾರ್ಥಿಗಳು ಜಾತ್ಯಾತೀತ ಮತ್ತು ವೈಚಾರಿಕ ವಿಚಾರಗಳನ್ನು ಮೈಗೂಡಿಸಿಕೊಂಡು ವಿಶ್ವಮಾನವರಾಗಬೇಕೆಂದರು. ಶ್ರಮದಾನ ಶಿಬಿರದಲ್ಲಿ ಎಲ್ಲಾ ವಿದ್ಯಾರ್ಥಿಗಳು ಸ್ವ ಇಚ್ಛೆಯಿಂದ ಶ್ರಮದಾನ ಮಾಡುವುದರ ಮೂಲಕ ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಲು ಸಾಧ್ಯವಾಗುತ್ತದೆ ಹಾಗೂ ಸೇವಾ ಮನೋಭಾವನೆ ಮೂಡುತ್ತದೆ ಎಂದು ನುಡಿದರು. ಮಾನ್ಯ ಶ್ರೀ ರವೀಂದ್ರ ಉಪಾಧ್ಯಕ್ಷರು ಕಾಲೇಜು ಅಭಿವೃದ್ಧಿ ಸಮಿತಿ ಇವರು ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಶಂಸುದ್ದೀನ್ ಪಟೇಲ್ ಪ್ರಿನ್ಸಿಪಾಲರು ವಹಿಸಿಕೊಂಡು ವಿದ್ಯಾರ್ಥಿಗಳು ಶ್ರಮದಾನ ಶಿಬಿರದಲ್ಲಿ ಭಾಗವಹಿಸುವುದರಿಂದ ರಾಷ್ಟ್ರೀಯ ಭಾವೈಕ್ಯತೆ ಮೂಡುವುದು ಎಂದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ.ರಾಜೇಂದ್ರ ದೊಡ್ಮನಿ, ಶಿಬಿರ ನಿರ್ದೇಶಕರುಗಳು ಯಶವಂತ ಪವಾರ್, ಅಶೋಕ್ ತಳಕೇರಿ, ದೇವಿದಾಸ್ ಪವಾರ್, ಸಂಗೀತಾ ಕಪೂರ್, ಶಿವಕುಮಾರ್ ಕೆ., ಜ್ಯೋತಿ ಹೊಸಮನಿ, ನಾಗಪ್ಪ ಚಿದಂಬರ್, ಮೇತ್ರಿ, ಎಚ್. ಎಸ್.ಬೇನಾಳ, ಸವಿತಾ ನಾಟೇಕರ್, ಡಾ.ಶಾಹೀನ್ ಕೌಸರ್, ದತ್ತಾತ್ರೇಯ ಎಸ್ , ಸತೀಶ್ ಕಟಿಕೆ, ಭಾಗ್ಯಶ್ರೀ, ಬೋಧಕೇತರ ಸಿಬ್ಬಂದಿ ವರ್ಗ ಮತ್ತು ಎನ್‌ಎಸ್‌ಎಸ್ ಶಿಬಿರಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಸುಭಾಷ್ ಆರ್.ನಿರೂಪಿಸಿದರು. ಸಂಗೀತಾ ಕಪೂರ್ ವಂದಿಸಿದರು,

# ಮನುಷ್ಯ ಮೋಬೈಲ್ ಜೀವಿಯಲ್ಲ; ಸಾಮಾಜಿಕ ಜೀವಿ : ಶಿವಾನಂದ ಮೇತ್ರೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-(ಹುಲಸೂರ) :-ಮನುಷ್ಯಮೋಬೈಲ್‌ಜೀವಿಯಲ್ಲ. ಸಮಾಜಜೀವಿ.ಮೋಬೈಲ್ ಬಳಕೆ ಈ ಕಾಲದಲ್ಲಿ ಅಗತ್ಯವಾಗಿದೆ. ಅನಿವಾರ್ಯವಿಲ್ಲ. ಅದು ಚಟ ವಾಗಬಾರದು ಎಂದು ತಹಸೀಲ್ದಾರ್ ಶಿವಾನಂದ ಮೇತ್ರೆ ಹೇಳಿದರು.

ಎಳ್ಳಮವಾಸೆ ನಿಮಿತ್ತವಾಗಿ ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ತಾಲೂಕಿನ ಗಡಿಗೌಡಗಾಂವ ಗ್ರಾಮದ ಧೂಳಪ್ಪ ಬಿರಾದಾರ ಅವರ ತೋಟದಲ್ಲಿ ಹಮ್ಮಿಕೊಂಡಿದ್ದ 'ಯುವಕರು ಮಾತ್ತು ಆಧುನಿಕ ತಂತ್ರಜ್ಞಾನದ ಬಳಕೆ' ಕುರಿತು ಚರ್ಚೆ ಮತ್ತು ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿ ಅಧ್ಯಯನಕ್ಕೆ, ಜ್ಞಾನಕ್ಕೆ, ಅರಿವಿಗೆ ಬಳಕೆಯಾಗಬೇಕಾದ ತಂತ್ರಜ್ಞಾನ ದುರಂತಗಳಿಗೆ ಉಪಯೋಗಿಸಬಾರದು ಎಂದರು.

ತಂತ್ರಜ್ಞಾನದ ಈ ಕಾಲಘಟ್ಟದಲ್ಲಿ ಮೋಬೈಲ್,ಕಂಪ್ಯೂಟರ್ ಸೇರಿದಂತೆ ಹಲವು ತಂತ್ರಜ್ಞಾನದ ಬಳಕೆ ಸರಿಯಾದ ಕ್ರಮದಲ್ಲಿ ನಡೆಯಬೇಕು. ಯುವ ಸಮುದಾಯಕ್ಕೆ ತಮ್ಮ ಕೌಟುಂಬಿಕ ಹಾಗೂ ಸಾಮಾಜಿಕ ಹೊಣೆಗಾರಿಕೆಯ ಅರಿವು ಇರಬೇಕು. ಮೋಬೈಲ್ ಗೀಳಿನಿಂದ ಹೊರಬಂದು ವಾಸ್ತವ ಬದು-ಕಿಗೆ ಮುಖಾಮುಖಿಯಾಗುವ ಅಗತ್ಯವಿದೆ ಎಂದರು.

ಪತ್ರಕರ್ತರಾದ ಮಾಣಿಕ ಭುರೆ ಮಾತನಾಡಿ ಹಿಂದಿನ ಕಾಲದಲ್ಲಿ ಬಾಲ್ಯದಲ್ಲಿ ಆಡುವ ಆಟಗಳು ಸಹಬಾಳ್ವೆ ಸಹ ಜೀವನದ ಪ್ರತೀಕವಾಗಿದ್ದವು. ಒಂದು ಕಾಲದಲ್ಲಿ ಮಗು ತನ್ನ ಆಟ ಪಾಠಗಳೊಂದಿಗೆ ಸಾಮಾಜಿಕ ಬದುಕನ್ನು ಪ್ರವೇಶಿಸುತಿತ್ತು. ಇಂದು ಒಂಟಿತನ , ಖಿನ್ನತೆ, ಅಸಹಾಯಕತೆ, ಅನಿಶ್ಚಿತತೆ ಹುಟ್ಟುಹಾಕುವ ಮೋಬೈಲ್ ಆಟಗಳು ಬಂದಿವೆ. ಆಟ ಮತ್ತು ಪಾಠ ಎರಡೂ ವ್ಯವಹಾರದ ಭಾಗಗಳಾಗಿವೆ. ಮನುಷ್ಯತ್ವ ತುಡಿತ ಬತ್ತಿ ಹೋಗುತ್ತಿದೆ ಎಂದರು.

ಯಾವ ಶಿಕ್ಷಣ ಪಡೆದರೆ ಹೆಚ್ಚು ಹಣ ಗಳಿಕೆ ಸಾಧ್ಯ. ಯಾವ ವಿದ್ಯಯಿಂದ ವೈಭೋಗದ ಜೀವನ ಸಾಧ್ಯ ಎಂಬ ಲೆಕ್ಕಾಚಾರದಲ್ಲಿ ಶಿಕ್ಷಣ ವ್ಯವಸ್ಥೆಯಿದೆ. ಹೀಗಾಗಿ ಎಲ್ಲ ವಲಯಗಳಲ್ಲಿ ನೈತಿಕತೆ ರೂಪಿಸಬೇಕಾದ, ಮೌಲ್ಯಗಳನ್ನು ಬಿತ್ತಬೇಕಾದ, ಎಂಥ ಕಷ್ಟಗಳು ಎದುರಾದರೂ ಎದುರಿಸುವ ಸ್ಥೈರ್ಯ ನೀಡುವ ಶಿಕ್ಷಣ ವ್ಯವಸ್ಥೆಯೇ ಜಡಗೊಂಡಿದೆ ಎಂದರು.

ಕಸಾಪ ಉಪಾಧ್ಯಕ್ಷ ಬಸವಕುಮಾರ ಕವಟೆ ಮಾತನಾಡಿ, ಬುದ್ಧ ಬಸವಣ್ಣ,ಗಾಂಧೀಜಿ,ಅಂಬೇಡ್ಕರ, ಲೋಹಿಯಾ, ಭಗತಸಿಂಗ್ ಮೊದಲಾದ ರಾಷ್ಟ್ರದ ಚಾರಿತ್ರಿಕ ನಾಯಕರನ್ನು ಮಾದರಿಯಾಗಿ ಪಡೆಯಬೇಕಾದ ಈ ಕಾಲದ ಯುವ ಸಮುದಾಯ ಸಿನಿಮಾ ನಟ ನಟಿಯರನ್ನು ಅನುಸರಿಸುತ್ತಿರುವುದು ವಿಪರ್ಯಾಸದ ಸಂಗತಿ ಎಂದರು.

ವಿಜಯಕುಮಾರ್ ಪಾಟೀಲ ಶಿವಪುರ ಮಾತನಾಡಿ, ಭವಿಷ್ಯದ ಬೆಳಕಾಗಬೇಕಾದ ಯುವ ಸಮುದಾಯ ಮೋಬೈಲ್ ಗೀಳಿಗೆ ಬಲಿಯಾಗುತ್ತಿರುವುದು ದುರಂತದ ಸಂಗತಿ. ಏಕಾಂತದಿಂದ ಕುವೆಂಪು, ತೇಜಸ್ವಿ ಅವರಂಥವರು ತಮ್ಮ ಸೃಜನಶೀಲತೆ ರೂಪಿಸಿದರು. ವಿಜ್ಞಾನಿಗಳು ಹೊಸ ಆವಿಷ್ಕಾರ ಸಂಶೋಧನೆಗಳನ್ನು ಮಾಡಲು ಒಂಟಿಯಾಗಿಯೇ ಕಾಲ ಕಳೆದಿದ್ದರು. ಈ ಕಾಲದ ಯುವ ಸಮುದಾಯ ತಮ್ಮ ಒಂಟಿತನ, ಏಕಾಂಗಿತನ ಗೀಳಾಗಿ ಬಳಸಿಕೊಳ್ಳುತ್ತಿರುವುದು ಅಪಾಯದ ದಾರಿಯಾಗಿಸಿಕೊಳ್ಳುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಪಂ ಮಾಜಿ ಸದಸ್ಯ ಮಲ್ಲಪ್ಪ ಧಬಾಲೆ ಮಾತನಾಡಿ, ಸಂವಿಧಾನದ ಮೂರು ಅಂಗಗಳು ಮತ್ತು ಮಾಧ್ಯಮಾಂಗ ಯುವಕರಿಗೆ ಸರಿಯಾದ ನೈತಿಕ ಶಿಕ್ಷಣ, ಉದ್ಯೋಗ ನೀಡುವ ಮತ್ತು ಆನ್ಲೈನ್ ಆಟದ ನಿಯಂತ್ರಣಕ್ಕೆ ಕಠಿಣ ಕಾನೂನು ತರಬೇಕು ಎಂದು ಹೇಳಿದರು.

ಪ್ರತಿಷ್ಠಾನದ ನಿರ್ದೇಶಕ ಡಾ ಶಿವಾಜಿ ಮೇತ್ರೆ , ಡಾ. ಭೀಮಾಶಂಕರ ಬಿರಾದಾರ ಮಾತನಾಡಿದರು.

ಹುಲಸೂರ ತಾಲೂಕು ಪತ್ರಕರ್ತ ಸಂಘದ ಅಧ್ಯಕ್ಷ ರಾಜಕುಮಾರ ಹೊನ್ನಾಡೆ,

ಜಗನ್ನಾಥ ಖ್ಯಾಡೆ, ಧೂಳಪ್ಪ ಬಿರಾದಾರ್, ಬಸವರಾಜ ಖಂಡಾಳ, ಕಾಶಿನಾಥ ಬಿರಾದಾರ , ಧರ್ಮೇಂದ್ರ ವಗ್ಗೆ, ಶರಣಪ್ಪ ಭತಮುರ್ಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಗಂಗಾಧರ ಸಾಲಿಮಠ ಸ್ವಾಗತಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ನಿರೂಪಿಸಿದರು.

ಪ್ರಭಾಕರ ನವಗಿರೆ ವಂದಿಸಿದರು.

# ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.31.-ಪ್ರಸಕ್ತ 2024-25ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಬಿ.ಎಡ್. ಮತ್ತು ಡಿ.ಎಡ್. ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ,ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸೇರಿದ ವಿದ್ಯಾರ್ಥಿಗಳಿಗೆ 25000 ರೂ.ಗಳ ವಿಶೇಷ ಪ್ರೋತ್ಸಾಹಧನ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಜನವರಿ 6 ರವರೆಗೆ ವಿಸ್ತರಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜ್ಯುಕೇಶನ್ (National Council for Teacher Education) ದಿಂದ ಮಾನ್ಯತೆ ಪಡೆದ ಸರ್ಕಾರಿ/ಅರೆ-ಸರ್ಕಾರಿ/ ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್. ಹಾಗೂ ಡಿಪಾರ್ಟ್‌ಮೆಂಟ್ ಆಫ್ ಸ್ಟೇಟ್ ಎಜ್ಯುಕೇಶನಲ್ ರಿಸರ್ಚ್ ಆಂಡ್ ಟ್ರೇನಿಂಗ್ (Department of State Educational Research and Training) ದಿಂದ ಮಾನ್ಯತೆ ಪಡೆದ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಡಿ.ಎಡ್. ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳು ಎಲ್ಲಾ ಅವಶ್ಯಕ ದಾಖಲೆಗಳೊಂದಿಗೆ ಸೇವಾಸಿಂಧು https:/ sevasindhu/. karnataka.gov.in ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಮೇಲ್ಕಂಡ ಕೊನೆಯ ದಿನಾಂಕದೊಳಗಾಗಿ ಅರ್ಜಿ ಸಲ್ಲಿಸಬೇಕು.

ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2024ರ ಡಿಸೆಂಬರ್ 25 ರಂದು ನಿಗದಿಪಡಿಸಲಾಗಿತ್ತು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಕಟ್ಟಡದ ಮೊದಲನೇ ಮಹಡಿಯಲ್ಲಿರುವ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿಯನ್ನು, ಕಚೇರಿ ದೂರವಾಣಿ ಸಂಖ್ಯೆ 08472-247260, https:/sevasindhu/. karnataka.gov.in/kalaburgi/public, http://dom.karnataka.gov.in ವೆಬ್‌ಸೈಟ್‌ನ್ನು ಹಾಗೂ ರಾಜ್ಯ ಸಹಾಯವಾಣಿ 8277799990 (24*7) ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.31-ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿ ರಚನೆಯಾದ ಕಾನೂನು ಅಭಿರಕ್ಷಕರ (Legal Aid Defense Counsel) ಕಚೇರಿಯಲ್ಲಿ ಕಾರ್ಯನಿರ್ವಹಿಸಲು ಮುಖ್ಯ ಕಾನೂನು ಅಭಿರಕ್ಷಕರು (ಚೀಪ್ ಲೀಗಲ್ ಏಡ್ ಡಿಫೇನ್ಸ್ ಕೌನ್ಸಿಲ್)-01 ಹುದ್ದೆ, ಉಪ ಕಾನೂನು ಅಭಿರಕ್ಷಕರು (ಡೆಪ್ಯೂಟಿ ಲೀಗಲ್ ಏಡ್ ಡಿಫೇನ್ಸ್ ಕೌನ್ಸಿಲ್)-01 ಹುದ್ದೆ ಹಾಗೂ ಸಹಾಯಕ ಕಾನೂನು ಅಭಿರಕ್ಷಕರು (ಅಸಿಸ್ಟಂಟ್ ಲೀಗಲ್ ಏಡ್ ಡಿಫೇನ್ಸ್ ಕೌನ್ಸಿಲ್)-01 ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸಲು ಅರ್ಹ ವಕೀಲರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಭಾರ ಅಧ್ಯಕ್ಷರಾದ ಎ.ವಿ. ಶ್ರೀನಾಥ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಕೆಗೆ 2025ರ ಜನವರಿ 10 ರಂದು ಕೊನೆಯ ದಿನ ದಿನವಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಎ.ಡಿ.ಆರ್. ಬಿಲ್ಡಿಂಗ್‌ದಲ್ಲಿನ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಹಾಗೂ ಜಿಲ್ಲಾ ನ್ಯಾಯಾಲಯದ https://kalaburagi.dcourts.gov.in ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

# ಕಸಾಪದಿಂದ ಹಿರಿಯ ಸಾಹಿತಿ ಬಸಣ್ಣ ಸಾಹು ಬೂದೂರ ರವರಿಗೆ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ತಾಲೂಕಿನ ಗ್ರಾಮೀಣ ಭಾಗದ ಹಿರಿಯ ಸಾಹಿತಿಗಳು ಸಾಂಸ್ಕೃತಿಕವಾಗಿ ಸಾಹಿತ್ಯಕವಾಗಿ, ಹಾಗೂ ಸಾಮಾಜಿಕವಾಗಿ ಅನೇಕ ಕೆಲಸಗಳನ್ನು ಮಾಡಿ ಹೆಸರು ಮಾಡಿದವರಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದು ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶರಣಬಸಪ್ಪ ಯಾಳವಾರ ಹೇಳಿದರು.

ವಲಯ ಕಸಾಪವತಿಯಿಂದ ವರ್ಷದ ವಿಶೇಷ ವ್ಯಕ್ತಿಯಾಗಿ ಆಯ್ಕೆಯಾದ ಹಿರಿಯ ಸಾಹಿತಿ ಬಸಣ್ಣ ಸಾಹು ಬೂದೂರ ಅವರಿಗೆ ಭಾನುವಾರ ಹಮ್ಮಿಕೊಂಡಿದ್ದ ಗೃಹ ಸನ್ಮಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪುರಾತನ ಕಾಲದಿಂದ ನಮ್ಮ ತಾಲೂಕಿನಲ್ಲಿ ಅನೇಕ ಹಿರಿಯ ಸಾಹಿತಿಗಳು ಕನ್ನಡ ಸಾಹಿತ್ಯಕ್ಕೆ ದುಡಿದಿದ್ದಾರೆ. ಸಾಹಿತ್ಯ ಲೋಕಕ್ಕೆ ಅವರು ನೀಡಿದ ಅಪಾರವಾಗಿದೆ ಎಂದು ಸ್ಮರಿಸಿದರು.

ಸನ್ಮಾನ ಸ್ವೀಕರಿಸಿ ಹಿರಿಯ ಸಾಹಿತಿ ಬಸಣ್ಣ ಸಾಹು ಬೂದೂರ, 'ನಂಬಿ ಕೆಟ್ಟವರಿಲ್ಲವೊ ದಾಸರ ವಾಣಿಯಂತೆ ಕನ್ನಡ ಭಾಷೆಯನ್ನು ಓದಿ ಕೆಟ್ಟವರಾದವರು ಯಾರೂ ಇಲ್ಲ ಅಂತಹ ಪ್ರಬುದ್ಧತೆಯಿಂದ ಕೂಡಿದ ಕನ್ನಡ ಭಾಷೆಯನ್ನು ಮೇಲೆತ್ತರಕ್ಕೆ ಹೋಗಲು ಇಂದಿನ ಯುವ ಸಾಹಿತಿ ಮತ್ತು ಕವಿಗಳ ಬರವಣಿಗೆ ಆಕಾಶಬಾಣವಾಗಬೇಕು ಎಂದು ಕಿವಿಮಾತು ಹೇಳಿದರು.

ಹಿರಿಯ ಸಾಹಿತಿ ನಿಂಗನಗೌಡ ದೇಸಾಯಿ ಅವರು, ವಲಯದಲ್ಲಿ ಆಗಿಹೋದ ಹಿರಿಯ ಸಾಹಿತಿಗಳ ಸಾಧನೆಗಳ ಬಗ್ಗೆ ಮಾತನಾಡಿದರು. ಕಸಾಪ ಕಾರ್ಯದರ್ಶಿ ಬಂದೇನವಾಜ ನಾಲತವಾಡ ಮಾತಾಡಿದರು. ನಂತರ ಕಸಾಪವತಿಯಿಂದ ಬಸಣ್ಣ ಸಾಹು ಸ್ಮರಣ ಸಂಚಿಕ ನೀಡಿ ವರ್ಷದ ವಿಶೇಷ ವ್ಯಕ್ತಿಯಾಗಿ ಗೌರವಿಸಲಾಯಿತು. ಸನ್ಮಾನಿಸಿ

ವಲಯ ಕಸಾಪ ಅಧ್ಯಕ್ಷ ಮಡಿವಾಳಪ್ಪಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು. ದೇವು ಹೆಬ್ಬಾಳ, ವೆಂಕಟೇಶಗೌಡ ಪಾಟೀಲ, ಎಚ್. ರಾಠೋಡ, ಮಹಿಪಾಲರೆಡ್ಡಿ ಡಿಗ್ಗಾವಿ, ಮಲ್ಲನಗೌಡ ಪಾಟೀಲ, ತಿಪ್ಪಣ್ಣ ಯಾಳಗಿ, ಡಿ.ಸಿ.ಪಾಟೀಲ, ಶಿವರಾಜ ಬೂದೂರ, ಪಾರ್ವತಿ ಬೂದೂರ, ಪರಶುರಾಮ ಬಳಬಟ್ಟಿ, ಇಲಿಯಾಸ ಪಟೇಲ, ಬಸವರಾಜ ತಳವಾರ, ಶಾಂತಗೌಡ ಕೂಡಲಗಿ ಸೇರಿ ಹಲವರಿದ್ದರು. ನಂದಪ್ಪ ಕವಾಲ್ದಾರ ಸ್ವಾಗತಿಸಿದರು. ವಿಜಯಾಚಾರ್ಯ ಪುರೋಹಿತ ನಿರೂಪಿಸಿದರು. ಗುಂಡಭಟ್ಟ ಜೋಷಿ ವಂದಿಸಿದರು.

# ಮಹಿಳೆಯರು, ದಲಿತರ ಅಸ್ಮಿತೆಗೆ ಎಂಬತ್ತರ ದಶಕ ಸಾಕ್ಷಿ: ಡಾ.ಹನುಮಂತಯ್ಯ



ಮಲ್ಲಮ್ಮ ನುಡಿ ವಾರ್ತೆ

ಹಾಸನ: ಎಂಬತ್ತರ ದಶಕ ಬಹು ಚಳವಳಿಗಳ ಪರ್ವಕಾಲ. ಈ ಕಾಲಘಟ್ಟದಲ್ಲಿ ಅನೇಕ ಪ್ರಗತಿಪರ ಹಾಗೂ ಜನಪರ ಚಳವಳಿಗಳು ಹುಟ್ಟಿ ಮಹಿಳೆಯರು, ದಲಿತರು, ಅಲ್ಪಸಂಖ್ಯಾತರು ಅಪಾರ ಸಂಖ್ಯೆಯಲ್ಲಿ ಸಾಮಾಜಿಕ ಸ್ಪಂದನೆಯೊಂದಿಗೆ ಮೊದಲಬಾರಿಗೆ ಬರೆಯತೊಡಗಿದ್ದರಿಂದ ಇದು ತುಳಿತಕ್ಕೊಳಗಾದವರ ಅಸ್ಮಿತೆಯ ಕಾಲ ಎಂದು ರಾಜ್ಯಸಭಾ ಮಾಜಿ ಸದಸ್ಯ ಮತ್ತು ಚಿಂತಕ ಡಾ. ಎಲ್. ಹನುಮಂತಯ್ಯ ಹೇಳಿದರು.

ಎಂಬತ್ತರ ದಶಕ ಚಳವಳಿಗಳಿಗೆ ಹೇಗೋ, ಹೊಸದನಿಗೂ ಕಿವಿಗೊಟ್ಟ ಕಾಲ. ದಲಿತ - ಬಂಡಾಯ ಚಳವಳಿಗಳು ಹೊಸ ಆಶಯ ಹುಟ್ಟಿಸಿದ್ದವು. ಆ ಕಾಲಘಟ್ಟದಲ್ಲೇ ಹುಟ್ಟಿದ ಲಂಕೇಶ ಪತ್ರಿಕೆ ದಲಿತರು, ಮಹಿಳೆಯರಿಗೆ ದನಿಯಾಯಿತು ಎಂದರು.

ಹಾಸನದ ಗಾಂಧಿ ಭವನದಲ್ಲಿ ರಂಗಸಿರಿ ಹಾಸನ ಮತ್ತು ಕಾರ್ಯನಿರತ ಪತ್ರಕರ್ತರ ಸಂಘ ಸೋಮವಾರ ಏರ್ಪಡಿಸಿದ್ದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಎಚ್.ಆರ್. ಸ್ವಾಮಿ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪಡೆದ ಎಚ್.ಬಿ.ಮದನಗೌಡ, ಡಾ. ಬಾನು ಮುಷ್ತಾಕ್ ಅವರನ್ನು ಅಭಿನಂದಿಸಿ ಮಾತಾಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಎಚ್.ಆರ್.ಸ್ವಾಮಿ ಅವರು, ಸಮಾಜದಲ್ಲಿ ತೀರ ಅವಮಾನಕ್ಕೆ ಒಳಗಾದ, ನಿರ್ಲ್ಯಕ್ಷ್ಯಕ್ಕೆ ಗುರಿಯಾದ ಸಮುದಾಯದಿಂದ ಬಂದವರು. ಕೊರಚ ಸಮುದಾಯದಲ್ಲಿ ಮೊಟ್ಟ ಮೊದಲ ವಿದ್ಯಾವಂತ. ಇವತ್ತಿಗೂ ಅಲ್ಲಿ ಪಿಎಚ್ಡಿ ಮಾಡಿದವರು ಇಲ್ಲ. ಕನ್ನಡದಲ್ಲಿ ಎಂ.ಎ ಮಾಡಿ ಉಪನ್ಯಾಸಕರಾಗಿ, ಪ್ರಾಂಶುಪಾಲರಾಗಿ, ರಾಜ್ಯದಾದ್ಯಂತ ವೈಜ್ಞಾನಿಕ ಅರಿವು ಮೂಡಿಸುವ ಕೆಲಸ ಮಾಡಿ, ಪರಿಸರವಾದಿಯಾಗಿ, ಸಮಾಜದ ಸ್ವಾಸ್ಥ್ಯ ಕಾಪಾಡಿದ ಮಾನವೀಯ ವ್ಯಕ್ತಿ. ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯನ್ನು ಕೇಳಿಸಿಕೊಳ್ಳುವ ಮೂಲಕ ಅವರಿಗೆ ಆಸರೆಯಾಗಿ ಕೆಲಸ ಮಾಡಿದವರು ಸ್ವಾಮಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇನ್ನು ಹಿರಿಯ ಪತ್ರಕರ್ತರಾದ ಎಚ್.ಬಿ.ಮದನಗೌಡರು ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾಗಿ ಅಪಾರ ಕೆಲಸ ಮಾಡಿ, ಪತ್ರಕರ್ತರ ಸಂಘಟನೆಯಲ್ಲೂ ತೊಡಗಿದ್ದು, ಸಮಾಜಮುಖಿ ಚಟುವಟಿಕೆಯ ಮೂಲಕ ಮರೆಯದ ಕೆಲಸ ಮಾಡಿದ್ದಾರೆ. ಸದಾ ಕ್ರೀಯಾಶೀಲವಾಗಿರುವ ಸ್ನೇಹಜೀವಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಮೊದಲಬಾರಿಗೆ ಸಾಹಿತ್ಯದಲ್ಲಿ ಮುಸ್ಲಿಂ ಸಂವೇದನೆ ಅನಾವರಣವಾಗಿದ್ದು ಬಾನು ಮುಷ್ತಾಕ್ ಅವರಿಂದ. ಸಂಪ್ರದಾಯ ಹಾಗೂ ಧರ್ಮದ ಚೌಕಟ್ಟಿನಲ್ಲಿ ಬಂಧಿತವಾಗಿದ್ದ ಮುಸ್ಲಿಂ ಮಹಿಳೆಯರು ಮುಕ್ತವಾಗಿ ಬರೆದು ತಮ್ಮ ಧರ್ಮದ ಒಳಗಿನ ವೈರುಧ್ಯಗಳನ್ನು, ಶೋಷಣೆಯನ್ನು ಮುಕ್ತವಾಗಿ ತೆರೆದಿಟ್ಟವರಲ್ಲಿ ಬಾನು ಪ್ರಮುಖರು ಎಂದು ಪ್ರಶಂಸಿದರು. ಅವರು ವೃತ್ತಿಯಲ್ಲಿ ವಕೀಲರಾಗಿ, ಕತೆ, ಲೇಖನ, ಕಾವ್ಯ, ಪತ್ರಿಕಾ ವರದಿ ಮೂಲಕ ಜೀವಂತವಾಗಿದ್ದಾರೆ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಹಾಸನದ ನೆಲೆಯಲ್ಲಿ ನಿಂತು ಕೆಲಸ ಮಾಡಿರುವ ಎಚ್.ಆರ್.ಸ್ವಾಮಿ, ಎಚ್.ಬಿ.ಮದನಗೌಡ ಮತ್ತು ಬಾನುಮುಷ್ತಾಕ್ ಅವರು ಅವರದೇ ಸಾಧನೆ ಮತ್ತು ಸೇವೆ ಮೂಲಕ ಗಮನ ಸೆಳೆದಿರುವುದನ್ನು ಸರ್ಕಾರ ಗುರುತಿಸಿದೆ. ಅದಕ್ಕಾಗಿ ಅವರಿಗೆ ಈ ವೇದಿಕೆಯಲ್ಲಿ ಅಭಿನಂದಿಸಲಾಗುತ್ತಿದೆ ಎಂದರು.

ಸಮಾರಂಭದಲ್ಲಿ ಲೋಕಸಭಾ ಸದಸ್ಯ ಶ್ರೇಯಸ್ ಪಟೇಲ್ ಅವರು ಮಾತನಾಡಿ ಮೂವರು ಸನ್ಮಾನಿತರಿಗೂ ಶುಭ ಹಾರೈಸಿದರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಹೊರ ತಂದಿರುವ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ವಿಶೇಷ ಸಂಚಿಕೆಯನ್ನು ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸತ್ಯಭಾಮ, ಜಿಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜಿತಾ, ಜಿಲ್ಲಾ ವಾರ್ತಾಧಿಕಾರಿ ಮೀನಾಕ್ಷಮ್ಮ ಅವರು ಬಿಡುಗಡೆ ಮಾಡಿದರು.

ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಎಚ್.ವೇಣುಕುಮಾರ್, ಮಾಜಿ ಅಧ್ಯಕ್ಷ ರವಿ ನಾಕಲಗೂಡು, ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷ ಎಚ್.ಟಿ.ಮೋಹನಕುಮಾರ್, ಕೆ.ಎಂ.ಹರೀಶ್, ಪ್ರಧಾನ ಕಾರ್ಯದರ್ಶಿ ಬಿ.ಸಿ.ಶಶಿಧರ್, ಹೆತ್ತೂರು ನಾಗರಾಜ್ ಮತ್ತಿತರರು ಉಪಸ್ಥಿತರಿದ್ದರು.

# ಬಳತ(ಕೆ): ಪಿಕೆಪಿಎಸ್ ಚುನಾವಣೆ ದೀಪಕ ಪಾಟೀಲ ಬೆಂಬಲಿತ ಪೆನಾಲಗೆ ಜಯ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ತಾಲೂಕಿನ ಬಳತ(ಕೆ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಮುಖಂಡ ದೀಪಕ ಪಾಟೀಲ ಚಾಂದೋರಿ ಬೆಂಬಲಿತ ಪೆನಾಲ ಅಭ್ಯರ್ಥಿಗಳು ಜಯಭೇರಿ ಬಾರಿಸಿದ್ದಾರೆ.


ಎಲ್ಲ 12 ಸ್ಥಾನಗಳೂ ದೀಪಕ ಪೆನಾಲ್ ಪಾಲಾಗಿವೆ. ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದ ಕ್ಷೇತ್ರಗಳಿಂದ ಲಕ್ಷ್ಮಣ ಸಿದ್ರಾಮ, ಕಾಳಿದಾಸ ಶಂಕರರಾವ್, ಸಂಜುಕುಮಾರ ವಿಠ್ಠಲರಾವ್, ಶರಣಪ್ಪ ಶಿವರಾಜ ಪಾಟೀಲ, ರಾಮಚಂದ್ರ ಗುಂಡಪ್ಪ, ಮಹಿಳೆಯರಿಗೆ ಮೀಸಲಾಗಿದ್ದ ಕ್ಷೇತ್ರಗಳಿಂದ ಉಜ್ವಲಾ ಧನಾಜಿ ಬಿರಾದಾರ, ಸುನೀತಾ ಕಾಶಿರಾಮ ಕೋಟೆ, ಪ್ರವರ್ಗ 'ಎ'ಗೆ ಮೀಸಲಾಗಿದ್ದ ಕ್ಷೇತ್ರದಿಂದ ಸತ್ತಾರಮಿಯಾ ಭಿಕ್ಷುಮಿಯಾ, ಪ್ರವರ್ಗ 'ಬಿ'ಗೆ ಮೀಸಲಾಗಿದ್ದ ಕ್ಷೇತ್ರದಿಂದ ಸಚಿನಕುಮಾರ ಸಿದ್ರಾಮಪ್ಪ ಶೆಟಕಾರ್, ಪರಿಶಿಷ್ಟ ಜಾತಿಗೆ ಮೀಸಲಾಗಿದ್ದ ಕ್ಷೇತ್ರದಿಂದ ಪಾಂಡುರಂಗ ಗುಂಡಪ್ಪ ಬನಸೋಡೆ ಹಾಗೂ ಪರಿಶಿಷ್ಟ ಪಂಗಡ-ಕ್ಕೆ ಮೀಸಲಾಗಿದ್ದ ಕ್ಷೇತ್ರದಿಂದ ಪರಮೇಶ್ವರ ಜಗನ್ನಾಥ ಬಿರಾದಾರ ಹಾಗೂ ಸಾಲಗಾರರಲ್ಲದ ಕ್ಷೇತ್ರದಿಂದ ದಿಲೀಪ್ ಶೇಷಪ್ಪ ಗೆಲುವಿನ ನಗೆ ಬೀರಿದ್ದಾರೆ.

ಪಿಕೆಪಿಎಸ್‌ನಲ್ಲಿ ಸತತ ಐದನೇ ಬಾರಿಗೆ ಪಾಟೀಲ ಬೆಂಬಲಿತ ಪೆನಾಲ್ ಪಾರುಪತ್ಯ ಮೆರೆದಿದೆ. ಜಯ ಗಳಿಸಿದ ಪೆನಾಲ್ ಅಭ್ಯರ್ಥಿಗಳು ದೀಪಕ್ ಪಾಟೀಲ ಅವರಿಗೆ ಸಿಹಿ ತಿನ್ನಿಸಿ, ಶಾಲು ಹೊದಿಸಿ ಸತ್ಕರಿಸಿದರು.

ನೂತನ ನಿರ್ದೇಶಕರು ಮತದಾರರು ತಮ್ಮ ಮೇಲೆ ಇಟ್ಟಿರುವ ವಿಶ್ವಾಸ ಉಳಿಸಿಕೊಳ್ಳಬೇಕು. ರೈತರ ಹಿತ ರಕ್ಷಣೆಗೆ ಶ್ರಮಿಸಬೇಕು ಎಂದು ಪಾಟೀಲ ಸಲಹೆ ಮಾಡಿದರು.

ಈ ಸಂದರ್ಭದಲ್ಲಿ ಮಹಾದೇವ ಸಾಗಾವೆ, ತಾನಾಜಿ ಮುಳೆ, ನಿರಂಜನ್ ಸ್ವಾಮಿ, ಸಾಯಿನಾಥ ಪಾಟೀಲ, ಸುಧಾಕರ ಜಾಧವ್, ಮಹಾದೇವ ಪಾಂಚಾಳ, ಹರಿಬಾ ಸಾಗಾವೆ, ಬಳಿರಾಮ ಮುಳೆ, ಕೇಶವ ಬಿರಾದಾರ ಉಪಸ್ಥಿತರಿದ್ದರು.

# ಬೆಂಗಳೂರು: ಕೆಯುಡಬ್ಲ್ಯೂಜೆ ಕ್ಯಾಲೆಂಡರ್-2025 ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಹೊಸ ವರ್ಷದ ಸಂದರ್ಭದಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಹೊರ ತಂದಿರುವ ಕ್ಯಾಲೆಂಡರ್‌ನ್ನು ಬೆಂಗಳೂರು ಕೆಯುಡಬ್ಲ್ಯೂಜೆ ಕಚೇರಿಯಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸಾಂಕೇತಿಕವಾಗಿ ಬಿಡುಗಡೆ ಮಾಡಿದರು. ಇದೇ ಸಂದರ್ಭದಲ್ಲಿ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ಅವರು ಕಾಸರಗೋಡು ಹೊರನಾಡು ಘಟಕದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ಅವರಿಗೆ ಕ್ಯಾಲೆಂಡರ್‌ಗಳನ್ನು ಹಸ್ತಾಂತರಿಸಿದರು.

# "ರಾಜ್ಯಮಟ್ಟದ ಪ್ರಪ್ರಥಮ ಸಮ್ಮೇಳನ" ದ ಅದ್ದೂರಿ ಆಚರಣೆಗೆ ಕರೆ : ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಗದಗ: ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ವತಿಯಿಂದ 2025ರ ಜನವರಿ ಅಥವಾ ಫೆಬ್ರವರಿ ತಿಂಗಳಿನಲ್ಲಿ ಏರ್ಪಡಿಸಲಾಗುವ "ರಾಜ್ಯಮಟ್ಟದ ಪ್ರಪ್ರಥಮ ಸಮ್ಮೇಳನ "ವನ್ನು ಅದ್ದೂರಿಯಾಗಿ ಆಚರಣೆ ಮಾಡಬೇಕೆಂದು ಕರೆ ನೀಡಿದ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ ಅವರು ಸಮ್ಮೇಳನದ ಯಶಸ್ವಿಗೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಸಂಘದ ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳಿಗೆ ಮನವಿ ಮಾಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ಡಿಸೆಂಬರ್ 28ರ ಶನಿವಾರ ಕರೆಯಲಾಗಿದ್ದ ಸಂಘದ ರಾಜ್ಯ ವಿಶೇಷ ಕಾರ್ಯಕಾರಿಣಿ ಸಭೆ ಮತ್ತು ಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗದಗ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಈ ಸಮ್ಮೇಳನ ನಡೆಯಲಿದೆ. ಸಮ್ಮೇಳನದ ಉದ್ಘಾಟನೆಯನ್ನು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾಡಲಿರುವರು. ಈಗಾಗಲೇ ಸಂಘದ ನಿಯೋಗ ಕಾನೂನು ಸಚಿವರಾದ ಹೆಚ್.ಕೆ.ಪಾಟೀಲ್ ಅವರ ನೇತೃತ್ವದಲ್ಲಿ ಡಿಸೆಂಬರ್ 12ರಂದು ಬೆಳಗಾವಿಯ ಸುವರ್ಣಸೌಧದಲ್ಲಿ ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿ ಸಮ್ಮೇಳನದ ಉದ್ಘಾಟಕರಾಗಿ



ಆಗಮಿಸುವಂತೆ ಮನವಿ ಮಾಡಲಾಗಿದೆ. ಸಮ್ಮೇಳನಕ್ಕೆ ಬರುವುದಾಗಿ ಮತ್ತು ಸಮ್ಮೇಳನದ ದಿನಾಂಕ ನೀಡುವುದಾಗಿ ನಿಯೋಗಕ್ಕೆ ಮುಖ್ಯಮಂತ್ರಿಯವರು ಭರವಸೆ ನೀಡಿದ್ದಾರೆಂದು ತಿಳಿಸಿದರು.

ಸಮ್ಮೇಳನದ ಅಂಗವಾಗಿ 100-150 ಪುಟಗಳ ಬಹುವರ್ಣದ ಸ್ಮರಣ ಸಂಚಿಕೆಯನ್ನು ಹೊರತರಲಾಗುವುದು. ಜನವರಿ 15ರೊಳಗೆ ಲೇಖನಗಳನ್ನು ಮತ್ತು ಜಾಹೀರಾತುಗಳನ್ನು ಕಳುಹಿಸಿಕೊಡುವಂತೆ ಸಂಘದ ಜಿಲ್ಲಾ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳಿಗೆ ತಿಳಿಸಿದ ರಾಜ್ಯಾಧ್ಯಕ್ಷರು, ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿರುವ ಪ್ರಪ್ರಥಮ ಸಮ್ಮೇಳನ ಅದ್ದೂರಿಯಾಗಿ ಜರುಗುವುದಕ್ಕೆ ಪ್ರತಿಯೊಬ್ಬರೂ ಕಾಯಕ ನಿಷ್ಠೆಯಿಂದ ಕಾರ್ಯ ನಿರ್ವಹಿಸಬೇಕೆಂದು ವಿನಂತಿಸಿದರು.

ಗದಗ ಸಮ್ಮೇಳನದ ಸಂಪೂರ್ಣ ಉಸ್ತುವಾರಿ ವಹಿಸಿಕೊಂಡಿರುವ ಗದಗದ ಕಿತ್ತೂರು ಕರ್ನಾಟಕ ಪ್ರಾದೇಶಿಕ ಪತ್ರಿಕೆಯ ಸಂಪಾದಕರು ಮತ್ತು ರಾಜ್ಯ ಉಪಾಧ್ಯಕ್ಷರಾದ ಮಂಜುನಾಥ ಬಸಪ್ಪ ಹಬ್ಬಿಗೇರಿ ಅವರು ಮಾತನಾಡಿ, ಸಮ್ಮೇಳನದ ಯಶಸ್ವಿಗೆ ಪೂರ್ವಸಿದ್ದತೆಗಳು ನಡೆಯುತ್ತಿವೆ. ರಾಜ್ಯದ ಮೂಲೆ ಮೂಲೆಯಿಂದ ಬರುವಂತಹ ಪತ್ರಿಕೆಗಳ ಸಂಪಾದಕರು ಮತ್ತವರ ಕುಟುಂಬದವರಿಗೆ, ವರದಿಗಾರರಿಗೆ, ಊಟ ವಸತಿ, ಸ್ಥಳೀಯ ಸಾರಿಗೆ ಸೌಕರ್ಯ ಒದಗಿಸಲಾಗುವುದು. ಈ ಸಮ್ಮೇಳನ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ್ ಅವರ ಘನ ಅಧ್ಯಕ್ಷತೆಯಲ್ಲಿ ಜರುಗಲಿರುವುದರಿಂದ ಯಾವುದೇ ಕೊರತೆಗಳಾಗದಂತೆ ಗದಗ ಜಿಲ್ಲಾ ಘಟಕ ನೋಡಿಕೊಳ್ಳಲಿದೆ ಎಂದು ಸಭೆಯಲ್ಲಿ ಭರವಸೆ ನೀಡಿದರು. ಸ್ಮರಣ ಸಂಚಿಕೆಯನ್ನು ಸ್ಥಳೀಯವಾಗಿ ಮುದ್ರಣ ಮಾಡಲಾಗುವುದು. ಸ್ಮರಣ ಸಂಚಿಕೆಯು ಅದ್ಭುತವಾಗಿ ಮೂಡಿಬರಲಿದೆ ಎಂದು ತಿಳಿಸಿದರು. ಸಮ್ಮೇಳನವನ್ನು ಎರಡು ದಿನಗಳ ಬದಲಿಗೆ ಒಂದು ದಿನ ಮಾತ್ರ ಏರ್ಪಡಿಸಲು ನಿರ್ಣಯಿಸಿದ್ದು ಅದಕ್ಕೆ ಸಭೆ ಒಪ್ಪಿಗೆ ನೀಡುವಂತೆ ಕೋರಿದರು. ಸಭೆಯು ಅದಕ್ಕೆ ಸಮ್ಮತಿ ನೀಡಿತು.

ಸಮ್ಮೇಳನದ ರೂಪುರೇಷೆಗಳ ಕುರಿತು ಕೇಂದ್ರ ಸಂಘದ ಪದಾಧಿಕಾರಿಗಳು ಮತ್ತು ಜಿಲ್ಲಾ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಸಲಹೆ ಸೂಚನೆಗಳನ್ನು, ಅಭಿಪ್ರಾಯಗಳನ್ನು ಸಭೆಯಲ್ಲಿ ಮಂಡಿಸಿದರು.

ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಭೀಮರಾಯ ಹದ್ದಿನಾಳ, ಹರೀಶ್, ಪ್ರಧಾನ ಕಾರ್ಯದರ್ಶಿ ಟಿ.ಎಸ್. ಕೃಷ್ಣಮೂರ್ತಿ, ಖಜಾಂಚಿ ಎಸ್.ಟಿ.ವೇದಮೂರ್ತಿ, ಕಾರ್ಯದರ್ಶಿ ನರಸಿಂಹರಾಜು ಹೆಚ್., ಜಂಟಿ ಕಾರ್ಯದರ್ಶಿಗಳಾದ ದಿನೇಶ್ ಗೌಡಗೆರೆ, ರಘುವೀರ ನಾಯಕ, ಸಿ. ರಂಗನಾಥ, ಸಂಘಟನಾ ಕಾರ್ಯದರ್ಶಿಗಳಾದ ರಾಜು ತಳವಾರ, ರಮೇಶ್ ರೆಡ್ಡಿ, ನಾಮನಿರ್ದೇಶನ ಸದಸ್ಯರಾದ ಡಾ. ಬಿ.ವಾಸುದೇವ್, ಅಶೋಕ ಕುಮಾರ ಕರಂಜಿ, ಡಾ.ಮಲ್ಲಿಕಾರ್ಜುನ ಅಶನಾಳ, ಕಾರ್ಯದರ್ಶಿ ನವೀನ್, ಸದಸ್ಯರಾದ ಭಾಗ್ಯಲಕ್ಷ್ಮೀ ಆರ್. ಜಿಲ್ಲಾ ಘಟಕಗಳ ಅಧ್ಯಕ್ಷರಾದ ಸುರೇಶ್ ಆರ್. ಕುಣೆಬೆಳಕೆರೆ, ಜಗದೀಶ ಪೂಜಾರ, ಎಂ.ಜೆ.ಶ್ರೀನಿವಾಸ್, ಶಿವಶಂಕರ್ ಎಲ್, ವಿಜಯ ಕುಮಾರ ಪಾಟೀಲ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವಪ್ಪ ಲಿಂಗದಾಳ, ಪದಾಧಿಕಾರಿಗಳಾದ ಹೆಚ್.ಎಂ. ಷರೀಫ, ಅಜಿತ್ ಹೊಂಬಾಳೆ, ಎನ್ ಆರ್ ಭಾಂಡಗೆ, ರಾಜು ಹೆಬ್ಬಳ್ಳಿ ಸೇರಿದಂತೆ ರಾಜ್ಯ ಹಾಗೂ ಜಿಲ್ಲಾ ಘಟಕಗಳ ಪದಾಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ದಾವಣಗೆರೆ ಪಬ್ಲಿಕ್ ವಾಯ್ಸ್ ಪತ್ರಿಕೆಯ ವರದಿಗಾರರು ಮತ್ತು ಕವಿಗಳಾದ ಎಸ್.ಆರೋಕ್ಯಸ್ವಾಮಿ ಹಾಸ್ಯ ಕವನ ವಾಚನ ಮಾಡಿ ಎಲ್ಲರ ಮನ ಸಂತೋಷ ಪಡಿಸಿದರು. ಇದೇ ಸಂದರ್ಭದಲ್ಲಿ ಕಿತ್ತೂರು ಕರ್ನಾಟಕ ಪ್ರಾದೇಶಿಕ ಪತ್ರಿಕೆ ಮತ್ತು ಪ್ರಜಾಪರ್ವ ಪತ್ರಿಕೆ-ಯ 2025ರ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಯಿತು.

ಗದಗ ಜಿಲ್ಲಾ ಘಟಕದ ಖಜಾಂಚಿ ರವಿಕಾಂತ ಅಂಗಡಿ ಸ್ವಾಗತಿಸಿ, ನಿರೂಪಿಸಿ, ಕೊನೆಯಲ್ಲಿ ವಂದಿಸಿದರು.

# ಕೃಷಿಕ ಸಮಾಜಕ್ಕೆ ಪದಾಧಿಕಾರಿಗಳ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಡಿ.31:ಇಂದು ಬೀದರ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷ ಹಾಗೂ ಪದಾಧಿಕಾರಿಗಳ ಐದು ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಬೀದರ ತಾಲ್ಲೂಕು ಕೃಷಿಕ ಸಮಾಜದ ಚುನಾವಣಾಧಿಕಾರಿಗಳಾದ ಅನ್ಸಾರಿ ಎಮ್.ಎ.ಕೆ ಸಹಾಯಕ ಕೃಷಿ ನಿರ್ದೇಶಕ ಕಛೇರಿಯಿಂದ ಕಾರ್ಯಕಾರಿ ಸಮಿತಿಗೆ ಐದು (2025–26 ರಿಂದ 2029–30ರ ವರೆಗೆ) ವರ್ಷದ ಅವಧಿಗೆ ನಡೆದ ಚುನಾವಣೆಯಲ್ಲಿ 15 ಜನ ಅವಿರೋಧವಾಗಿ ಆಯ್ಕೆ ಮಾಡಲಾಗಿತ್ತು. ದಿನಾಂಕ:31–12–2024 ರಂದು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಬೀದರ. ಕೃಷಿಕ ಸಮಾಜದ ತಾಲ್ಲೂಕು ಘಟಕದ ಅಧ್ಯಕ್ಷ ಹಾಗೂ ಪದಾಧಿಕಾರಿಗಳ ಐದು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದರು.

ಸಿದ್ರಾಮಯ್ಯಾ ಎಸ್. ಸ್ವಾಮಿ ಅವರು ಬೀದರ ತಾಲ್ಲೂಕು ಕೃಷಿಕ ಸಮಾಜದ ಅಧ್ಯಕ್ಷರು, ಮಹೇಶ ಚಿಂತಾಮಣಿ ಉಪಾಧ್ಯಕ್ಷರು, ದಯಾನಂದ ಸ್ವಾಮಿ ಜಿಲ್ಲಾ ಪ್ರತಿನಿಧಿ, ಶಿವಯ್ಯಾಸ್ವಾಮಿ ಪ್ರಧಾನ ಕಾರ್ಯದರ್ಶಿ, ಸಂಜುಕುಮಾರ ಪಾಟೀಲ್ ಖಜಾಂಚಿಯಾಗಿ ಆಯ್ಕೆಯಾದರು. ನಂದುಕುಮಾರ ಪಾಟೀಲ್, ವೈಜಿನಾಥ ಭುಯ್ಯಾ, ಶಂಕರರಾವ ಪಾಟೀಲ್, ಮಲ್ಲಿಕಾರ್ಜುನ ಹಚ್ಚಿ, ಮಹಾದೇವ ನಾಗೋರೆ, ಅನೀಲಕುಮಾರ ಅಟಂಗೆ, ನಾಗಯ್ಯಾ ಶಂಕ್ರಯ್ಯಾ, ನಾಗಯ್ಯಾ ಮಡಿವಾಳಯ್ಯಾ, ಮಹದೇವ ಸ್ವಾಮಿ, ಹಾಗೂ ಅಶೋಕ ಬಿರಾದರ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

# ಪಶು ವಿವಿಯ ಜಾನುವಾರು ಮೇಳದ ಪ್ರಚಾರ ಅಭಿಯಾನಕ್ಕೆ ಅದ್ದೂರಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ,ಡಿ.31: ಮುಂಬರುವ 2025 ಜನವರಿ 17, 18, 19 ರಂದು ಕರ್ನಾಟಕ ಪಶು ವಿವಿಯ ಜಾನುವಾರು ಮೇಳದ ಪ್ರಚಾರ ಅಭಿಯಾನಕ್ಕೆ ಅದ್ದೂರಿ ಚಾಲನೆ ನೀಡಲಾಯಿತು. ಭಾಲ್ಕಿಯಲ್ಲಿ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ತಮ್ಮ ಮನೆಯ ಕಚೇರಿಯಲ್ಲಿ ವಿಸ್ತರಣಾ ನಿರ್ದೇಶಕರಾದ ಡಾಕ್ಟರ್ ಬಸವರಾಜ ಅವಟಿ, ಡಾ. ಎಂ ಕೆ ತಾಂಡ್ಲೆ ಹಾಗೂ ಮೇಳದ ಪ್ರಚಾರ ಸಮಿತಿಯ ಅಧ್ಯಕ್ಷರಾದ ಚನ್ನಪ್ಪಗೌಡ ಬಿರಾದಾರ ಅವರೊಡನೆ ಮೇಳದ ಬಿತ್ತಿ ಪತ್ರ ಬಿಡುಗಡೆ ಮಾಡಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ವಿಡಿಯೋ ಸಂದೇಶ ನೀಡಿದ ಸಚಿವರು ಕಲ್ಯಾಣ ಕರ್ನಾಟಕದ ಎಲ್ಲ ರೈತ ಬಾಂಧವರು ಹಾಗೂ ನೆರೆ ರಾಜ್ಯದ ರೈತ ಬಾಂಧವರು ಈ ಮೇಳದ ಉತ್ಕೃಷ್ಟ ತಾಂತ್ರಿಕತೆಯ ಪ್ರದರ್ಶನದ ಲಾಭ ಪಡೆಯಬೇಕು ಎಂದು ಮನವಿ ಮಾಡಿದರು. ಪಶು ವಿಮೆ ಹೊಸ ವರ್ಷದ ಆರಂಭದಲ್ಲಿ ಅತ್ಯಂತ ಜನಪರ ಹಾಗೂ ರೈತ ಪರ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ರಾಜ್ಯದ ರೈತರಿಗೆ ಹೊಸ ವರ್ಷದ ಶುಭಾಶಯಗಳು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ವಿವಿಧಡೆ ಏಕಕಾಲಕ್ಕೆ ಪ್ರಚಾರಕ್ಕೆ ಚಾಲನೆ ನೀಡಲಾಗಿದ್ದು ಪೂಜ್ಯ ಬಸವಲಿಂಗಪಟ್ಟದ್ದೇವರು ಭಾಲ್ಕಿ ಹಿರೇಮಠ ಸಂಸ್ಥಾನ ಇವರು ಮಠದಲ್ಲಿ ಬಿತ್ತಿಪತ್ರ ಅಂಟಿಸುವ ಮೂಲಕ ವಿಡಿಯೋ ಸಂದೇಶ ನೀಡಿ ಪಶು ಮೇಳಕ್ಕೆ ಶುಭ ಹಾರೈಸಿದರು ಹಾಗೂ ಹೆಚ್ಚು ಸಂಖ್ಯೆಯಲ್ಲಿ ಜನರು ಪಾಲ್ಗೊಳ್ಳುವಂತೆ ಕರೆ ನೀಡಿ ತಾವು ಬರುವುದಾಗಿ ತಿಳಿಸಿದರು. ಪಶ್ಚಿಂಗೋಪನೆ ಮತ್ತು ಪಶು ವೈದ್ಯ ಸೇವಾ ಇಲಾಖೆಯಲ್ಲಿ ವಿಶ್ವವಿದ್ಯಾಲಯದ ಅಧಿಕಾರಿಗಳಾದ ಡಾ. ಬಿ ವಿ ಶಿವಪ್ರಕಾಶ್ ಡಾ. ದಿಲೀಪ್ ಕುಮಾರ್ ಹಾಗೂ ಉಪ ನಿರ್ದೇಶಕರಾದ ಡಾ. ನರಸಪ್ಪ ಹಾಗೂ ಡಾ. ನೇತೃತ್ವದಲ್ಲಿ ಪಶುವೈದ್ಯಾಧಿಕಾರಿಗಳ ಎಲ್ಲರೂ ಸಭೆ ಮಾಡಿ ಎಲ್ಲ ಗ್ರಾಮಗಳಿಗೆ ಮುಟ್ಟಿಸುವದಾಗಿ ನಿರ್ಧರಿಸಿ ಬಿತ್ತಿಪತ್ರ ಬಿಡುಗಡೆ ಮಾಡಿದರು.

# ಜ. 3 ಮತ್ತು 4 ರಂದು ಕುದ್ರೋಳಿ ಗಣೇಶ ಬೀದರಗೆ ಆಗಮನ: ಜಲಾದೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 31 : ಈ ತಿಂಗಳ 3 ಹಾಗೂ 4 ರಂದು ಖ್ಯಾತ ಜಾದೂಗಾರರಾದ ಕುದ್ರೋಳಿ ಗಣೇಶ ಅವರು ಬೀದರ ಜಿಲ್ಲೆಯಲ್ಲಿ ಜಾಗೃತಿ ಜಾದೂ ಪ್ರದರ್ಶನ ಹಮ್ಮಿಕೊಂಡಿದ್ದಾರೆ ಎಂದು ಶ್ರೀ ಕೊತ್ತಲಬಸವೇಶ್ವರ. ಭಾರತೀಯ ಶಿಕ್ಷಣ ಸಂಸ್ಥೆ ಸಂಚಾಲಿತ ವಿಕಾಸ ಅಕಾಡೆಮಿ ಜಿಲ್ಲಾ ಸಂಚಾಲಕ ರೇವಣಸಿದ್ಧಪ್ಪ ಜಲಾದೆ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 2025ರ ಜನವರಿ 28 ರಿಂದ ಫೆಬ್ರುವರಿ 6ರ ವರೆಗೆ ಕಲಬುರಗಿಯ ಬೀರನಳ್ಳಿ ಕ್ರಾಸ್ ಹತ್ತಿರ ನಡೆಯುವ ಏಳನೇ ಭಾರತೀಯ ಸಂಸ್ಕೃತಿ ಉತ್ಸವದ ಪ್ರಚಾರಾರ್ಥವಾಗಿ ಮತ್ತು ಜಾಗೃತಿಗಾಗಿ ಕುದ್ರೋಳಿ ಗಣೇಶ ಅವರು ಜಿಲ್ಲೆಯಲ್ಲಿ ನಾಲ್ಕು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದ್ದಾರೆ. ಜನವರಿ 3 ರಂದು ಬೆಳಿಗ್ಗೆ 10 ಗಂಟೆಗೆ ಬಸವಕಲ್ಯಾಣ ನಗರದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಹಾಗೂ ಮಧ್ಯಾಹ್ನ 2 ಗಂಟೆಗೆ ಭಾಲ್ಕಿಯ ಗುರುಕೃಪಾ ಕಲ್ಯಾಣ ಮಂಟಪದಲ್ಲಿ ಜಾಗೃತಿ ಜಾದೂ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ಜ. 4 ರಂದು ಬೆ. 10 ಗಂಟೆಗೆ ಔರಾದನ ನವಚೇತನ ಪಬ್ಲಿಕ್ ಶಾಲೆಯಲ್ಲಿ ಹಾಗೂ ಸಾಯಂಕಾಲ 4.30 ಗಂಟೆಗೆ ನಗರದ ಡಾ. ಚನ್ನಬಸವ ಪಟ್ಟದ್ದೇವರ ಜಿಲ್ಲಾ ರಂಗಮಂದಿರದಲ್ಲಿ ಜಾಗೃತಿ ಜಾದೂ ಕಾರ್ಯಕ್ರಮ ಮತ್ತು ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಆದ್ದರಿಂದ ಪ್ರತಿಯೊಬ್ಬರೂ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ವಿಕಾಸ ಅಕಾಡೆಮಿ ಜಿಲ್ಲ ಸಂಚಾಲಕ ರೇವಣಸಿದ್ದಪ್ಪ ಜಲಾದೆ ತಿಳಿಸಿದರು.

ರಂಗಮಂದಿರದಲ್ಲಿ ಜರುಗುವ ಜಾದೂ ಕಾರ್ಯಕ್ರಮವನ್ನು ಗುರುನಾನಕ ದೇವ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಬಲಬೀರಸಿಂಗ್ ಉದ್ಘಾಟನೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಕರ್ನಲ್ ಶರಣಪ್ಪ ಸಿಕೆನಪುರೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜ್ಞಾನಸುಧಾ ಶಾಲೆಯ ನಿರ್ದೇಶಕ ಮುನೀಶ ಲಾಖಾ, ಕರಾಶಿ ಸಂಸ್ಥೆಯ ಕಾರ್ಯದರ್ಶಿ ಸತೀಶ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿರಲಿದ್ದಾರೆ ಎಂದರು.

ಜಾದೂ ಕಾರ್ಯಕ್ರಮದ ಮೂಲಕ ಭಾರತೀಯ ಸಂಸ್ಕೃತಿ ಉತ್ಸವದ ಪ್ರಚಾರ ಕೈಗೊಳ್ಳಲಾಗುತ್ತಿದೆ. ಭಾರತೀಯ ಸಂಸ್ಕೃತಿ ಉತ್ಸವದ ಬಗ್ಗೆ ವಿವರಣೆ ನೀಡಿದ ಜಲಾದೆಯವರು ಈ ಭಾಗದಲ್ಲಿ ವೈಚಾರಿಕ ಕ್ರಾಂತಿ ಮಾಡಲಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗದವರು ಕೂಡಾ ಹಿಂದುಳಿದಿಲ್ಲ ಎಂಬ ಸಂದೇಶ ಉತ್ಸವದ ಮೂಲಕ ಸಾರಲಾಗುತ್ತಿದೆ. ಈ ಉತ್ಸವದಲ್ಲಿ ರಾಜ್ಯ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ಚಿಂತಕರಿಂದ ಮಾರ್ಗದರ್ಶನ ನೀಡಲಾಗುತ್ತಿದೆ. ಗೋವಿಂದಾಚಾರ್ಯ ಅವರ ನೇತೃತ್ವದಲ್ಲಿ ಒಟ್ಟು 10 ಸಾವಿರ ಕಾರ್ಯಕರ್ತರು ಕೆಲಸ ಮಾಡುತ್ತಿದ್ದಾರೆ. 900 ಸ್ಟಾಲ್‌ಗಳು ಬೀಳಲಿವೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ವಿಕಾಸ ಅಕಾಡೆಮಿ ಕೃಷಿ ವಿಭಾಗದ ಮುಖ್ಯಸ್ಥರಾದ ಬಿ.ಎಸ್.ಕುದರೆ, ಕರ್ನಲ್ ಶರಣಪ್ಪ ಸಿಕೆನಪುರೆ, ವಿಕಾಸ ಅಕಾಡೆಮಿ ನಗರ ಸಹ ಸಂಚಾಲಕ ಸಂತೋಷ ಮಂಗಳೂರೆ, ಗಣೇಶ ಹಡಪದ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಶವದ ಮೇಲೆ ರಾಜಕೀಯ ಮಾಡುವುದು ಬಿಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಡಿ.31:ಬಿಜೆಪಿಯವರು ಬಡವರ ಶವದ ಮೇಲೆ ರಾಜಕೀಯ ಮಾಡುವುದನ್ನು ಬಿಡಬೇಕು ಎಂದು ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಂಜಯ್ ಜಾಗೀರದಾರ್ ಸಲಹೆ ಮಾಡಿದ್ದಾರೆ.

ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣಕ್ಕೂ ಪ್ರಿಯಾಂಕ್ ಖರ್ಗೆ ಅವರಿಗೂ ಸಂಬಂಧವಿಲ್ಲ. ಎ???ಐಆ???ನಲ್ಲಿ ಅವರ ಹೆಸರಿಲ್ಲ. ಆದರೂ, ಅವರ ವಿರುದ್ಧ ಬಿಜೆಪಿಯವರು ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ರಾಜ್ಯದ ಅನೇಕ ಕಡೆಗಳಲ್ಲಿ ಆತ್ಮಹತ್ಯೆ ಪ್ರಕರಣಗಳಲ್ಲೇ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಪ್ರಯತ್ನಿಸಿದ್ದಾರೆ ಎಂದು ಟೀಕಿಸಿದ್ದಾರೆ.

ಸಚಿನ್ ಆತ್ಮಹತ್ಯೆ ಪ್ರಕರಣವನ್ನು ರಾಜ್ಯ ಸರ್ಕಾರ ಈಗಾಗಲೇ ಸಿಬಿಐ ತನಿಖೆಗೆ ಕೊಟ್ಟಿದೆ. ಸಚಿನ್ ಮನೆಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಕುಟುಂಬಕ್ಕೆ ರೂ.10 ಲಕ್ಷ ಪರಿಹಾರ ಕೊಡುವ ಭರವಸೆ ನೀಡಿದ್ದಾರೆ. ಆದರೆ, ಬಿಜೆಪಿಯವರು ಗುತ್ತಿಗೆದಾರ ಮನೆಗೆ ಭೇಟಿ ಕೊಟ್ಟು ಮೊಸಳೆ ಕಣ್ಣೀರು ಮಾತ್ರ ಸುರಿಸಿದ್ದಾರೆ. ಕುಟುಂಬದವರ ಜತೆ ಫೋಟೋ ತೆಗೆಸಿಕೊಂಡು ಹೋಗಿದ್ದಾರೆ. ಪಕ್ಷ ಅಥವಾ ವೈಯಕ್ತಿಕವಾಗಿ ನಯಾ ಪೈಸೆ ಸಹಾಯಧನ ಕೊಟ್ಟಿಲ್ಲ ಎಂದು ಆರೋಪಿಸಿದ್ದಾರೆ.

ಪ್ರಿಯಾಂಕ್ ಖರ್ಗೆ ಉತ್ತಮ ಕೆಲಸದಿಂದ ಹೆಸರು ಮಾಡಿದ್ದಾರೆ. ಅವರ ಮೇಲೆ ಯಾವುದೇ ಕಪ್ಪು ಚುಕ್ಕೆ ಇಲ್ಲ. ಬಿಜೆಪಿಯವರಿಗೆ ಅವರ ಏಳಿಗೆ ಸಹಿಸಲು ಆಗುತ್ತಿಲ್ಲ ಎಂದು ಹೇಳಿದ್ದಾರೆ. ಪ್ರಿಯಾಂಕ್ ಖರ್ಗೆ ಅವರೇ ಪ್ರಕರಣದ ನಿಷ್ಪಕ್ಷಪಾತ ತನಿಖೆಗೆ ಮನವಿ ಮಾಡಿದ್ದಾರೆ. ಬಿಜೆಪಿಯವರು ಹೊಸ ವರ್ಷದಲ್ಲಾದರೂ ಶವದ ಮೇಲೆ ರಾಜಕೀಯ ಮಾಡುವುದು, ಕೋಮು ದ್ವೇಷ ಹರಡುವುದನ್ನು ಬಿಟ್ಟು, ರಾಜ್ಯದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಜ. 6 ರಿಂದ ಗ್ಲೋಬಲ್ ಸೈನಿಕ ಅಕಾಡೆಮಿ ವತಿಯಿಂದ ಸೇನಾಪಡೆ ಹಾಗೂ ಅರೆಸೇನಾಪಡೆ ಅಭ್ಯರ್ಥಿಗಳಿಗಾಗಿ ಉಚಿತ ತರಬೇತಿ ಕಾರ್ಯಾಗಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಡಿ. 31 : ಈ ತಿಂಗಳ 6 ರಿಂದ ಮೂರು ತಿಂಗಳ ಕಾಲ ನಗರದ ಹೊರವಲಯದಲ್ಲಿ ಇರುವ ಗ್ಲೋಬಲ್ ಸೈನಿಕ ಅಕಾಡೆಮಿ ಶಾಲೆಯಲ್ಲಿ ಸೇನಾಪಡೆ ಹಾಗೂ ಅರೆ ಸೇನಾ ಪಡೆ ಆಯ್ಕೆಗಾಗಿ ಉಚಿತ ತರಬೇತಿ ನೀಡಲಾಗುವುದು ಎಂದು ವಿಕಾಸ ಅಕಾಡೆಮಿ ಜಿಲ್ಲಾಧ್ಯಕ್ಷ ಕರ್ನಲ್ ಶರಣಪ್ಪ ಸಿಕೆಂಪುರೆ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು ಈ ಹಿಂದೆ ಎರಡು ತರಬೇತಿಗಳನ್ನು ಹಮ್ಮಿಕೊಳ್ಳಲಾಗಿದ್ದು, 1520 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿ 471 ಅಭ್ಯರ್ಥಿಗಳು ಸೇನೆಗೆ ಭರ್ತಿಯಾಗಿ ದೇಶ ಸೇವೆ ಸಲ್ಲಿಸುತ್ತಿರುವುದು ನಮಗೆ ಹೆಮ್ಮೆ ಎನಿಸಿದೆ ಎಂದರು.

ತರಬೇತಿ ಪಡೆದ ಈ ಅಭ್ಯರ್ಥಿಗಳಿಗೆ ಎಪ್ರಿಲ್ ನಲ್ಲಿ ಲಿಖಿತ ಪರೀಕ್ಷೆ ಹಮ್ಮಿಕೊಳ್ಳಲಾಗಿದ್ದು, ಆಗಸ್ಟ್ ಹಾಗೂ ಸೆಪ್ಟೆಂಬರ್ ನಲ್ಲಿ ದೈಹಿಕ ಪರೀಕ್ಷೆ ಆಯೋಜಿಸಲಾಗುತ್ತದೆ. ಐ.ಎ.ಎಫ್, ಅಗ್ನಿವೀರ್, ಯೋಜನೆ ಅಭ್ಯರ್ಥಿಗಳಿಗೆ ಈ ತಿಂಗಳ 7 ರಿಂದ 27 ರ ವರೆಗೆ, ಅಗ್ನಿಪಥ ಸೇನಾನಿಗಳಿಗೆ ಫೆ. 25 ರಂದು ಸಿಆರ್ ಪಿಎಫ್ ಅಭ್ಯರ್ಥಿಗಳಿಗೆ ಜ. 15 ರಿಂದ ಫೆ. 24 ರ ವರೆಗೆ ಆರ್.ಪಿ.ಎಫ್ ಅಭ್ಯರ್ಥಿಗಳಿಗೆ ಫೆಬ್ರುವರಿಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಆದ ಕಾರಣ ಜಿಲ್ಲೆಯ ಹಾಗೂ ಕಲ್ಯಾಣ ಕರ್ನಾಟಕ ಭಾಗದ 18 ವರ್ಷದೊಳಗಿನ ಯುವಕರು ತರಬೇತಿಯ ಲಾಭ ಪಡೆದುಕೊಳ್ಳಬೇಕೆಂದು ಕರ್ನಲ್ ಹೇಳಿದರು.

ಈ ತರಬೇತಿಯು ಕ.ಕ. ಭಾಗದ ಏಳೂ ಜಿಲ್ಲೆಗಳಾದ ಬೀದರ ಕಲಬುರಗಿ ಯಾದಗಿರಿ ರಾಯಚೂರು ಕೊಪ್ಪಳ ವಿಜಯನಗರ ಮತ್ತು ಬಳ್ಳಾರಿ ಜಿಲ್ಲೆಗಳ ಆಸಕ್ತ ಅಭ್ಯರ್ಥಿಗಳಿಗೆ ಉಚಿತ ತರಬೇತಿ ನೀಡಲಾಗುವುದು ಎಂದರು.

# ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.31:ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ ಅವರು ಬೀದರದಿಂದ ರಸ್ತೆ ಮೂಲಕ ಜನವರಿ 2 ರಂದು ಗುರುವಾರ ಸಂಜೆ 4 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಸಂಜೆ 4 ಗಂಟೆಗೆ ಕಲಬುರಗಿ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ನೀಡಲಾದ ಅನುದಾನಕ್ಕೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ನಂತರ ರಾತ್ರಿ 8 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಯಾದಗಿರಿಗೆ ಪ್ರಯಾಣಿಸುವರು.

# ರಾಜ್ಯದ ನಗರಾಭಿವೃದ್ಧಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಡಿ.31:ರಾಜ್ಯದ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಬಿ.ಎಸ್. ಸುರೇಶ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಜನವರಿ 3 ರಂದು ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಕಲಬುರಗಿಗೆ ಆಗಮಿಸುವರು.

ಅಂದು ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಪಟ್ಟಂತೆ ಕಲಬುರಗಿ ಮಹಾನಗರ ಪಾಲಿಕೆ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಕೆ.ಯು.ಐ.ಡಿ.ಎಫ್.ಸಿ. ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

ನಂತರ ಸಂಜೆ 5.30 ಗಂಟೆಗೆ ಚಿತ್ತಾಪುರ ತಾಲೂಕಿನ ಸೂಗೂರು ಗ್ರಾಮದಲ್ಲಿ ಮಹಾತ್ಮ ಭೋಜಲಿಂಗೇಶ್ವರ ಸಂಸ್ಥಾನ ಮಠದಿಂದ ಹಮ್ಮಿಕೊಂಡಿರುವ 1008 ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ರಾತ್ರಿ 9 ಗಂಟೆಗೆ ಕಲಬುರಗಿಯಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ ಅಡಿ ಆರೋಗ್ಯ ಕೇಂದ್ರಗಳ ಪ್ರಮಾಣೀಕರಣ ಕಡ್ಡಾಯ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.31:

ಜಿಲ್ಲೆಯ ಎಲ್ಲ ಆರೋಗ್ಯ ಕೇಂದ್ರಗಳನ್ನು ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ ಅಡಿ ಪ್ರಮಾಣೀಕರಣಕ್ಕೆ ಕಡ್ಡಾಯವಾಗಿ ಒಳಪಡಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರು ಅವರು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್‌ನ ವಿಡಿಯೋ ಸಂವಾದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸರ್ಕಾರದ ಮಟ್ಟದಲ್ಲಿ ಸಮುದಾಯಕ್ಕೆ ನೀಡುವ ಆರೋಗ್ಯ ಸೇವೆಗಳು ಗುಣಮಟ್ಟವಾಗಿರಲು ಎಲ್ಲ ಹಂತದಲ್ಲಿ ಪ್ರಮಾಣೀಕರಿಸಬೇಕು ಎಂದು ಅವರು ಹೇಳಿದರು.

ಜಿಲ್ಲೆಯ ಆಯುಷ್ಮಾನ ಆರೋಗ್ಯ ಮಂದಿರಗಳು (ಉಪಕೇಂದ್ರಗಳು), ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗಳನ್ನು ವೈದ್ಯಾಧಿಕಾರಿಗಳು ತಮ್ಮ ಮುಂದಾಳತ್ವದಲ್ಲಿ ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ ಅಡಿಯಲ್ಲಿ ಪ್ರಮಾಣೀಕರಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಾರ್ವಜನಿಕ ಆಸ್ಪತ್ರೆಗಳ ವಿಶ್ವಾಸಾರ್ಹತೆಯನ್ನು ಹೆಚ್ಚಿಸುವ ಮಹತ್ವ ಪೂರ್ಣ ಕಾರ್ಯ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ಸಂಡೂರು, ಕಂಪ್ಲಿ, ಸಿರುಗುಪ್ಪ, ಬಳ್ಳಾರಿ ಮತ್ತು ಕುರುಗೋಡು ತಾಲ್ಲೂಕು ಒಳಗೊಂಡಂತೆ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ, ಔಷಧಿಗಳ ಲಭ್ಯತೆ, ದಾಖಲಾತಿ ನಿರ್ವಹಣೆ, ವೈದ್ಯಕೀಯ ತ್ಯಾಜ್ಯ ವಿಲೇವಾರಿ, ತಾಯಿ ಮಗುವಿನ ಆರೈಕೆ, ಕುಟುಂಬ ಕಲ್ಯಾಣ ಸೇವೆಗಳು, ಸಾಂಕ್ರಾಮಿಕ ಅಸಾಂಕ್ರಾಮಿಕ ರೋಗಗಳ ನಿರ್ವಹಣೆ, ಪ್ರಯೋಗಾಲಯ ಸೇವೆಗಳು ಸೇರಿದಂತೆ ಮಾನದಂಡಗಳ ಅನುಗುಣವಾಗಿ ಸಮರೋಪಾದಿಯಲ್ಲಿ ಕ್ರಮವಹಿಸುವ ಮೂಲಕ ಮುಂಚೂಣಿ ಜಿಲ್ಲೆಯಾಗಿ ಮಾಡಲು ನಿಗಾವಹಿಸಬೇಕು ಎಂದು ತಿಳಿಸಿದರು.

*ಕುಷ್ಟರೋಗ:*

ಜಿಲ್ಲೆಯಲ್ಲಿ ಕುಷ್ಟರೋಗ ಪ್ರಕರಣಗಳ ನಿರ್ಮೂಲನೆಗಾಗಿ ಸಂಡೂರು ತಾಲ್ಲೂಕಿನ ಚೋರನೂರು ಮತ್ತು ಬಂಡ್ರಿ ವ್ಯಾಪ್ತಿಯಲ್ಲಿ ಹಾಗೂ ಪ್ರಕರಣಗಳು ಕಂಡು ಬಂದ ಗ್ರಾಮಗಳಲ್ಲಿ ಹೆಚ್ಚಿನ ಜಾಗೃತಿಯನ್ನು ಮನೆ ಭೇಟಿಯ ಮೂಲಕ ಪತ್ತೆ ಹಚ್ಚಿ ಚಿಕಿತ್ಸೆ ನೀಡುವುದರ ಜೊತೆಗೆ ಪ್ರಕರಣಗಳನ್ನು ಶೂನ್ಯಕ್ಕೆ ತರಲು ಶ್ರಮಿಸುವಂತೆ ಸೂಚಿಸಿದರು.

*ಸಿಮಂತ ಕಾರ್ಯಕ್ರಮ ಹಮ್ಮಿಕೊಳ್ಳಿ:*

ಗ್ರಾಮೀಣ ಪ್ರದೇಶದಲ್ಲಿ ತಾಯಂದಿರ ಆರೈಕೆ ಕುರಿತು ಕುಟುಂಬದ ಸದಸ್ಯರಿಗೆ ಅದರಲ್ಲೂ ಚೊಚ್ಚಲು ಗರ್ಭಿಣಿ ಮತ್ತು ರಕ್ತದೊತ್ತಡ, ಮೊದಲ ಹೆರಿಗೆ ಸಿಜೇರಿಯನ್, ರಕ್ತಹೀನತೆ, ಬಹುದಿನಗಳ ನಂತರ ಗರ್ಭಿಣಿಯಾಗಿರುವುದು ಮುಂತಾದವುಗಳ ಸನ್ನಿವೇಶದಲ್ಲಿ ಕುಟುಂಬ ಸದಸ್ಯರು ವಹಿಸಬೇಕಾದ ಕಾಳಜಿ ಹಾಗೂ ತಪಾಸಣೆಗಳು, ಟಿಡಿ ಚುಚ್ಚುಮದ್ದು, ಕಬ್ಬಿಣಾಂಶ ಮಾತ್ರೆಗಳ ಸೇವನೆ, ಹೆರಿಗೆ ನಂತರ ಮಕ್ಕಳಿಗೆ ನೀಡುವ 12 ಮಾರಕ ರೋಗಗಳ ಲಸಿಕೆ ಕುರಿತು ಗ್ರಾಮ ಮಟ್ಟದಲ್ಲಿ ಸಿಮಂತ ಕಾರ್ಯಕ್ರಮ ಏರ್ಪಡಿಸಿ ಜಾಗೃತಿ ನೀಡಲು ಕ್ರಿಯಾಯೋಜನೆ ರೂಪಿಸಬೇಕು. ನಿರಂತರ ನಿಗಾವಣೆಗಾಗಿ ಸಾಮಾಜಿಕ ಜಾಲತಾಣದಲ್ಲಿ ಆಪ್ ಆಧಾರಿತ ಸೇವೆ ಸಿದ್ದಪಡಿಸಿಕೊಳ್ಳಲು ಸೂಚಿಸಿದರು.

*ಕ್ಷಯರೋಗ ಪತ್ತೆ ಮತ್ತು ಚಿಕಿತ್ಸೆ; 100 ದಿನಗಳ ಅಭಿಯಾನ:*

ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಎರಡು ವಾರಕ್ಕಿಂತ ಹೆಚ್ಚು ದಿನಗಳ ಕೆಮ್ಮು ಇರುವ ಹಾಗೂ ಕ್ಷಯರೋಗದ ಇತರೆ ಲಕ್ಷಣಗಳ ಕುರಿತು ಮಾಹಿತಿ ನೀಡಿ ಹ್ಯಾಂಡ್‌ಹೊಲ್ಡ್ ಎಕ್ಸ್–ರೇ ಯಂತ್ರವನ್ನು ಸದುಪಯೋಗಪಡೆದು ಲಭ್ಯವಿರುವ ರೆಡಿಯೋಲಾಜಿಸ್ಟ್ ಮೂಲಕ ಎಕ್ಸ್–ರೆ ಪರಿಶೀಲಿಸಿ ಚಿಕಿತ್ಸೆ ನೀಡಬೇಕು. ಪ್ರತಿ ತಾಲ್ಲೂಕಿಗೆ ಒಂದರಂತೆ ಹ್ಯಾಂಡ್‌ಹೊಲ್ಡ್ ಎಕ್ಸ್–ರೇ ಯಂತ್ರವನ್ನು ಸಜ್ಜುಗೊಳಿಸಲು ಅಗತ್ಯ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

*ಗೃಹ ಆರೋಗ್ಯ:*

ಮಹಿಳೆಯರು ಸೇರಿದಂತೆ 30 ವರ್ಷ ಮೇಲ್ಪಟ್ಟ ಎಲ್ಲ ಸಾರ್ವಜನಿಕರು ರಕ್ತದೊತ್ತಡ ಪರೀಕ್ಷೆಯನ್ನು ಕೈಗೊಳ್ಳುವ ಮೂಲಕ ಮನೆ ಮಟ್ಟದಲ್ಲಿಯೇ ಔಷಧಿ ವಿತರಿಸುವ ಸರಕಾರದ ಮಹತ್ವಾಕಾಂಕ್ಷಿ ಕಾರ್ಯಕ್ರಮವಾದ ಗೃಹ ಆರೋಗ್ಯ ಯೋಜನೆಯನ್ನು ಯಶಸ್ವಿಗೊಳಿಸಲು ತಿಳಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ಗುರ್ತಿಸಲ್ಪಟ್ಟ ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳಿಗೆ 14 ದಿನಗಳ ಕಾಲ ತರಬೇತಿ ಪಡೆದ ಸಿಬ್ಬಂದಿಯವರಿಂದ ಕಂಪ್ಲಿ ಮತ್ತು ಸಿರುಗುಪ್ಪ ತಾಲ್ಲೂಕುಗಳ ಪೌಷ್ಟಿಕ ಪುನಶ್ಚೇತನ ಕೇಂದ್ರಗಳಲ್ಲಿ ಪೌಷ್ಟಿಕ ಆಹಾರ ತಯಾರಿಕೆ ಕುರಿತು ಮಾಹಿತಿ ನೀಡಿ ಕೇಂದ್ರಗಳನ್ನು ಬಲಪಡಿಸಿ ಹೆಚ್ಚುಹೆಚ್ಚು ಮಕ್ಕಳನ್ನು ದಾಖಲಿಸಲು ಕ್ರಮವಹಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಡೆಂಗ್ಯು ನಿಯಂತ್ರಣಕ್ಕಾಗಿ ತಂಡಗಳನ್ನು ರಚಿಸಿ ಲಾರ್ವಾ ಸಮೀಕ್ಷೆ ನಿರಂತರವಾಗಿ ಕೈಗೊಳ್ಳಲು, ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳಾದ ನೋ–ಸ್ಕಾಲ್‌ಪೆಲ್ ವ್ಯಾಸೆಕ್ಟುಮಿ ವಿಧಾನವನ್ನು ಹೆಚ್ಚು ಜನಪ್ರಿಯಗೊಳಿಸಲು ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಪರೀಕ್ಷೆಗೆ ಒಳಪಟ್ಟ ಮಕ್ಕಳನ್ನು ಚಿಕಿತ್ಸೆ ಅಗತ್ಯವಿದ್ದಲ್ಲಿ ಜಿಲ್ಲಾ ಆಸ್ಪತ್ರೆ ಆವರಣದಲ್ಲಿರುವ ಡಿಇಐಸಿ ಕೇಂದ್ರಕ್ಕೆ ಕಳುಹಿಸಿ ಶಸ್ತ್ರಚಿಕಿತ್ಸೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು, ಶಾಲಾ ಮಕ್ಕಳ ಆರೋಗ್ಯ ಜಾಗೃತಿಯ ಆರೋಗ್ಯ ಸಿಂಚನದಡಿ ನಿರಂತರ ಜಾಗೃತಿ ನೀಡಲು, ಅಂಗಾಂಗ ದಾನದಡಿ ಜಾಗೃತಿ ನೀಡಿ ನೋಂದಣಿ ಹೆಚ್ಚಿಸಲು, ಮಾನಸಿಕ ರೋಗಗಳ ಜಾಗೃತಿಗಾಗಿ 14416 ಉಚಿತ ಸಹಾಯವಾಣಿ ಸಂಖ್ಯೆ ಕುರಿತಾಗಿ ಸುಧೀರ್ಘ ಚರ್ಚೆ ನಡೆಸಿ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ರೋಗವಾಹಕ ಆಶ್ರೀತ ನಿಯಂತ್ರಣ ಅಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಬಾಯಿ ಆರೋಗ್ಯ ದಂತ ಕಾರ್ಯಕ್ರಮದ ಡಾ.ವಿಶಾಲಾಕ್ಷಿ, ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ಬಸವರಾಜ್ ದಮ್ಮೂರು, ಡಾ.ಭರತ್, ಡಾ.ಮಂಜುನಾಥ ಜವಳಿ, ಡಾ.ಅರುಣ ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಡಾ.ಸುರೇಶ, ಡಿಎನ್‌ಓ ಗಿರೀಶ್, ಡಿಪಿಎಮ್ ವೆಂಕೋಬ ನಾಯ್ಕ, ಮನೋಹರ, ಬಸವರಾಜ್ ಸೇರಿದಂತೆ ತಾಲ್ಲೂಕು ಆರೋಗ್ಯ ಅಧಿಕಾರಿಗಳು, ಇತರೆ ಇಲಾಖೆ ಸಿಬ್ಬಂದಿ ಹಾಜರಿದ್ದರು.

# ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅಂಬೇಡ್ಕರ್ ಅವರಿಗೆ ಅವಮಾನಿಸುವ ರೀತಿಯಲ್ಲಿ ಮಾತನಾಡಿರುವ ಕೇಂದ್ರ ಸಚಿವ ಅಮಿತ್ ಶಾ ಅವರ ರಾಜೀನಾಮೆ ಹಾಗೂ ಗಡಿಪಾರಿಗೆ ಆಗ್ರಹಿಸಿ ಇಂಚೂರ ಗ್ರಾಮದಲ್ಲಿ ಮಂಗಳವಾರ ಅಂಬೇಡ್ಕರ್ ಅಭಿಮಾನಿಗಳು, ಬ್ಲೂ ಟೈಗರ್ ಯೂಥ್ ಕ್ಲಬ್ ಪ್ರಮುಖರು ಪ್ರತಿಭಟನೆ ನಡೆಸಿದರು.

ರಾಷ್ಟ್ರಪತಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಕಚೇರಿ ಸಿಬ್ಬಂದಿಗೆ ಸಲ್ಲಿಸಿದರು.

ನಂತರ ಮಾತನಾಡಿದ ಪ್ರಮುಖರು, ಅಮಿತ್ ಶಾ ಅವರ ಮಾತುಗಳು ಅಂಬೇಡ್ಕರ್ ರು ರಚಿಸಿದ ಸಂವಿಧಾನದ ಮೇಲಿರುವ ಅಸಹನೀಯ ಪ್ರತೀಕವಾಗಿದೆ. ಅಮಿತ್ ಶಾರದು ಸಂವಿಧಾನ ವಿರೋಧಿ ಮನಸ್ಥಿತಿ ಇದೆ. ಹಾಗಾಗಿ, ಇವರನ್ನು ತಕ್ಷಣ ಕೇಂದ್ರ ಸಚಿವ ಸಂಪುಟದಿಂದ ವಜಾಗೊಳಿಸಬೇಕು ಮತ್ತು ಗಡಿಪಾರು ಮಾಡಬೇಕು ಎಂದು ರಾಷ್ಟ್ರಪತಿಗೆ ಬರೆದ ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಪ್ರಮುಖರಾದ ರವೀಂದ್ರ ದೇವಘಡೆ, ಮಾಣಿಕ ಭಂಗಾರೆ, ಗೌತಮ್ ಫುಲೆ, ರಾಜಕುಮಾರ ಭಂಗಾರೆ, ಓಂಕಾರ ಸೂರ್ಯವಂಶಿ, ಅಶ್ವಿನ್ ವಾಘಮಾರೆ, ಭರತ್ ಕಾಂಬಳೆ, ವಿನಾಯಕ ಗಾಯಕವಾಡ ಸೇರಿದಂತೆ ಇತರರು ಇದ್ದರು.

# ಬಂದ್ ಪ್ರತಿಭಟನಾ ಮೇರವಣಿಗೆಯಲ್ಲಿ ತಾಲುಕಾ ವಕೀಲರು ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಶಹಾಪುರ ಬಂದ್ ಕರೆಯ ಪ್ರತಿಭಟನೆ ಮೇರವಣಿಗೆಯಲ್ಲಿ, ತಾಲುಕಾ ನ್ಯಾಯಾಲಯದ ಸರ್ವ ವಕೀಲರು ಪಾಲ್ಗೊಂಡು, ಬೆಂಬಲ ವ್ಯಕ್ತಪಡಿಸಿ ಮಾತನಾಡಿದರು, ಅವಹೇಳಕಾರಿ ಹೇಳಿಕೆ ನೀಡಿದ ಕೇಂದ್ರ ಮಂತ್ರಿ ಶಾ, ವಿರುದ್ದ ನ್ಯಾಯಾವಾದಿಗಳು ಆಕ್ರೋಶ ವ್ಯಕ್ತಪಡಿಸಿದರು. ಈ ಪ್ರತಿಭಟನೆಯಲ್ಲಿ, ಹಿರಿಯ ನ್ಯಾಯವಾದಿಗಳಾದ, ಆರ್, ಚೆನ್ನಬಸ್ಸು, ಸಾಲೋಮನ್ ಆಲ್ಬಡ್, ಇಬ್ರಾಹಿಂ ಸಾಬ್ ವನದುರ್ಗಾ, ಯೂಸೂಫಸಾಬ್ ಸಿದ್ದಕಿ, ಚಂದ್ರಶೇಖರ ಜಾದವ್, ಅಯ್ಯಪ್ಪಸ್ವಾಮಿ ವನದುರ್ಗಾ, ಅಮರೇಶ ಹಬ್ಬಳ್ಳಿ, ಜೈಲಾಲ್ ತೊಟದಮನಿ, ಶ್ರೀಮತಿ ಸತ್ಯಮ್ಮ ಹೊಸಮನಿ, ಸುಜಾತ ಮದ್ದರ್ಕಿ, ಗೌಸ್ ಸಾಬ್ ಗೋಗಿ, ರಾಜೇಂದ್ರ ಸಾಗರ, ಸೇರಿದಂತೆ ನೂರಾರು ಜನ ನ್ಯಾಯವಾದಿಗಳು ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದರು.

# ಕೇಂದ್ರ ಸಚಿವ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಸಾಮೂಹಿಕ ಸಂಘಟನೆಗಳ ಆಕ್ರೋಶ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ಕೇಂದ್ರ ಗೃಹ ಮಂತ್ರಿ ಅಮೀತ ಶಾ ರವರು ಸಂವಿಧಾನ ವಿರೋಧಿಗಳಾಗಿದ್ದಾರೆ, ಪ್ರಜಾಪ್ರಭುತ್ವದ ವ್ಯವಸ್ಥೆಗೆ ದಕ್ಕೆ ತರುವ ಹೇಳಿಕೆಯನ್ನು ನೀಡಿ, ಭಾರತರತ್ನ, ಡಾ, ಬಿ, ಆರ್, ಅಂಬೇಡ್ಕರವರನ್ನು ಅವಮಾನಗೊಳಿಸಿದ್ದು ಖಂಡನಿಯವಾಗಿದೆ, ಕೂಡಲೇ ರಾಷ್ಟ್ರಪತಿಗಳು ಮಧ್ಯ ಪ್ರವೇಶಿಸಿ ಶಾ, ರವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ, ಶಹಾಪುರ ಸಾಮೂಹಿಕ ಪ್ರಗತಿಪರ ಸಂಘಟನೆಗಳ ಆಶ್ರೆಯದಲ್ಲಿ, ಶಹಾಪುರ ಬಂದ್ ಮಾಡಿ, ಸಚಿವ ಶಾ, ರವರ ಅಣುಕು ಶವ ಯಾತ್ರೆಯನ್ನು ಪ್ರತಿಭಟನೆ ಮೇರವಣಿಗೆಯ ಮುಖಾಂತರ ದಹನ ಮಾಡಿ ಆಕ್ರೋಶ ವ್ಯಕ್ತಪಡಿಸಿದರು. ನಗರದ ಕನ್ಯಾಕೊಳೂರ ಅಗಸಿಯಿಂದ ಪ್ರಾರಂಭವಾದ ಈ ಬೃಹತ್ ಪ್ರತಿಭಟನೆಯನ್ನು ನಗರದ ರಾಷ್ಟ್ರೀಯ ಹೆದ್ದಾರಿಯ ಮುಖಾಂತರ ನಡೆದು. ಬಸವೇಶ್ವರ ವೃತ್ತದಲ್ಲಿ ಬಾರಿ ಬಹಿರಂಗ ಸಭೆ ನಡೆಯಿತು, ಪ್ರತಿಭಟನೆಯಲ್ಲಿ ಅಲಗಿ, ವೇಶಬೂಷಣಗಳು, ಹಾಗೂ ಕ್ರಾಂತಿ ಗೀತೆಗಳನ್ನು ಹಾಡುವದರೊಂದಿಗೆ ಶೋಷಿತ ಸಮುದಾಯಗಳ ತಮ್ಮ ಕೊಪವನ್ನು ವ್ಯಕ್ತಪಡಿಸಿದರು, ಅಲ್ಲದೆ ಈ ಪ್ರತಿಭಟನೆಯಲ್ಲಿ. ಮುಖಂಡರಾದ ಶರಣಪ್ಪ ಸಲಾದಪುರ, ವಿಶ್ವ-ರಾಧ್ಯ ಸತ್ಯಂಪೇಟ, ಡಾ. ಶರಣು ಗದ್ದುಗೆ, ಅಯ್ಯಣ್ಣ ಕನ್ಯಾಕೋಳೂರ, ಶಿವಮಾಂತ ಚಂದಾಪುರ, ಬಸವರಾಜಪ್ಪಗೌಡ ಹೆರುಂಡಿ, ವಸಂತ ಸುರುಪುರಕರ್, ತಿಮ್ಮಯ್ಯ ಪುರ್ಲೆ, ಸಣ್ಣ ನಿಂಗಣ್ಣ ನಾಯ್ಕೊಡಿ, ಮಲ್ಲಿಕಾರ್ಜುನ ಪೂಜಾರಿ, ನೀಲಕಂಠ ಬಡಿಗೇರ, ಶ್ರೀಶೈಲ್ ಹೊಸಮನಿ, ಗೀರೆಪ್ಪಗೌಡ ಬಾಣತಿಹಾಳ, ಗೌಡಪ್ಪಗೌಡ ಆಲ್ದಾಳ, ದೇವಿಂದ್ರ ಹೆಗಡೆ, ಶಿವುಪುತ್ರ ಜವಳಿ, ಮರೆಪ ಜಾಲಿಮಂಚಿ, ಶಾಂತಪ್ಪ ಗುತೆ-ದಾರ, ಮರೆಪ್ಪ ಪ್ಯಾಟಿ, ವೆಂಕಟೇಶ ಆಲೂರ, ಮಲ್ಲಣ್ಣ ಗೋಗಿ, ಚಂದ್ರಶೇಖರ ಕಟ್ಟಿಮನಿ, ಮಾಪಣ್ಣ ಮದ್ದರ್ಕಿ, ಶಂಕರ ಸಿಂಗೆ, ನಾಗಣ್ಣ ಬಡಿಗೇರ, ಕೊಲಿ ಸಮಾಜದ ಅದ್ಯಕ್ಷರಾದ ರಾಯಪ್ಪ ಸಾಲಿಮನಿ, ಮರೆಪ್ಪ ಚೆಟೆರಕರ್, ರಾಯಪ್ಪ ಸಾಲಿಮನಿ, ಮಾನಸಿಂಗ್ ಚೌವಾಣ್, ಸಾಹೇಬಣ್ಣ ಪುರ್ಲೆ, ವಾಸುದೇವ ಕಟ್ಟಿಮನಿ, ಮಾಹಾದೇವ ದಿಗ್ಗಿ, ಶರಣು ದೋರನಳ್ಳಿ, ಸೈಯದ್ ಖಾದ್ರಿ, ಭೀಮರಾಯ ಹೊಸಮನಿ, ಶೇಖರ ದೊರೆ, ದೇವಿಂದ್ರಪ್ಪ ಗೌಡಗೇರಾ, ಸೋಪಣ್ಣ ದರಿಯಾಪುರ, ಶಿವು ದೊಡ್ಮನಿ, ರುದ್ರಪ್ಪ ಹುಲಿಮನಿ. ಬಾಬುರಾವ್ ಬೂತಾಳೆ. ವಿಜಯಕುಮಾರ ಎದರಮನಿ, ಡಾ, ರವಿಂದ್ರನಾಥ ಹೊಸಮನಿ, ಭೀಮಣ್ಣ ಶಖಾಪುರ, ಹೊನ್ನಪ್ಪ ಗಂಗನಾಳ, ಮರೆಪ್ಪ ಕನ್ಯಾಕೊಳೂರ, ಸುಭಾಸ ತಳವಾರ, ಭೀಮರಾಯ ಕಾಂಗ್ರೆಸ್, ಚಂದ್ರಶೇಖರ ಚೌವಾಣ್, ಎಸ್, ಎಮ್, ಸಾಗರ, ರವಿಕುಮಾರ ಜಾದವ್, ಭೀಮರಾಯ ಜುನ್ನಾ, ಚಂದ್ರಶೇಖರ ಗುತ್ತೆದಾರ, ಯಮನಪ್ಪ ರೇವಲ್, ದೌಲಸಾಬ್, ನಧಾಫ. ಸೇರಿದಂತೆ ಅನೇಕ ವಿವಿಧ ಸಮಾಜದ ಗಣ್ಯರು ಹಿರಿಯರು, ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು, ದಲಿತಪರ ಸಂಘಟನೆಗಳ ಮುಖಂಡರು, ಅಲ್ಲದೆ ದೇವದುರ್ಗಾ, ಯಾದಗಿರಿ, ಸುರಪುರ, ಜೇವರ್ಗಿ, ಸೇರಿದಂತೆ ವಿವಿಧ ತಾಲುಕಾ ಗ್ರಾಮಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಜನರು ಬಂದ್ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಗ್ರಾಪಂ ಉದ್ಯೋಗ ಖಾತ್ರಿಯಲ್ಲಿ ಭೋಗಸ್ ಬಿಲ್. ಆರೋಪ



(ರಾಜಕುಮಾರ ಆರ್. ಹಡಪದ)

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ತಾಲೂಕ ಸಿಂಧನಕೇರಾ ಗ್ರಾಮ ಪಂಚಾಯತ ವ್ಯಾಪ್ತಿಯ ಹಣಕುಣಿ ಗ್ರಾಮದಲ್ಲಿ ಉದ್ಯೋಗ ಖಾತ್ರಿಯಲ್ಲಿ ಕೆಲಸ ಮಾಡದೆ ಬಿಲ್ ಪಡೆದುಕೊಂಡಿ-ದ್ದಾರೆ ಎಂದು ಗ್ರಾಮದ ನಿವಾಸಿ ಪ್ರಭು ನಾಗನಾಯಕ, ಅಮರ ನಾಗನಾಯಕ, ಯೋಹಾನ ನಾಗನಾಯಕ ಗಂಭೀರ ಆರೋಪ ಮಾಡಿದರು. ಮಂಗಳವಾರ ಗ್ರಾಮ ಪಂಚಾಯತ ಕಾರ್ಯಲಯ ಒಟಾಗಿ ಮಾಧ್ಯಮ ಜೊತೆಗೆ ಮಾತಾಡಿದರು. ನಮ್ಮ ಹೊಲದಲ್ಲಿ ಕೃಷಿ ಹೋಂಡಾ ನಿರ್ಮಾಣ ಮಾಡಲಾಗಿದೆ ಎಂದು ಫೈಲ್ ರೆಡಿ ಮಾಡಿ ಕಾಮಗಾರಿ ಮಾಡದೆ ಬಿಲ್ ಪಾಸ್ ಮಾಡಿಕೊಂಡಿದ್ದಾರೆ. ಈ ಭೋಗಸ್ ಬಿಲ್ ಪಡೆದುಕೊಂಡವರು ಯಾರೇ ಇರಲಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರಭು ನಾಗನಾಯಕ ಹೇಳಿದರು. ನಮ್ಮ ಹೊಲದಲ್ಲಿ ಕಾಮಗಾರಿ ಪಡೆಯಲು ಅರ್ಜಿ ನೀಡಿದರೆ ಕಾಮಗಾರಿ ಹೆಸರು ಕಟ್ ಮಾಡುತ್ತಾರೆ. ಸದಸ್ಯರು ಕೊಟ್ಟಿರುವ ಹೆಸರು ಮಾತ್ರ ಎಕ್ಷನ್ ಪ್ಲಾನ್ ನಲ್ಲಿ ಇಡುತ್ತಾರೆ. ಸದಸ್ಯರು ಅವರಿಗೆ ಬೇಕಾದವರ ಹೆಸರು ಇಟ್ಟು ಕೆಲಸ ಮಾಡದೆ ಬಿಲ್ ತೆಗೆದುಕೊಳ್ಳುತ್ತಾರೆ ಎಂದು ಅಮರ ನಾಗನಾಯಕ ತಿಳಿಸಿದರು. ಜನರಿಗೆ ಕೆಲಸ ನೀಡದೆ ಮಶೀನ್ ಬಳಸಿ ಉದ್ಯೋಗ ಖಾತ್ರಿ ಕೆಲಸ ಮಾಡಿಸಿ ಮುಗ್ದ ಜನರ ಬ್ಯಾಂ-ಕಿಗೆ ಹಣ ಜಮಾ ಮಾಡಿಸಿ ಅವರಿಗೆ 200 ಕೊಟ್ಟು ಉಳಿದ ಹಣವನ್ನು ಸದಸ್ಯರು ತಂಬ್ ಹಚ್ಚಿಕೊಂಡು ಹಣ ವಸೂಲಿ ಮಾಡಿಕೊಳ್ಳುತ್ತಾರೆ. ಬಡ ಜನರಿಗೆ ಕೆಲಸ ನೀಡಬೇಕು. ಅಧಿಕಾರಿಗಳ ಗಮನಕ್ಕೆ ವಿಷಯ ತಂದರು ಕೂಡ ಯಾವುದೇ ಕ್ರಮ ಆಗುತ್ತಿಲ್ಲ. ಸಂಭಂದ ಪಟ್ಟ ಅಧಿಕಾರಿಗಳು ಇದನ್ನು ತನಿಖೆ ಮಾಡಿ ಕ್ರಮ ಜರುಗಿಸಬೇಕು ಎಂದು ಯೋಹಾನ ಆಗ್ರಹಿಸಿದರು. ಈ ಸಂದರ್ಭದಲ್ಲಿ ಪ್ರದೀಪ, ಪ್ರಶಾಂತ ನಾಗನಾಯಕ, ಸಾಗರ ನಾಗನಾಯಕ, ಪ್ರಜ್ವಲ್ ನಾಗನಾಯಕ, ಅರುಣ ನಾಗನಾಯಕ, ನಿಖಿಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಟ್ರಾಫಿಕ್ ಸಮಸ್ಯೆಗಳಾಗದಂತೆ ಮುಂಜಾಗ್ರತೆವಹಿಸಿ - ಜಿಲ್ಲಾಧಿಕಾರಿ ನಲಿನ್ ಅತುಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2025ನೇ ಜನವರಿ 15 ರಂದು ನಡೆಯುವ ಶ್ರೀ ಗವಿಸಿದ್ದೇಶ್ವರ ಜಾತ್ರೆಗೆ ಲಕ್ಷ್ಯಾಂತರ ಭಕ್ತರು ಬರುವುದರಿಂದ ಟ್ರಾಫಿಕ್ ಸಮಸ್ಯೆಗಳಾಗದಂತೆ ಪಾಕಿಂ-ರ್ಗ್ ವ್ಯವಸ್ಥೆ ಸೇರಿದಂತೆ ಇತರೆ ಮುಂಜಾಗ್ರತೆ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಲಿನ್ ಅತುಲ್ ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳುವ ಕುರಿತು ಅಧಿಕಾರಿಗಳಿಗೆ ಕ-ರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.


ಕಳೆದ ವರ್ಷದಂತೆ ಈ ವರ್ಷವು ಜಾತ್ರೆಗೆ ಬರುವ ಭಕ್ತಾದಿಗಳಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕು. ತುರ್ತು ಸಂದರ್ಭದಲ್ಲಿ ಜನರಿಗೆ ಯಾವುದೇ ಸಮಸ್ಯೆಗಳಾದಲ್ಲಿ ತಕ್ಷಣ ಸೇವೆ ನೀಡಲು ಆರೋಗ್ಯ ಇಲಾಖೆಯ ತಂಡ ತೈಯಾರಿಯಲ್ಲಿ ಇರಬೇಕು. ಅದರಲ್ಲಿ ನುರಿತ ವೈದ್ಯರು ಇರುವಂತೆ ನೋಡಿಕೊಳ್ಳಬೇಕು. ಸ್ವಚ್ಚತೆ-ಗಾಗಿ ಹೆಚ್ಚಿನ ಪೌರ ಕಾರ್ಮಿಕರ ನಿಯೋಜನೆ ಮಾಡಬೇಕು ಮತ್ತು ಸೂಕ್ತ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡುವಂತೆ ಸಂಬಂಧಿಸಿದಂತೆ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಮಾತನಾಡಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಮುಂಜಾಗ್ರತೆಯಾಗಿ ಎರಡು ಕುಡಿಯುವ ನೀರಿನ ಹೆಚ್ಚುವರಿ ಟ್ಯಾಂಕರಗಳ ವ್ಯವಸ್ಥೆ ಮಾಡಬೇಕು. ಕೆಲವು ಕಡೆ ಓಪನ್ ವೈರಿಂಗ್ ಇರುತ್ತವೆ ಹಾಗಾಗಿ ಜೆಸ್ಕಾಂನವರು ಎಲೆಕ್ಟ್ರಿಕಲ್ ಫಿಟ್ನೆಸ ಕುರಿತು ಪರಿಶೀಲನೆ ಮಾಡಬೇಕು. ಎರಡು ಅಗ್ನಿಶಾಮಕ ದಳದ ವಾಹನಗಳನ್ನು ತೈಯಾರಿಯಲ್ಲಿ ಇಡಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್. ಎಲ್ ಅರಸಿದ್ದಿ ಮಾತನಾಡಿ ಟ್ರಾಫಿಕ್ ಸಮಸ್ಯೆಗಳಾಗದಂತೆ ಪಾರ್ಕಿಂಗ್ ವ್ಯವಸ್ಥೆ ಮಾಡಿದ ಮಾಹಿತಿಯನ್ನು ಮುಂಚಿತವಾಗಿ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ತಿಳಿಸುವ ಕೆಲಸ ನಮ್ಮ ಇಲಾಖೆಯ ಅಧಿಕಾರಿಗಳು ಮಾಡಬೇಕು. ಅಲ್ಲದೆ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಅಳವಡಿಸಿಬೇಕು. ಜಾತ್ರೆಯ ದಿನದಂದು ಅಂ-ದಾಜು 8 ರಿಂದ 10 ಲಕ್ಷ ಜನರು ಸೇರುವುದರಿಂದ ಸೂಕ್ತ ಸಾರಿಗೆ ಜೊತೆಗೆ ಎಲ್ಲಾ ಕಡೆ ಲೈಟಿಂಗ್ ವ್ಯವಸ್ಥೆಯಾಗಬೇಕೆಂದು ಹೇಳಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಸಹಾಯಕ ಆಯುಕ್ತರಾದ ಮಹೇಶ್ ಮಾಲಗಿತ್ತಿ. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್. ಕೊಪ್ಪಳ ತಹಶಿಲ್ದಾರ ವಿಠಲ್ ಚೌಗಲಾ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಯ ಆರಕ್ಷಕ ನಿರೀಕ್ಷಕರಾದ ನಾಗರಾಜ ಆರ್. ನಿರ್ಮಿತಿ ಕೇಂದ್ರದ ಶಶಿಧರ. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ. ಗವಿಸಿದ್ದೇಶ್ವರ ಮಠದ ಭಕ್ತರಾದ ಬಸವರಾಜ ಬಳ್ಳೊಳ್ಳಿ. ಶರಣು ಶೆಟ್ಟರ್ ಸೇರಿದಂತೆ ಲೋಕೋಪಯೋಗಿ ಇಲಾಖೆ. ಸಾರಿಗೆ. ಜೆಸ್ಕಾಂ. ನಗರಸಭೆ. ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜ. 06 ರಂದು ಬೃಹತ್ ಪ್ರತಿಭಟನೆ ಮೂಲಕ ಕೊಪ್ಪಳ ಬಂದ್ ಗೆ ಕರೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಆರ್‌ಪಿ ರಾಜೂರ ಮಾತನಾಡಿ ಅವರು ಇದೇ ಡಿ.17 ರಂದು ಸಂಸತ್ತಲ್ಲಿ ಕೇಂದ್ರ ರಕ್ಷಣಾ ಮಂತ್ರಿಯಾದ ಅಮೀತ್ ಷಾ ಸಂವಿಧಾನ ಶಿಲ್ಪಿಯಾದ ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಅವಮಾನ ಆಗುವ ರೀತಿಯಲ್ಲಿ ಮಾತನಾಡಿದ್ದಾರೆ. ಅವರ ಹೇಳಿಕೆಯನ್ನು ಖಂಡಿಸಿ ಕೊಪ್ಪಳ ಜಿಲ್ಲೆಯ ಎಲ್ಲಾ ತಾಲೂಕಿನ ವಿವಿಧ ಸಂಘಟನೆಗಳು ಸೇರಿ-ಕೊಂಡು ಸಂವಿಧಾನ ಸಂರಕ್ಷಣಾ ಸಮಿತಿಯ ಮುಂದಾಳತ್ವದಲ್ಲಿ ಅಮೀತ್ ಷಾರನ್ನು ಗಡಿಪಾರು ಮಾಡುವಂತೆ ಒತ್ತಾಯಿಸಿ ಪ್ರತಿಭಟನಾ ರ್‍ಯಾಲಿ ಯನ್ನು ಹಮ್ಮಿಕೊಳ್ಳವಾಗಿದೆ ಎಂದು ತಿಳಿಸಿದರು. ಈ ವೇಳೆಯಲ್ಲಿ ನಿಂಗಪ್ಪ ಬೆಣಕಲ್ ಮಾತನಾಡಿ ಪ್ರತಿಭಟನೆಯಲ್ಲಿ ಬೈಕ್ ರ್‍ಯಾಲಿ, ಆಟೋ ರ್‍ಯಾಲಿ ಹಾಗೂ ಮೆರವಣಿಗೆ ಮೂಲಕ ನಗರದ ತಾಲೂಕ ಕ್ರೀಡಾಂಗಣದಿಂದ ಪ್ರಾರಂಭಿಸಿ ಪ್ರಮುಖ ಬೀದಿಗಳಲ್ಲಿ ಪ್ರತಿಭಟನೆ ರ್‍ಯಾಲಿ ನೆಡೆಯಲಿದೆ, ಸಾರ್ವಜನಿಕರು ಈ ಪ್ರತಿಭಟನಾ ರ್‍ಯಾಲಿಗೆ ಸಹಕರಿಸಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಗೆದಗೆಪ್ಪಜ್ಜ ಇಟಗಿ, ಭೀಮಣ್ಣ ನಡುವಲಮನಿ, ಪ್ರಶಾಂತ್

ಆರ್ ಬೆರಳಿನ, ರಾಘವೇಂದ್ರ ಕಾತರಕಿ, ನಿಂಗಪ್ಪ ಗೊರ್ಲೆಕೊಪ್ಪ, ಈರಪ್ಪ ಹಿರೇಮನಿ, ಹನಮಂತಪ್ಪ ಮುತ್ತಾಳ ಹಾಗೂ ಇತರರಿದ್ದರು.

# ಇಟಗಾ; ಪಿಕೆಪಿಎಸ್ 12 ಸ್ಥಾನಗಳಿಗೆ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲೂಕಿನ ಇಟಗಾ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಯ ಚುನಾವಣೆಯಲ್ಲಿ 12 ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆ ನಡೆದಿದೆ. ಒಟ್ಟು 12 ನಿರ್ದೇಶಕರ ಸ್ಥಾನಗಳ ಪೈಕಿ 12 ಸ್ಥಾನಗಳಿಗೆ ಅವಿರೋಧವಾಗಿ ಆನಂದ ಸಾಗರ ಸಂಗಪ್ಪ, ಸಂತೋಷ ಬಸವಣ್ಣಪ್ಪ, ಬಸಪ್ಪ ನಿಂಗಪ್ಪ, ಶಂಕರ ಯಂಕಪ್ಪ, ಅಣ್ಣೆಪ್ಪ ಶಂಕ್ರಪ್ಪ, ಕಸ್ತೂರಬಾಯಿ ಸಂಗಪ್ಪ, ಕಲಾವತಿ ವೆಂಕಟರೆಡ್ಡಿ, ಪ್ರಭು ಭೀಮಶಾ, ಜೈಭೀಮ ಪುಂಡಲೀಕ, ಮಂಜುನಾಥ ಅಂಬಣ್ಣ, ಎಂಡಿ ಇಸ್ಮಾಯಿಲ್ ರುಕ್ಕಮೋದ್ದಿನ ಮತ್ತು ಸಾಲಗಾರರಲ್ಲದ ಮತಕ್ಷೇತ್ರದಿಂದ ಮಾಣಿಕಪ್ಪ ರಾಮಶೇಟ್ಟಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಭೀಮಪ್ರಕಾಶ ಸೊನಕಾಂಬಳೆ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಪಿಕೆಪಿಎಸ್ ಮುಖ್ಯ ಕಾರ್ಯನಿರ್ವಾಹಕ ದೀಪಿಕಾ ಇದ್ದರು.

# ಎಳ್ಳು ಅಮಾವಾಸ್ಯೆ ಹಬ್ಬ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಇಂಡಿ: ಉತ್ತರ ಕರ್ನಾಟಕದ ವಿಶೇಷವಾದ ರೈತ ಸುಗ್ಗಿ ಹಬ್ಬ ಎಳ್ಳು ಅಮಾವಾಸ್ಯೆ ಹಬ್ಬದ ಅಂಗವಾಗಿ ತಾಲೂಕಿನ ಏಳಗಿ ಗ್ರಾಮದ ರೈತ ಅನಿಲ್ ಪ್ರಸಾದ್ ತೋಟದಲ್ಲಿ ರೈತರು ಸಡಗರ ಸಂಭ್ರಮದಿಂದ ಆಚರಿಸುವ ಈ ಹಬ್ಬಕ್ಕೆ ರೈತರು ತಮ್ಮ ಸ್ನೇಹ ಸಂಬಂಧಿ ಹಾಗೂ ನೆಂಟರೆಷ್ಟರನ್ನು ಆಹ್ವಾನ ನೀಡಿ ತಮ್ಮ ಹೊಲಕ್ಕೆ ತೆರಳಿ ರೈತರ ಬೆಳೆದ ಬೆಳೆಯ ನಡುವೆ ಸಾಮೂಹಿಕವಾಗಿ ಕುಳಿತು ಭೋಜನ ಸವಿಯುವ ಮೂಲಕ ಹಬ್ಬ ಆಚರಿಸಲಾಯಿತು.

# ಜಿಲ್ಲಾ ಬಾಲಕಾರ್ಮಿಕ ಯೋಜನೆ: ತಪಾಸಣೆ, ವಿವಿಧಡೆ ದಾಳಿ



(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ


ಕೊಪ್ಪಳ : ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನೆಯಡಿ ಜಿಲ್ಲೆಯ ವಿವಿಧೆಡೆ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕರ ತಪಾಸಣೆ ಹಾಗೂ ಖಾಸಗಿ ವಾಹನಗಳಲ್ಲಿ ಮಕ್ಕಳ ಸಾಗಣಿಕೆ ಕಾರ್ಯಾಚರಣೆ ಮೂಲಕ ಬಾಲ ಮತ್ತು ಕಿಶೋರ ಕಾರ್ಮಿಕರನ್ನು ರಕ್ಷಿಸಿ ಅವರಿಗೆ ಪುನರ್ವಸತಿಗೊಳಿಸಲಾಗಿದೆ.

ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ಮುಸಲಾಪುರ ಗ್ರಾಮದ ಸುತ್ತಮುತ್ತಲಿನ ಹಳ್ಳಿಗಳಲ್ಲಿ ಡಿಸೆಂಬರ್ 18 ರಂದು ತೆರೆದ ವಾಹನಗಳಲ್ಲಿ ಕೃಷಿ ಚಟುವಟಿಕೆಗಾಗಿ ಮಕ್ಕಳನ್ನು ಸಾಗಣೆ ಮಾಡುವ ವಾಹನಗಳನ್ನು ಆರ್.ಟಿ.ಓ ಅಧಿಕಾರಿಗಳ ಜೊತೆಗೂಡಿ ತಪಸಣೆ ನಡೆಸಲಾಯಿತು. ಈ ಸಮಯದಲ್ಲಿ ವಾಹನಗಳಲ್ಲಿ ಪತ್ತೆಯಾದ ಸುಮಾರು 12 ಅಪ್ರಾಪ್ತ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ಸಮೀಪದ ಶಾಲೆಗಳಿಗೆ ದಾಖಲಿಸಲಾಯಿತು. ಹಾಗೂ ಕಟ್ಟಡ ನಿರ್ಮಾಣ ಕಾರ್ಯಕ್ಕೆ ತೆರಳುತ್ತಿದ್ದ 2 ಬಾಲಕರನ್ನು ವಶಕ್ಕೆ ಪಡೆದು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಯಿತು. ಕೆಲಸಕ್ಕಾಗಿ ತೆರಳುವ ಬಾಲಕಾರ್ಮಿಕರ ತಪಾಸಣೆ ಹಾಗೂ ಖಾಸಗಿ ವಾಹನಗಳಲ್ಲಿ ಮಕ್ಕಳ ಸಾಗಣೆ ಕುರಿತು ತಪಾಸಣೆ, ದಾಳಿಯನ್ನು ಮಾಡಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ಬಸವರಾಜ ಹಿರೇಗೌಡ್ರ, ಗಂಗಾವತಿ ಕಾರ್ಮಿಕ ನಿರೀಕ್ಷಕ ಅಶೋಕ ಎಮ್., ಆರ್.ಟಿ.ಓ ಅಧಿಕಾರಿ ಲಕ್ಷ್ಮೀಕಾಂತ್ ನಾಲ್ವರ್ ಹಾಗೂ ಮಕ್ಕಳ ಸಹಾಯವಾಣಿ-1098 ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈ ಸಮಯದಲ್ಲಿ ಸಾರ್ವಜನಿಕರಿಗೆ ಕರಪತ್ರಗಳನ್ನು ಹಂಚುವುದರ ಮೂಲಕ 18 ವರ್ಷದ ಒಳಗಿನ ಯಾವುದೇ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ ಜಾಗೃತಿ ಮೂಡಿಸಲಾಯಿತು.

# ಸಚಿವ ಪ್ರಿಯಾಂಕ್ ಖರ್ಗೆ ಹೆಸರು ಎಳೆದು ತರುತ್ತಿರುವುದಕ್ಕೆ ಶಾಸಕ ಚೆನ್ನಾರೆಡ್ಡಿ ಪಾಟೀಲ ತುನ್ನೂರು ಖಂಡನೆ.



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೆಸರನ್ನು ಅನಗತ್ಯವಾಗಿ ಎಳೆದು ತರಲಾಗುತ್ತಿದೆ. ಡೆತ್ ನೋಟ್ ನಲ್ಲಿ ಅವರ ಹೆಸರು ಉಲ್ಲೇಖಲಾಗಿಲ್ಲ ಆದರೂ ಅವರ ವಿರುದ್ದ ಬಿಜೆಪಿಯ ಷಡ್ಯಂತ್ರ ರೂಪಿಸುತ್ತಿದ್ದು ಪ್ರಕರಣವನ್ನು ಸಿಬಿಐ ವಹಿಸುವಂತೆ ಒತ್ತಾಯಿಸುತ್ತಿದೆ. ಇದು ಖಂಡನಾರ್ಹವಾಗಿದೆ ಎಂದು ಶಾಸಕ ಚೆನ್ನಾರೆಡ್ಡಿ ಪಾಟೀಲ ತುನ್ನೂರು ಹೇಳಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಪ್ರಕರಣವನ್ನು ಈಗಾಗಲೇ ಸಿಐಡಿ ತನಿಖೆಗೆ ವಹಿಸಲಾಗಿದೆ. ರಾಜ್ಯದ ಪೊಲೀಸರು ಸಮರ್ಥರಿದ್ದು ಪ್ರಕರಣದ ಸತ್ಯಾಸತ್ಯತೆಯನ್ನು ಹೊರತರಲಿದ್ದಾರೆ. ಹಾಗಾಗಿ ಸಿಬಿಐ ಗೆ ವಹಿಸುವ ಪ್ರಮೇಯವೇ ಇಲ್ಲ ಹಾಗೂ ಸಚಿವರು ರಾಜೀನಾಮೆ ನೀಡುವ ಅವಶ್ಯಕತೆಯೇ ಇಲ್ಲ. ಪ್ರಿಯಾಂಕ್ ಖರ್ಗೆ ಒಬ್ಬ ದಕ್ಷ ಹಾಗೂ ಪ್ರಾಮಾಣಿಕ ಸಚಿವರಾಗಿದ್ದು ಅವರಿಗೆ ವಹಿಸಿದ ಐಟಿ ಬಿಟಿ ಖಾತೆಯಲ್ಲಿ ಗಮನಾರ್ಹ ಸಾಧನೆ ಮಾಡಿದ್ದು ಚಿಕ್ಕ ವಯಸ್ಸಿನಲ್ಲಿಯೇ ಅವರು ರಾಜಕೀಯವಾಗಿ ಎತ್ತರಕ್ಕೆ ಏರುತ್ತಿರುವುದನ್ನು ಸಹಿಸಲಾಗದೇ ಬಿಜೆಪಿ ನಾಯಕರು ಹೊಟ್ಟೆಕಿಚ್ಚಿನಿಂದ ಈ ಪ್ರಕರಣವನ್ನು ತಮ್ಮ ಕೀಳು ಮಟ್ಟದ ರಾಜಕೀಯಕ್ಕೆ ಬಳೆಸುತ್ತಿದ್ದಾರೆ. ಇದು ಅತ್ಯಂತ ಹೇಯವಾಗಿದ್ದು ಖಂಡನಾರ್ಹವಾಗಿದೆ.

ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷ ಹಾಗೂ ವೈಯಕ್ತಿಕವಾಗಿ ನಾನು ಸಚಿವರ ಬೆನ್ನಿಗಿದ್ದೇವೆ. ತನಿಖೆಯ ನಂತರ ಬಿಜೆಪಿಯ ಷಡ್ಯಂತ್ರ ಬಯಲಿಗೆ ಬರಲಿದೆ. ವಿರೋಧ ಪಕ್ಷವಾಗಿ ವೈಫಲ್ಯವಾಗಿರುವ ಬಿಜೆಪಿ ಸುಳ್ಳು ಅಪಾದನೆ ಮಾಡುತ್ತಾ ಸರ್ಕಾರಕ್ಕೆ ಹಾಗೂ ಸಚಿವರಿಗೆ ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದೆ. ಬಿಜೆಪಿಯ ಎಲ್ಲ ಆಟಗಳನ್ನು ಜನರು ಸೂಕ್ಷ್ಮವಾಗಿ ಗಮನಿಸುತ್ತಿದ್ದು ಸರಿಯಾದ ಪಾಠ ಕಲಿಸಲಿದ್ದಾರೆ.

# ಬಳ್ಳಾರಿ: ಸಾರಿಗೆಗೆ 'ಶಕ್ತಿ ಯೋಜನೆ'ಯ ಬಲ ಬಸ್ ಸಂಚಾರದಲ್ಲಿಯೂ ಗಣನೀಯ ಹೆಚ್ಚಳ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಯಿಂದ ಸಾರಿಗೆ ನಿಗಮಗಳಿಗೆ ಒಂದೆಡೆ ಆದಾಯ ಹರಿದುಬರುತ್ತಿದೆ. ಇನ್ನೊಂದೆಡೆ, ಸಾರಿಗೆ ವ್ಯವಸ್ಥೆಯ ಬಳಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಒತ್ತಡವೂ ಹೆಚ್ಚುತ್ತಿದ್ದು, ಇದನ್ನು ನಿವಾರಿಸಲು ಸಾರಿಗೆ ಇಲಾಖೆಯ ಬಳ್ಳಾರಿ ವಿಭಾಗವು ಬಸ್ ಮತ್ತು ಸರತಿ (ಟ್ರಿಪ್) ಸಂಖ್ಯೆಯನ್ನೂ ಹೆಚ್ಚಿಸುತ್ತಿದೆ. ಕಳೆದ ವರ್ಷ ಜೂನ್ 11 ರಂದು ಶಕ್ತಿ ಯೋಜನೆ ಆರಂಭವಾಗುವುದಕ್ಕೂ ಮೊದಲು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಳ್ಳಾರಿ ವಿಭಾಗದಲ್ಲಿದ್ದ ಬಸ್ ಗಳ ಸಂಖ್ಯೆ ಶಕ್ತಿ ಯೋಜನೆ ಜಾರಿಗೆ ಬಂದ ಒಂದೇ ವರ್ಷದಲ್ಲಿ ಬಸ್ ಗಳು ಏರಿಕೆಯಾಗಿವೆ. ಮಹಿಳೆಯರು ಮತ್ತು ಸಾರ್ವಜನಿಕರ ಪ್ರಯಾಣ ದಟ್ಟಣೆ ಕಡಿಮೆಗೊಳಿಸಲು ಸಾರಿಗೆ ಇಲಾಖೆಯು ತನ್ನ ಬಸ್ ಗಳ ಸರತಿ ಸೇವೆಗಳಲ್ಲಿಯೂ ಹೆಚ್ಚಿಸಿವೆ.


ಶಕ್ತಿ ಯೋಜನೆ ಬಂದ ಬಳಿಕ ಸಾರಿಗೆ ಸೇವೆ ಬಳಕೆ ಅಧಿಕವಾಗಿದೆ. ಜನರ ಸಂಚಾರ ಹೆಚ್ಚಾಗುತ್ತಿದೆ. ಜನರು ತಾವಿರುವ ಹಳ್ಳಿಗಳಿಗೆ ಬಸ್ ಸೇವೆ ಬರಲಿ ಎಂದು ಅಪೇಕ್ಷಿಸುತ್ತಿರುವ ಕಾರಣ ಹೊಸ ಹೊಸ ಜಾಗಗಳಿಗೆ ಬಸ್ ಸೇವೆ ನೀಡಲಾಗುತ್ತಿದೆ. ಹೀಗಾಗಿ ಬಸ್ ಗಳ ಸಂಖ್ಯೆ ಮತ್ತು ಸರತಿಯಲ್ಲಿ ಹೆಚ್ಚಳವಾಗುತ್ತಿದೆ. ಆದಾಯದಲ್ಲೂ ಹೆಚ್ಚಳ: ಶಕ್ತಿ ಯೋಜನೆ ಆರಂಭವಾದ 2023ರ ಜೂನ್ 11ರಿಂದ 2024ರ ನವೆಂಬರ್ ವರೆಗೆ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಬಳ್ಳಾರಿ ವಿಭಾಗದಲ್ಲಿ ಒಟ್ಟು 3,73,58,517 ಮಹಿಳೆಯರು ಸಂಚರಿಸಿದ್ದಾರೆ. ಇದರಲ್ಲಿ ವಯಸ್ಕರ ಸಂಖ್ಯೆ 3,58,89,773 ಆಗಿದ್ದರೆ, ಮಕ್ಕಳ ಸಂಖ್ಯೆ 14,68,744. ಇದರಿಂದ ಸಾರಿಗೆ ಸಂಸ್ಥೆಯ ಬಳ್ಳಾರಿ ವಿಭಾಗಕ್ಕೆ ಇಲ್ಲಿಯವರೆಗೆ ಒಟ್ಟು 1,35,10,15,030 ರೂ. ಆದಾಯ ಬಂದಿದೆ.

ತಾಲ್ಲೂಕುವಾರು ಸಾರಿಗೆ ಆದಾಯದ ವಿವರ (2023ರ ಜೂನ್ 11 ರಿಂದ 2024ರ ನವೆಂಬರ್ 30 ರವರೆಗೆ): ಬಳ್ಳಾರಿ: 2,08,94,579–ಮಹಿಳಾ ಪ್ರಯಾಣಿಕರು ಸಂಚರಿಸಿದ್ದು, ಒಟ್ಟು ವೆಚ್ಚ–70,56,50,800 ಆಗಿದೆ. ಸಿರುಗುಪ್ಪ: 61,12,136–ಮಹಿಳಾ ಪ್ರಯಾಣಿಕರು ಸಂಚರಿಸಿದ್ದು, ಒಟ್ಟು ವೆಚ್ಚ–24,95,52,930. ಕುರುಗೋಡು ಮತ್ತು ಕಂಪ್ಲಿ: 34,88,457–ಮಹಿಳಾ ಪ್ರಯಾಣಿಕರು, ಒಟ್ಟು ವೆಚ್ಚ–14,71,72,401.

ಸಂಡೂರು: 68,63,345–ಮಹಿಳಾ ಪ್ರಯಾಣಿಕರು, ಒಟ್ಟು ವೆಚ್ಚ–24,86,38,899. ಜಿಲ್ಲೆಯಲ್ಲಿ ಒಟ್ಟು 37358517 ಮಹಿಳಾ ಪ್ರಯಾಣಿಕರು ಸಂಚರಿಸಿದ್ದು, ಒಟ್ಟು 1,35,10,15,030 ರೂ. ವೆಚ್ಚವಾಗಿದೆ. ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳು ಸಾಮಾನ್ಯವಾಗಿ ಬೆಳಿಗ್ಗೆ ಮತ್ತು ಸಂಜೆ ಸಮಯದಲ್ಲಿ ಬಸ್ ಬಳಕೆಯು ಹೆಚ್ಚಾಗಿ ಕಂಡುಬರುತ್ತದೆ. ಪ್ರಯಾಣಿಕರ ದಟ್ಟಣೆಗೆ ಅನುಗುಣವಾಗಿ ಬಳ್ಳಾರಿ ವಿಭಾಗವು ಬಸ್ ಗಳನ್ನು ನಿಯೋಜನೆ ಮಾಡುತ್ತಿದೆ. ಎಲ್ಲ ಸಮಯದಲ್ಲೂ ಪ್ರಯಾಣಿಕರು ಬಸ್ ಗಳನ್ನು ಅಪೇಕ್ಷಿಸುತ್ತಿರುವುದರಿಂದ ಹೆಚ್ಚುವರಿ ಬಸ್ ಗಳನ್ನು, ಸರತಿ(ಟ್ರಿಪ್) ಗಳನ್ನು ಓಡಿಸಲಾಗುತ್ತಿದೆ. ಸ್ಕೂಲ್ ರೌಂಡ್ ಕಡ್ಡಾಯ: ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ತೆರಳುವ ಬೆಳಿಗ್ಗಿನ ಸಮಯದಲ್ಲಿ ಗ್ರಾಮೀಣ ಸಾರಿಗೆ ವ್ಯವಸ್ಥೆ ಮೇಲೆ ವಿಪರೀತ ಒತ್ತಡ ಉಂಟಾಗುವುದನ್ನು ಗಮನಿಸಿ ಒತ್ತಡ ತಗ್ಗಿಸುವ ಸಲುವಾಗಿ ದೂರದ ಜಿಲ್ಲೆಗಳಿಂದ ಬಳ್ಳಾರಿಗೆ ಬೆಳಿಗ್ಗೆ ಬರುವ ಬಸ್ ಗಳಿಗೆ ಒಂದು ಸರತಿ 'ಸ್ಕೂಲ್ ರೌಂಡ್' ಹೋಗಿ ಬರಲು ಸೂಚನೆ ನೀಡಲಾಗಿದೆ. ಅಗತ್ಯವಿರುವ ಕಡೆ ಸರ್ವೆ ಮಾಡಿ ಬಸ್ ಗಳ ವ್ಯವಸ್ಥೆ ತೊಂದರೆಗಳ ನಡುವೆಯೂ ಉತ್ತಮ ಸೇವೆ ನೀಡಲು ಪ್ರಯತ್ನಿಸುತ್ತಿದೆ. ಶಾಲಾ–ಕಾಲೇಜು ಮಕ್ಕಳಿಗಾಗಿ ಸಾರಿಗೆ ಸೇವೆಯೂ ಹೆಚ್ಚಿಸಲಾಗಿದೆ. ಕೆ–ಕೆಆರ್ ಡಿಬಿ ಮತ್ತು ಡಿಎಂಎಫ್ ಅಡಿಯಲ್ಲಿ ಮತ್ತಷ್ಟು ಹೆಚ್ಚು ಬಸ್ ಗಳು ಬಂದಿವೆ. ಕೆಕೆಆರ್ ಟಿಸಿ ಬಳ್ಳಾರಿ ವಿಭಾಗವು ಅಗತ್ಯ ಇರುವ ಕಡೆ ಸರ್ವೆ ಮಾಡಿ ಬಸ್ ಸೇವೆ ಒದಗಿಸುತ್ತಿದೆ.

ದುಡಿಯುವ ಮಹಿಳೆಯರಿಗೆ ಶಕ್ತಿ: ರಾಜ್ಯ ಸರ್ಕಾರದ ಪ್ರಮುಖ ಧ್ಯೇಯವು ದುಡಿಯುವ ಬಡವರ್ಗದ ಮಹಿಳೆಯರಿಗೆ ಆತ್ಮಸ್ಥೈರ್ಯ ತುಂಬುವುದು ಆಗಿದೆ. ಗ್ಯಾರಂಟಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯು ದುಡಿಯುವ ಮಹಿಳೆಯರಿಗೆ ಇನ್ನಷ್ಟು ಶಕ್ತಿ ತುಂಬುತ್ತಿದೆ. ಗ್ರಾಮೀಣ ಭಾಗದಲ್ಲಿ ಹೆಣ್ಣು ಕುಟುಂಬದ ಕಣ್ಣಾಗಿದ್ದು, ತನ್ನ ಕುಟುಂಬದ ಪೋಷಣೆಗಾಗಿ ಸಣ್ಣ ವ್ಯಾಪಾರ–ವಹಿವಾಟುಗಳಿಗೆ ನಗರಕ್ಕೆ ಮುಖಮಾಡಿ ಬರುವಾಗ ಅವಳ ಪ್ರಯಾಣದ ಖರ್ಚು ತನ್ನ ಆದಾಯದ ಅರ್ಧದಷ್ಟಾಗುತ್ತದೆ. ತಮ್ಮ ವ್ಯಾಪಾರ ವಹಿವಾಟು ನಡೆಸಲು ಅದರ ಭಾರವನ್ನು ಹೊರೆಯಾಗದಂತೆ ನಿರ್ವಹಿಸಲು ಈ ಯೋಜನೆಯು ಸಹಕಾರಿಯಾಗುತ್ತಿದೆ. ಶಕ್ತಿ ಯೋಜನೆ ಜಾರಿಯಾದ ನಂತರ ಮುಜರಾಯಿ ದೇಗುಲಗಳಿಗೆ ಭಕ್ತರ ಭೇಟಿ ಹೆಚ್ಚಿದೆ. ಇದ–ರಿಂದ ಬಹುತೇಕ ದೇವಾಲಯಗಳ ಆದಾಯವೂ ದುಪ್ಪಟ್ಟಾಗಿದೆ. ಕೋಟ್ 1: ಜೋಳ, ಕಡ್ಲೆ ಮತ್ತು ತರಕಾರಿ ಮಾರಲು ಪ್ರತಿನಿತ್ಯ ಬಳ್ಳಾರಿ ನಗರಕ್ಕೆ ಓಡಾಡುತ್ತೇನೆ. ಮುಂಚೆ ಹಣ ನೀಡಿ ಟಿಕೇಟ್ ಪಡೆ–ಯುತ್ತಿದ್ದೆ. ಸಿದ್ದರಾಮಯ್ಯನವರು ಜಾರಿಗೊಳಿಸಿದ ಶಕ್ತಿ ಯೋಜನೆಯಿಂದ ಫ್ರೀ ಟಿಕೇಟ್ ಪಡೆಯುತ್ತಿದ್ದು, ಉಳಿಯುವ ಟಿಕೇಟ್ ಹಣದಿಂದ ಬಹಳ ಅನುಕೂಲವಾಗುತ್ತಿದೆ. ಇನ್ನಷ್ಟು ವ್ಯಾಪಾರ ಕೈಗೊಳ್ಳಲು ಉತ್ತೇಜನ ದೊರಕಿದಂತಾಗಿದೆ. ಯೋಜನೆ ಜಾರಿಗೊಳಿಸಿದ ಸಿಎಂ ಸಿದ್ದರಾಮಯ್ಯ ಅವರಿಗೆ ಧನ್ಯವಾದ ಅರ್ಪಿಸುತ್ತೇನೆ.– ಈರಮ್ಮ, ಗಿರಿಜಮ್ಮ, ಸಣ್ಣ ವ್ಯಾಪಾರಿಗಳು, ಕೆ.ವೀರಾಪುರ, ಬಳ್ಳಾರಿ ತಾಲ್ಲೂಕು. ಕೋಟ್ 2: ಪ್ರತಿನಿತ್ಯ ವಿದ್ಯಾಭ್ಯಾಸಕ್ಕೆ ಬೆಳಿಗ್ಗೆ ಹಳ್ಳಿಯಿಂದ ಪಟ್ಟಣಕ್ಕೆ ತೆರಳುತ್ತೇನೆ. ಸಂಚರಿಸಲು ಬಸ್ ನಲ್ಲಿ ಯಾವುದೇ ವ್ಯತ್ಯಯವಿಲ್ಲ. ಸ್ಕೂಲ್ ಅವಧಿಯಂತೆ ಬಸ್ ಓಡಾಡುವುದರಿಂದ ಸಂಚಾರ–ಕ್ಕೆ ಅಡ್ಡಿಯಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರ ಜಾರಿಗೊಳಿಸಿದ ಶಕ್ತಿ ಯೋಜನೆಯಿಂದ ಸೊನ್ನೆ ಮೊತ್ತದ ಟಿಕೇಟ್ ಬರುತ್ತಿದ್ದು, ಪಾಸ್ ಗಾಗಿ ಬಳಸುತ್ತಿದ್ದ ಹಣದಿಂದ ಪುಸ್ತಕ, ಪೆನ್ ಖರೀದಿಸುತ್ತೇನೆ.– ರೇಣುಕಾ, ಪ್ರೌಢಶಾಲೆ ವಿದ್ಯಾರ್ಥಿನಿ, ಗೆಣಿಕೆಹಾಳ್ ಗ್ರಾಮ, ಕುರುಗೋಡು ತಾಲ್ಲೂಕು. ಕೋಟ್ 3: ನಮ್ಮ ಗ್ರಾಮದಿಂದ 35 ಕಿ.ಮೀ ದೂರದ ಪಟ್ಟಣಕ್ಕೆ ತೆರಳಿ ಮೂರು ತಿಂಗಳ ಕಂಪ್ಯೂಟರ್ ತರಬೇತಿ ಪಡೆದುಕೊಳ್ಳಲು ಸರ್ಕಾರದ ಶಕ್ತಿ ಯೋಜನೆಯಡಿ ಉಚಿತ ಪ್ರಯಾಣ ತುಂಬಾ ಉಪಯೋಗವಾಯಿತು. ಪ್ರಸ್ತುತ ಬ್ಯೂಟಿ ಪಾರ್ಲರ್ ತರಬೇತಿ ಪಡೆಯುತ್ತಿದ್ದೇನೆ. ಜೀವನ ರೂಪಿಸಿಕೊಳ್ಳಲು ಶಕ್ತಿ ಯೋಜನೆ ಅನುಕೂಲಕರವಾಗಿದ್ದು, ಪ್ರತಿ ತಿಂಗಳು 1,000 ರಿಂದ 1,500 ರೂ. ಉಳಿತಾಯವಾಗುತ್ತಿದೆ. ರಾಜ್ಯ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ.– ಅಶ್ವಿನಿ.ಹೆಚ್, ತೊಣಸಿಗೇರಿ ಗ್ರಾಮ, ಸಂಡೂರು ತಾಲ್ಲೂಕು. ಸರ್ಕಾರದ ಮಹತ್ವಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಾದ ಶಕ್ತಿ ಯೋಜನೆ, ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ ಮತ್ತು ಯುವನಿಧಿ ಯೋಜನೆಗಳನ್ನು ಎಲ್ಲ ಅರ್ಹ ಮಹಿಳೆಯರಿಗೆ ತಲುಪಿಸುವಲ್ಲಿ ಸರ್ಕಾರವೇ ನೇಮಿಸಿರುವ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ.ಇ.ಚಿದಾನಂದಪ್ಪ ಹಾಗೂ ಉಪಾಧ್ಯಕ್ಷರಾದ ಆಶಾ ಲತಾ ಸೋಮಪ್ಪ ಅವರು, ನಿರಂತರ ಶ್ರಮ ವಹಿಸುತ್ತಿದ್ದು, ಜಿಲ್ಲೆಯ ಜೊತೆಗೆ ಪ್ರತಿ ತಾಲ್ಲೂಕು ಮಟ್ಟದಲ್ಲಿಯೂ ಯೋಜನೆ ಅನುಷ್ಠಾನದ ಪ್ರಗತಿ ಪರಿಶೀಲನೆ ನಡೆಸುತ್ತಿದ್ದಾರೆ. ಶಕ್ತಿ ಯೋಜನೆ ಬಳಿಕ ಸಾರ್ವಜನಿಕ ಸಾರಿಗೆ ಬಸ್ ಗಳ ಬಳಕೆಯೂ ಹೆಚ್ಚಾಗಿದೆ. ಅದಕ್ಕೆ ಪೂರಕವಾಗಿ ಸಾರಿಗೆ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು ಎಂದು ಸಾರ್ವಜನಿಕರು ಅಭಿಪ್ರಾಯ

# ಜಿಲ್ಲೆಯಲ್ಲಿ ಸಹಜ ಹೆರಿಗೆಗೆ ಆದ್ಯತೆ ನೀಡಿ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಗಂಡಾಂತರ ಗರ್ಭಿಣಿಯರಿಗೆ ರಕ್ತಹೀನತೆಯನ್ನು ಆರಂಭದಲ್ಲಿಯೇ ನಿಯಂತ್ರಿಸಲು ಕಬ್ಬಿಣಾಂಶ ಮಾತ್ರೆಗಳನ್ನು ವೈದ್ಯರ ಸಲಹೆಯಂತೆ ತೆಗೆದುಕೊಳ್ಳಲು ವ್ಯಾಪಕ ಪ್ರಚಾರ ನೀಡಬೇಕು. ರಕ್ತಹೀನತೆ ಉಂಟಾಗುವುದು ತಡೆಗಟ್ಟುವ ಮೂಲಕ ಜಿಲ್ಲೆಯಲ್ಲಿ ಸಹಜ ಹೆರಿಗೆಯೊಂದಿಗೆ ತಾಯಿ ಮಗು ಮನೆಗೆ ಸಂತಸದಿಂದ ಮರಳುವಂತೆ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ತಾಯಿ ಮತ್ತು ಶಿಶು ಮರಣ ತಡೆಗಟ್ಟುವಿಕೆ ಕುರಿತ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕುಟುಂಬದ ಸದಸ್ಯರಿಗೆ ತಮ್ಮ ಮನೆಯಲ್ಲಿರುವ ಗರ್ಭಿಣಿ ಮಹಿಳೆಗೆ ವೈದ್ಯರ ಬಳಿ ತಪಾಸಣೆಗೆ ಒಳಪಟ್ಟ ನಂತರ ರಕ್ತ ಹೀನತೆಯನ್ನು ತಡೆಗಟ್ಟಲು ಕಬ್ಬಿಣಾಂಶ ಮಾತ್ರೆಗಳನ್ನು ನಿರ್ಲಕ್ಷ ವಹಿಸದೇ ತೆಗೆದುಕೊಳ್ಳಲು ಸೂಕ್ತ ಮಾಹಿತಿ ನೀಡಬೇಕು. ಗ್ರಾಮೀಣ ಪ್ರದೇಶದಲ್ಲಿ ತಾಯಂದಿರ ಆರೈಕೆ ಕುರಿತು ಕುಟುಂಬದ ಸದಸ್ಯರಿಗೆ ತಿಳಿ ಹೇಳಬೇಕು. ಚೊಚ್ಚಲು ಗರ್ಭಿಣಿ ಅವಧಿಯಲ್ಲಿ ಆರೋಗ್ಯ ಇಲಾಖೆಯು ವೈದ್ಯಕೀಯ ಕಾರಣಗಳಿಂದ ಗುರ್ತಿಸಲ್ಪಡುವ ಗಂಡಾಂತರ ಗರ್ಭಿಣಿ ಸಂದರ್ಭದಲ್ಲಿ ಹೆಚ್ಚಿನ ಕಾಳಜಿ ವಹಿಸಲು ಆದ್ಯತೆ ನೀಡಬೇಕು ಎಂದು ಹೇಳಿದರು.

ಕ್ಷೇತ್ರಮಟ್ಟದಲ್ಲಿ ವೈದ್ಯಾಧಿಕಾರಿಗಳಿಂದ ಹಿಡಿದು ಪ್ರತಿಯೊಬ್ಬ ಸಿಬ್ಬಂದಿಯವರು ಗಂಡಾಂತರ ಗರ್ಭಿಣಿ ಎಂದು ತಿಳಿದ ದಿನದಿಂದಲೇ ಕಬ್ಬಿಣಾಂಶ ಮಾತ್ರೆಗಳ ಕುರಿತು ಪಾಲಕರಲ್ಲಿ ತಪ್ಪು ನಂಬಿಕೆಗಳು ಇದ್ದಲ್ಲಿ ಹೆಚ್ಚಿನ ಜಾಗೃತಿ ನೀಡಬೇಕು. ಮಾತ್ರೆಗಳನ್ನು ಪ್ರತಿದಿನ ತಪ್ಪದೇ ನುಂಗಲು ತಿಳಿಸಬೇಕು. ವೈದ್ಯರ ಸಲಹೆ ಮೇರೆಗೆ ಸ್ಕ್ಯಾನಿಂಗ್, ರಕ್ತ ಪರೀಕ್ಷೆ, ಮೂತ್ರ ಪರೀಕ್ಷೆ, ಹೆಚ್.ಐ.ವಿ ಪರೀಕ್ಷೆ, ಅಗತ್ಯವೆನಿಸುವ ಇತರೆ ಪರೀಕ್ಷೆಗಳನ್ನು ಕಾಲ ಕಾಲಕ್ಕೆ ಮಾಡಿಸಲು ಸೂಚಿಸಬೇಕು ಎಂದರು. ತಾಯಿ ಕಾರ್ಡ್ನಲ್ಲಿ ಎಲ್ಲಾ ದಾಖಲೆಗಳ ವಿವರಗಳನ್ನು ಕಡ್ಡಾಯವಾಗಿ ನಮೂದಿಸಬೇಕು. ಗರ್ಭಿಣಿ ಮಹಿಳೆಯು ಯಾವುದೇ ಆಸ್ಪತ್ರೆಗೆ ತಪಾಸಣೆಗೆ ಹೋದ ಸಂದರ್ಭದಲ್ಲಿ ತಾಯಿ ಕಾರ್ಡ್ ಆಧಾರದ ಮೇಲೆ ಚಿಕಿತ್ಸೆ ಮುಂದುವರೆಸಬೇಕು.

ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳ ನೀರಿನ ಸಂಗ್ರಹಗಳನ್ನು ಪರೀಕ್ಷಿಸಬೇಕು. ಸೂಕ್ತ ಕಾರ್ಯ ಯೋಜನೆಯೊಂದಿಗೆ ಪೌಷ್ಟಿಕ ಆಹಾರ ಒದಗಿಸಬೇಕು ಎಂದು ಸೂಚಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, ಗರ್ಭಿಣಿಯರ ದ್ವಿತೀಯ ತ್ರೈಮಾಸಿಕ ಆರಂಭದ ನಂತರ ಒಂದು ಅಲ್ಬೆಂಡಜೋಲ್ ಮಾತ್ರೆಯನ್ನು ನೀಡಲಾಗುತ್ತಿದ್ದು, ರಕ್ತದಲ್ಲಿ ಹೆಚ್.ಬಿ ಪ್ರಮಾಣ 10 ಕ್ಕಿಂತ ಮೇಲ್ಪಟ್ಟವರಿಗೆ ಪ್ರತಿ ದಿನ ಒಂದರಂತೆ 180 ಕಬ್ಬಿಣಾಂಶ ಮಾತ್ರೆಗಳು, ಹೆಚ್.ಬಿ ಪ್ರಮಾಣ 9 ರಿಂದ 10 ಮಧ್ಯದಲ್ಲಿರುವವರಿಗೆ ಪ್ರತಿ ದಿನ 2 ರಂತೆ 360 ಕಬ್ಬಿಣಾಂಶ ಮಾತ್ರೆಗಳು, ಹೆಚ್.ಬಿ.ಪ್ರಮಾಣ 7 ರಿಂದ 9 ಇರುವವರಿಗೆ 5 ಬಾರಿ ಐರನ್ ಸುಕ್ರೋಸ್ ಚುಚ್ಚುಮದ್ದು ನೀಡಲಾಗುವುದು ಎಂದು ಸಭೆಗೆ ತಿಳಿಸಿದರು. ಒಂದು ವೇಳೆ 7 ಕ್ಕಿಂತ ಕಡಿಮೆ ಇದ್ದಲ್ಲಿ ರಕ್ತ ಹಾಕಿಸುವ ಕಾರ್ಯ ಮಾಡಲಾಗುತ್ತಿದ್ದು, ಎಲ್ಲಾ ಗರ್ಭಿಣಿಯರಿಗೂ ಕ್ಯಾಲ್ಸಿಯಂ ಮಾತ್ರೆಯನ್ನು ನೀಡಲಾಗುತ್ತಿದೆ. ಪ್ರತಿ ತಿಂಗಳು ವೈದ್ಯರ ಮೂಲಕ ತಪಾಸಣೆಯನ್ನು 7ನೇ ತಿಂಗಳವರೆಗೆ, 7 ರಿಂದ 9 ತಿಂಗಳಲ್ಲಿ ಪ್ರತಿ 15 ದಿನಕ್ಕೊಮ್ಮೆ ತಪಾಸಣೆ ಹಾಗೂ 9 ತಿಂಗಳ ನಂತರ ಪ್ರತಿ ವಾರ ವೈದ್ಯರ ಮೂಲಕ ತಪಾಸಣೆ ಮಾಡಿಸುವ ಜೊತೆಗೆ ಪ್ರತಿ ತಿಂಗಳು 09ನೇ ಮತ್ತು 20ನ ತಾರೀಖಿನಂದು ಎಲ್ಲಾ ಗರ್ಭಿಣಿಯರ ತಪಾಸಣೆ ಕೈಗೊಂಡು ಜಾಗೃತಿ ನೀಡಲಾಗುತ್ತಿದೆ ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹ ಅಧಿಕಾರಿ ರಾಹುಲ್ ಎಸ್.ಸಂಕನೂರು, ಬಿಮ್ಸ್ ನಿರ್ದೇಶಕ ಡಾ.ಗಂಗಾಧರ ಗೌಡ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸರೆಡ್ಡಿ, ಜಿಲ್ಲಾ ಆರ್ ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಬಿಮ್ಸ್ ತಜ್ಞರಾದ ಡಾ.ಚಂದ್ರಶೇಖರ್, ಡಾ.ಶ್ರೀಕಾಂತ, ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿಗಳು, ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ವಿಕಲಚೇತನರ ರಿಯಾಯಿತಿ ಬಸ್ ಪಾಸ್ ಗಳ ನವೀಕರಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.31: 2025ನೇ ಸಾಲಿಗಾಗಿ ಜ.01 ರಿಂದ ಡಿ.31 ರವರೆಗೆ ವಿಕಲಚೇತನರ ರಿಯಾಯಿತಿ ಬಸ್ ಪಾಸ್ ಗಳನ್ನು ಮಾನ್ಯತೆ ಇರುವಂತೆ ಫಲಾನುಭವಿಗಳು ನವೀಕರಣ ಮಾಡಿಕೊಳ್ಳಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಇನಾಯತ್ ಬಾಗ್ ಬಾನ್ ಅವರು ತಿಳಿಸಿದ್ದಾರೆ. ವಿಕಲಚೇತನರ ರಿಯಾಯಿತಿ ಬಸ್ ಪಾಸ್ ಗಳನ್ನು ನವೀಕರಣ ಮಾಡಿಕೊಳ್ಳಲು ಸಾಕಷ್ಟು ಕಾಲಮಿತಿ ನೀಡುವ ಉದ್ದೇಶದಿಂದ 2024 ನೇ ಸಾಲಿನಲ್ಲಿ ವಿತರಿಸಲಾಗಿರುವ ಅಂದರೆ 2024ರ ಡಿ.31ರ ವರೆಗೆ ಮಾನ್ಯತೆ ಇರುವ ವಿಕಲಚೇತನರ ಪಾಸ್ ಗಳನ್ನು ನವೀಕರಿಸದೇ 2025ರ ಫೆ.28ರ ವರೆಗೆ ಮಾನ್ಯತೆ ನೀಡಲಾಗಿದ್ದು, ಆ ದಿನಾಂಕದವರೆಗೆ ವಿಕಲಚೇತನರು ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸಲು ಅವಕಾಶ ನೀಡಲಾಗಿದೆ. 2024ನೇ ಸಾಲಿನಲ್ಲಿ ವಿತರಣೆ ಮಾಡಿದ ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸ್ ಗಳನ್ನು 06 ಜನವರಿ 2025 ರಿಂದ 28 ಫೆಬ್ರವರಿ 2025 ರ ಒಳಗೆ ಎಲ್ಲಾ ಸೂಕ್ತ ದಾಖಲಾತಿಗಳೊಂದಿಗೆ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಿ, ಪಾಸ್ ಶುಲ್ಕ ರೂ.660 ಗಳನ್ನು ಪಾವತಿಸಿ, ಬಳ್ಳಾರಿ ಕೇಂದ್ರೀಯ ಬಸ್ ನಿಲ್ದಾಣ ಹಾಗೂ ಸಿರುಗುಪ್ಪ, ಕುರುಗೋಡು, ಸಂಡೂರು ಘಟಕಗಳಲ್ಲಿ ವಿಕಲಚೇತನ ಫಲಾನುಭವಿಗಳು ನವೀಕರಣ ಮಾಡಿಸಿಕೊಳ್ಳಬಹುದಾಗಿದೆ. ಫೆ.28ರ ನಂತರ ಬರುವ ಬಸ್ ಪಾಸ್ ಗಳನ್ನು ನವೀಕರಿಸಲಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಲೋಕೇಶ್ ರಾಠೊಡ
# ಖೇಲೊ ಇಂಡಿಯಾ ಯುನಿವರ್ಸಿಟಿ ಗೇಮ್ಸ್ ಗೆ ಆಯ್ಕೆ



ಬಳ್ಳಾರಿ,ಡಿ.31: ಒಡಿಸ್ಸಾದ ಕಳಿಂಗ ವಿಶ್ವವಿದ್ಯಾಲಯ ಭುವನೇಶ್ವರದಲ್ಲಿ ನಡೆದ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಪುರುಷ ಮತ್ತು ಮಹಿಳೆಯರ ಅಥ್ಲೆಟಿಕ್ ಪಂದ್ಯಾವಳಿಯಲ್ಲಿ ಬಳ್ಳಾರಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಲೋಕೇಶ್ ರಾಠೊಡ (ಜಿ.ಬಿ.ಆರ್ ಕಾಲೇಜ್, ಹೂವಿನಹಡಗಲಿ) ಡೆಕ್ಯಾಥ್ಲಾನ್ ನಲ್ಲಿ 6258 ಅಂಕಗಳನ್ನು ಪಡೆಯುವುದರ ಮೂಲಕ ಅಖಿಲಭಾರತ ಅಂತರ ವಿಶ್ವವಿದ್ಯಾಲಯ ಕ್ರೀಡಾಕೂಟದಲ್ಲಿ 6 ನೇ ಸ್ಥಾನ ಹೊಂದಿ ಖೇಲೊ ಇಂಡಿಯಾ ಯುನಿವರ್ಸಿಟಿ ಗೇಮ್ಸ್ 2025 ಗೆ ಅರ್ಹತೆ ಪಡೆದಿದ್ದಾನೆ.

ಇದು ಅಥ್ಲೇಟಿಕ್ಸ್ ನಲ್ಲಿ ಬಳ್ಳಾರಿ ವಿವಿಯ ಶ್ರೇಷ್ಠ ಸಾಧನೆಯಾಗಿದೆ. ವಿಶ್ವವಿದ್ಯಾಲಯದ ಕುಲಪತಿಗಳು, ಕುಲಸಚಿವರು(ಆಡಳಿತ), ಕುಲಸಚಿವರು (ಮೌಲ್ಯಮಾಪನ), ಹಣಕಾಸು ಅಧಿಕಾರಿಗಳು, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗ ಹಾಗೂ ಅಥ್ಲೆಟಿಕ್ಸ್ ತಂಡದ ವ್ಯವಸ್ಥಾಪಕರು ಮತ್ತು ತರಬೇತುದಾರರಾದ ಡಾ.ಶಶಿಧರ ಕೆಲ್ಲೂರ ಮತ್ತು ಬಡೇಸಾಬ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಶುಭ ಕೋರಿದ್ದಾರೆ.

# ಮಹಿಳೆಯರು ಸೃಜನಾತ್ಮಕ ಕೌಶಲ್ಯ ಬೆಳೆಸಿಕೊಳ್ಳಬೇಕು: ಗಿರೀಶ್.ವಿ ಕುಲಕರ್ಣಿ




ಬಳ್ಳಾರಿ,ಡಿ.31: ಮಹಿಳಾ ಸಬಲೀಕರಣ ಸಮಾಜದಲ್ಲಿ ಬಹುಮುಖ್ಯವಾಗಿದ್ದು, ಮಹಿಳೆಯರು ವಿವಿಧ ರೀತಿಯ ಸ್ವ–ಉದ್ಯೋಗ ಮಾಡಲು ಸೃಜನಾತ್ಮಕ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದು ಕೆನರಾ ಬ್ಯಾಂಕ್ ನ ಲೀಡ್ ಡಿಸ್ಟ್ರಿಕ್ ಮ್ಯಾನೇಜರ್ ಗಿರೀಶ ವಿ ಕುಲಕರ್ಣಿ ಅವರು ಹೇಳಿದರು. ಕೆನರಾ ಬ್ಯಾಂಕ್ ವತಿಯಿಂದ ಉಚಿತ ಹೊಲಿಗೆ ಯಂತ್ರ ತರಬೇತಿ ಹೊಂದಿದ ಮಹಿಳೆಯರಿಗೆ ಸಂಸ್ಥೆಯ ಆವರಣದಲ್ಲಿ ಮಂಗಳವಾರ ಟೂಲ್ ಕಿಟ್ ವಿತರಿಸಿ ಅವರು ಮಾತನಾಡಿದರು. ಮಹಿಳೆಯರು ಮನೆಯಲ್ಲಿ ಕುಳಿತು ಟೈಲರಿಂಗ್ ಮಾಡುವುದರಿಂದ ಸ್ವಾವಲಂಬಿ ಜೀವನ ರೂಪಿಸಿಕೊಳ್ಳುತ್ತಾರೆ ಹಾಗೂ ಸಮಾಜದಲ್ಲಿ ಉತ್ತಮ ಜೀವನ ನಡೆಸಲು ಈ ಹೋಲಿಗೆ ತರಬೇತಿ ಸಹಕಾರಿಯಾಗಲಿದೆ ಎಂದರು. ಕೆನರಾ ಬ್ಯಾಂಕ್ ನ ವಿಭಾಗೀಯ ಪ್ರಬಂಧಕರಾದ ಮಾಲತಿ ಅವರು ಮಾತನಾಡಿ, ಮಹಿಳೆಯರು ಮನೆಯಲ್ಲಿ ಟೈಲರಿಂಗ್ ಮಾಡಿಕೊಂಡು ಆರ್ಥಿಕವಾಗಿ ಕುಟುಂಬ ನಿರ್ವಹಣೆಗೆ ಸಹಕಾರಿಯಾಗುತ್ತದೆ ಎಂದು ಹೇಳಿದರು. ನಿರ್ದೇಶಕರಾದ ರಾಜೆಸಾಬ್.ಎಚ್ ಎರಿಮನಿ ಮಾತನಾಡಿ, ಸಂಸ್ಥೆಯ ತರಬೇತಿಯಲ್ಲಿ ಕೌಶಲ್ಯದ ಜೊತೆಗೆ ಆತ್ಮವಿಶ್ವಾಸ, ವ್ಯಕ್ತಿತ್ವ ವಿಕಸನದ ಮಾಹಿತಿ ನೀಡಲಾಗುತ್ತಿದ್ದು, ತಮ್ಮ ವೃತ್ತಿ ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ತಿಳಿಸಿದರು. ಈ ಸಂಧರ್ಭದಲ್ಲಿ ಜಿಲ್ಲಾ ಪಂಚಾಯತ್ ನ ಎನ್ ಆರ್ ಎಲ್ ಎಂ ಘಟಕದ ರಾಜೇಂದ್ರ ವಿಜಯ ಕುಮಾರ ಸೇರಿದಂತೆ ಜಡೆಪ್ಪ, ದಿನೇಶ, ಸಿದ್ದಲಿಂಗಮ್ಮ, ಮಂಜುಳಾ, ಸಂತೋಷ ಕುಮಾರ್, ಕಿರಣ ಕುಮಾರ ಹಾಗೂ ಶಿಭಿರಾರ್ಥಿಗಳು ಇದ್ದರು.

# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ: ಗುತ್ತಿಗೆ ಆಧಾರದಡಿ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಡಿ.31: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ವಿವಿಧ ತಾತ್ಕಾಲಿಕ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಮುಖ್ಯ ಕಾನೂನು ನೆರವು ಅಭಿರಕ್ಷಕರ ಹುದ್ದೆ 01, ಉಪ ಕಾನೂನು ನೆರವು ಅಭಿರಕ್ಷಕರ ಹುದ್ದೆ 01 ಮತ್ತು ಸಹಾಯಕ ಕಾನೂನು ನೆರವು ಅಭಿರಕ್ಷಕರ ಹುದ್ದೆ 01 ಇವುಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು. ಮಾಹೆಯಾನ ಮುಖ್ಯ ಕಾನೂನು ನೆರವು ಅಭಿರಕ್ಷಕರ ಮಾಸಿಕ ವೇತನ ರೂ.70,000, ಉಪ ಕಾನೂನು ನೆರವು ಅಭಿರಕ್ಷಕರ ಮಾಸಿಕ ವೇತನ ರೂ.45,000 ಮತ್ತು ಸಹಾಯಕ ಕಾನೂನು ನೆರವು ಅಭಿರಕ್ಷಕರ ವೇತನ ರೂ.30,000 ಸಂಚಿತ ಸಂಭಾವನೆ ನೀಡಲಾಗುವುದು. *ವಿದ್ಯಾರ್ಹತೆ:*

*ಮುಖ್ಯ ಕಾನೂನು ನೆರವು ಅಭಿರಕ್ಷಕರ ಹುದ್ದೆ:*

ಕನಿಷ್ಠ 10 ವರ್ಷಗಳ ಕಾಲ ಕ್ರಿಮಿನಲ್ ಕಾನೂನಿನಲ್ಲಿ ಅಭ್ಯಾಸ ಮಾಡಿರಬೇಕು. ಅತ್ಯುತ್ತಮ ಮೌಖಿಕ ಮತ್ತು ಲಿಖಿತ ಸಂವಹನ ಕೌಶಲ್ಯ ಹೊಂದಿರಬೇಕು. ಕ್ರಿಮಿನಲ್ ಕಾನೂನಿನ ಅತ್ಯುತ್ತಮ ತಿಳುವಳಿಕೆ, ರಕ್ಷಣಾ ಸಲಹೆಗಾರರ ನೈತಿಕ ಕರ್ತವ್ಯಗಳ ಸಂಪೂರ್ಣ ತಿಳುವಳಿಕೆ, ಸೆಷನ್ಸ್ ನ್ಯಾಯಾಲಯಗಳಲ್ಲಿ ಕನಿಷ್ಠ 30 ಕ್ರಿಮಿನಲ್ ವಿಚಾರಣೆಗಳನ್ನು ನಿರ್ವಹಿಸಿರಬೇಕು. 30 ಕ್ರಿಮಿನಲ್ ಪ್ರಕರಣಗಳ ನಿರ್ವಹಣೆಯ ಮೇಲಿನ ಷರತ್ತುಗಳನ್ನು ಸೂಕ್ತ ಸಂದರ್ಭಗಳಲ್ಲಿ ಸಡಿಲಿಸಬಹುದು. ಕಂಪ್ಯೂಟರ್ ವ್ಯವಸ್ಥೆಯ ಜ್ಞಾನ ಆದ್ಯತೆ, ಕಚೇರಿಯನ್ನು ನಿರ್ವಹಿಸುವ ಸಾಮರ್ಥ್ಯದೊಂದಿಗೆ ತಂಡವನ್ನು ಮುನ್ನಡೆಸಲು ಗುಣಮಟ್ಟ ಕೌಶಲ್ಯ ಹೊಂದಿರಬೇಕು. *ಉಪ ಕಾನೂನು ನೆರವು ಅಭಿರಕ್ಷಕರ ಹುದ್ದೆ:*

ಕನಿಷ್ಠ 7 ವರ್ಷಗಳ ಕಾಲ ಕ್ರಿಮಿನಲ್ ಕಾನೂನಿನಲ್ಲಿ ಅಭ್ಯಾಸ ಮಾಡಿರಬೇಕು. ಕ್ರಿಮಿನಲ್ ಕಾನೂನಿನ ಅತ್ಯುತ್ತಮ ತಿಳುವಳಿಕೆ, ಅತ್ಯುತ್ತಮ ಮೌಖಿಕ ಮತ್ತು ಲಿಖಿತ ಸಂವಹನ ಕೌಶಲ್ಯ, ಕಾನೂನು ಸಂಶೋಧನೆಯಲ್ಲಿ ಕೌಶಲ್ಯ, ರಕ್ಷಣಾ ಸಲಹೆಗಾರರ ನೈತಿಕ ಕರ್ತವ್ಯಗಳ ಸಂಪೂರ್ಣ ತಿಳುವಳಿಕೆ, ಇತರರೊಂದಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡುವ ಸಾಮರ್ಥ್ಯ ಹೊಂದಿರಬೇಕು. ಸೆಷನ್ಸ್ ನ್ಯಾಯಾಲಯಗಳಲ್ಲಿ ಕನಿಷ್ಠ 20 ಕ್ರಿಮಿನಲ್ ವಿಚಾರಣೆಗಳನ್ನು ನಿರ್ವಹಿಸಿರಬೇಕು, ಗೌರವಾನ್ವಿತ ಕಾರ್ಯನಿರ್ವಾಹಕ ಅಧ್ಯಕ್ಷರು, ಎಸ್ ಎಲ್ ಎಸ್ ಎ, ಅಸಾಧಾರಣ ಸಂದರ್ಭಗಳಲ್ಲಿ ಸಡಿಲಗೊಳಿಸಬಹುದು. ಕೆಲಸದಲ್ಲಿ ಪ್ರಾವೀಣ್ಯತೆಯೊಂದಿಗೆ ಐಟಿ ಜ್ಞಾನ ಹೊಂದಿರಬೇಕು.

*ಸಹಾಯಕ ಕಾನೂನು ನೆರವು ಅಭಿರಕ್ಷಕರ ಹುದ್ದೆ:* ಕ್ರಿಮಿನಲ್ ಕಾನೂನಿನಲ್ಲಿ 3 ವರ್ಷಗಳವರೆಗೆ ಅಭ್ಯಾಸ ಮಾಡಿರಬೇಕು. ಉತ್ತಮ ಮೌಖಿಕ ಮತ್ತು ಲಿಖಿತ ಸಂವಹನ ಕೌಶಲ್ಯ, ರಕ್ಷಣಾ ಸಲಹೆಗಾರರ ನೈತಿಕ ಕರ್ತವ್ಯಗಳ ಸಂಪೂರ್ಣ ತಿಳುವಳಿಕೆ, ಇತರರೊಂದಿಗೆ ಪರಿಣಾಮಕಾರಿಯಾಗಿ ಕೆಲಸ ಮಾಡುವ ಸಾಮರ್ಥ್ಯ. ಅತ್ಯುತ್ತಮ ಬರವಣಿಗೆ ಮತ್ತು ಸಂಶೋಧನಾ ಕೌಶಲ್ಯ, ಕೆಲಸದಲ್ಲಿ ಹೆಚ್ಚಿನ ಪ್ರಾವೀಣ್ಯತೆಯೊಂದಿಗೆ ಐಟಿ ಜ್ಞಾನ ಹೊಂದಿರಬೇಕು. ನೇಮಕಾತಿಗಳು ತಾತ್ಕಾಲಿಕವಾಗಿದ್ದು, ಪ್ರಾಧಿಕಾರವು ನೇಮಕಾತಿಯನ್ನು ಯಾವುದೇ ನೋಟೀಸನ್ನು ನೀಡದೆ ರದ್ದುಗೊಳಿಸುವ ಅಧಿಕಾರ ಹೊಂದಿರುತ್ತದೆ. ಅಭ್ಯರ್ಥಿಗಳು ಅರ್ಜಿ ನಮೂನೆ ಪಡೆದು ಭರ್ತಿ ಮಾಡಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಕಚೇರಿಗೆ ಅರ್ಜಿ ಸಲ್ಲಿಸಬೇಕು ಹಾಗೂ ಇತ್ತೀಚಿನ 3 ಪಾಸ್ ಪೋಟೋ ಲಗತ್ತಿಸಬೇಕು. ಅರ್ಜಿ ಸಲ್ಲಿಸಲು ಜನವರಿ 10 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ನಗರದ ತಾಳೂರು ರಸ್ತೆಯ ನೂತನ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಮೂರನೇ ಮಹಡಿಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಲ್ಪಸಂಖ್ಯಾತರ ಸಮುದಾಯದ ಬಿ.ಎಡ್ ವಿದ್ಯಾರ್ಥಿಗಳಿಗೆ
# ಪ್ರೋತ್ಸಾಹ ಧನ: ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ: ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡಲು ಈಗಾಗಲೇ ಅರ್ಜಿ ಸಲ್ಲಿಸಲು ಸೇವಾಸಿಂಧು ಪೋರ್ಟಲ್ ನಲ್ಲಿ ಆಹ್ವಾನಿಸಲಾಗಿತ್ತು. ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 06 ರವರೆಗೆ ವಿಸ್ತರಿಸಲಾಗಿದೆ ಎಂದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ. ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದ, ಸಿಖ್ಖ ಮತ್ತು ಪಾರ್ಸಿ) ಸಮುದಾಯದ ವಿದ್ಯಾರ್ಥಿಗಳಿಗೆ ಮಾತ್ರ 2024–25ನೇ ಸಾಲಿಗೆ ಬಿ.ಎಡ್ ಕೋರ್ಸ್ಗೆ ಮಾತ್ರ ಅರ್ಜಿ ಆಹ್ವಾನಿಸಲಾಗಿದ್ದು, ಸೇವಾ ಸಿಂಧು ಅಭ್ಯರ್ಥಿಗಳು ಸೇವಾಸಿಂದು ಪೋರ್ಟಲ್ ಿಣಣಠ;//ಜತಚಿಟಜಣ.ಇಚಿಡಿ–ಟಿಚಿಣಚಿಇಚಿ.ರಠತ.ಟಿ ಮೂಲಕ ಅರ್ಜಿ ಸಲ್ಲಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ವಿದ್ಯಾರ್ಥಿ ವ್ಯಾಸಂಗ ಮಾಡುತ್ತಿರುವ ಕಾಲೇಜು ಇರುವ ತಾಲೂಕಿನ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಸಲ್ಲಿಸಬೇಕು. ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ: ಬಳ್ಳಾರಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನ ಅಜಾದ ಭವನ, ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರ– ಮೊ.8310321101, ಸಂಡೂರು ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ತೋಟಗಾರಿಗೆ ಇಲಾಖ Éundefined ಕಚೇರಿ ಆವರಣ ಸಂಡೂರು (ಮೊ.9036925966, 8660575061), ಸಿರುಗುಪ್ಪ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ನಗರಸಭೆ ಕಚೇರಿ ಆವರಣ, ಬಳ್ಳಾರಿ ರಸ್ತೆ, ಸಿರುಗುಪ್ಪ(ಮೊ.9148889975). ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಹಾಯವಾಣಿ ಸಂ–ಖ್ಯೆ 8277799990 (24*7) ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜ್ಞಾನ ವಸ್ತು ಪ್ರದರ್ಶನಕ್ಕೆ ನೋಂದಣಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಡಿಸೆಂಬರ 31: ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಕೂಡಲಸಂಗಮದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಜ್ಞಾನದ ಆವಿಷ್ಕಾರಗಳ ಬಗ್ಗೆ ಜಾಗೃತಿ ಮೂಡಿಸಿ, ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳಲು ಮತ್ತು ವಿಜ್ಞಾನದ ಮಹತ್ವವನ್ನು ಉತ್ತೇಜಿಸಲು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜನವರಿ 4, 2025 ರಂದು ಬೆಳಿಗ್ಗೆ 9 ಗಂಟೆಗೆ ವೈಜ್ಞಾನಿಕ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ. ವಸ್ತು ಪ್ರದರ್ಶನದಲ್ಲಿ ವಿಜೇತರಿಗೆ ನಗದು ಬಹುಮಾನ ಹಾಗೂ ಪಾರಿತೋಷಕ ಮತ್ತು ಪ್ರಮಾಣ ಪತ್ರ ನೀಡಲಾಗುತ್ತದೆ. ಆಸಕ್ತ ವಿದ್ಯಾರ್ಥಿಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸಲು ಮೊನಂ.9035103019, 7411057751ಗೆ ಕರೆ ಮಾಡಿ ಜನವರಿ 2 ರೊಳಗಾಗಿ ನೋಂದಣಿ ಮಾಡಿಕೊಳ್ಳುವಂತೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜನೇವರಿ 1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬುಧವಾರ ಬೆಳಿಗ್ಗೆ 9.30ಕ್ಕೆ ಜಿಲ್ಲಾಡಳಿತ ಭವನದಿಂದ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ದೊರೆಯಲಿದೆ. ನಂತರ ಮೆರವಣಿಗೆ ನಾನಾ ಕಡೆಗಳಲ್ಲಿ ಸಂಚರಿಸಿ ಡಾ.ಬಿ.ಆರ್.ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಳ್ಳುವುದು.

ಮುಂಜಾನೆ 11 ಗಂಟೆಗೆ ಅಂಬೇಡ್ಕರ ಭವನದಲ್ಲಿ ಜರುಗುವ ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಉದ್ಘಾಟಿಸುವರು. ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್. ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ನಿವೃತ್ತ ತರಬೇತಿ ಅಧಿಕಾರಿ ಐ.ಕೆ.ಪತ್ತಾರ ವಿಶೇಷ ಉಪನ್ಯಾಸಕರಾಗಿ ಆಗಮಿಸಲಿದ್ದಾರೆ.

# ಹೆಣ್ಣು ಸಂಸ್ಕಾರದ ರಾಯಭಾರಿ ಉಪನ್ಯಾಸಕಿ ಡಾ.ಉಮಾ ಅಕ್ಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31-ಎಷ್ಟೇ ಓದಲಿ, ಏನೇ ಉದ್ಯೋಗ ಮಾಡಲಿ ಸಂಸಾರದಲ್ಲಿ ಹೆಣ್ಣು ಸಂಸ್ಕಾರದ ರಾಯಭಾರಿ ಇದ್ದಂತೆ ಎಂದು ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲಯದ ಉಪನ್ಯಾಸಕಿ ಡಾ. ಉಮಾ ಅಕ್ಕಿ ಅಭಿಪ್ರಾಯಪಟ್ಟಿದ್ದಾರೆ.

ಕುಮಾರೇಶ್ವರ ವಿಶ್ವ ಧರ್ಮ ಶಾಂತಾಶ್ರಮ ವರದಾನೇಶ್ವರಿ ಮಹಿಳಾ ಸಂಘದವರು ಸೋಮವಾರ ಏರ್ಪಡಿಸಿದ್ದ ಶ್ರೀ ಯಡಿಯೂರು ಸಿದ್ಧಲಿಂಗೇಶ್ವರ, ಶ್ರೀ ಶಿರಡಿ ಸಾಯಿ ಬಾಬಾ, ಶ್ರೀ ಗುಡ್ಡಾಪೂರ ದಾನಮ್ಮದೇವಿ ಅವರ 20 ನೇ ವಾರ್ಷಿಕೋತ್ಸವದಲ್ಲಿ ಉಪನ್ಯಾಸ ನೀಡಿದ ಅವರು, ಮಹಿಳೆ ಇಂದು ಪುರುಷನಿಗೆ ಸರಿಸಮನಾಗಿ ಎಲ್ಲ ರಂಗಗಳಲ್ಲೂ ಮುಂದುವರೆದಿದ್ದಾಳೆ, ಆದಾಗ್ಯೂ ಮಕ್ಕಳಿಗೆ ಸಂಸ್ಕಾರ ಕೊಟ್ಟು ಜೀವನದ ಮಟ್ಟ ಎತ್ತರಿಸುವಲ್ಲಿ ಮಹಿಳೆಯ ಪಾತ್ರ ಬಹುಮುಖ್ಯ ಎಂದು ಬಸವಾದಿ ಶರಣರ ಕಾಲದ ಘಟನೆಗಳೊಂದಿಗೆ ಸ್ಪಷ್ಟೀಕರಿಸಿದರು.

ಸಾನಿಧ್ಯ ವಹಿಸಿದ್ದ ಕಮತಗಿ-ಕೋಟಿಕಲ್ ಮಠದ ಶ್ರೀ ಹುಚ್ಚೇಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶ್ರೀ ಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮದೊಂದಿಗಿನ ತಮ್ಮ ನಂಟನ್ನು ಸ್ಮರಿಸಿದರು. ಇದೇ ಸಂದರ್ಭದಲ್ಲಿ ಕಳೆದ ಒಂದು ವರ್ಷದಿಂದ ಪ್ರತಿ ಗುರುವಾರ ಸಂಜೆ ಸಕಲರಿಗೂ ಮಹಾಪ್ರಸಾದದ ಸೇವೆ ಸಲ್ಲಿಸುತ್ತಾ ಬಂದಿರುವ ಸಾಯಿ ಗೆಳೆಯರ ಬಳಗದ 54 ದಾಸೋಹಿಗಳಿಗೆ ಪೂಜ್ಯರು, ಗಣ್ಯರು ಶಾಲು ಹೊದಿಸಿ ಸನ್ಮಾನಿಸಿದರು.

ಶ್ರೀಮತಿ ಜಿಗಳೂರ ಪ್ರಾರ್ಥನೆ, ಬಸಯ್ಯ ಗಣಾಚಾರಿ ಅವರಿಂದ ಬಸವ ನಾಮಸ್ಮರಣೆ ನಡೆಯಿತು. ಸಂಸ್ಥೆಯ ಕಾರ್ಯಾಧ್ಯಕ್ಷ ಶ್ರೀಶೈಲ ಕರಿಶಂಕರಿ ಸ್ವಾಗತಿಸಿದರು. ಅಧ್ಯಕ್ಷ ಜಿ.ಎನ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಲತಾ ಶೀಲವಂತರ ಪರಿಚಯಿಸಿದರು. ರೂಪಾ ಭಂಟನೂರ ವಂದಿಸಿದರು. ವೇದಿಕೆಯಲ್ಲಿ ಶ್ರೀ ವರದಾನೇಶ್ವರಿ ಮಹಿಳಾ ಸಂಘ ಅಧ್ಯಕ್ಷೆ ಪಾರ್ವತೆಮ್ಮ ಬಳೂಲಮಠ ಉಪಸ್ಥಿತರಿದ್ದರು.

ನಂತರ ಪೂಜ್ಯರು ದೀಪ ಬೆಳಗಿಸಿ ದೀಪೋತ್ಸವಕ್ಕೆ ಚಾಲನೆ ನೀಡಿದರು. ನಂತರ ಮಹಾಪ್ರಸಾದ ನಡೆಯಿತು. ರಾತ್ರಿ ರೋಣ ತಾಲೂಕಿನ ಕೊತಬಾಳ ಗ್ರಾಮದ ಅರುಣೋದಯ ಸಾಂಸ್ಕೃತಿಕ ಕಲಾ ತಂಡದವರಿಂದ ಜಾನಪದ ಸಂಜೆ ಕಾರ್ಯಕ್ರಮ ಜರುಗಿತು.

# ಇಂದು ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31- ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜನೇವರಿ 1 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬುಧವಾರ ಬೆಳಿಗ್ಗೆ 9.30ಕ್ಕೆ ಜಿಲ್ಲಾಡಳಿತ ಭವನದಿಂದ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ದೊರೆಯಲಿದೆ. ನಂತರ ಮೆರವಣಿಗೆ ನಾನಾ ಕಡೆಗಳಲ್ಲಿ ಸಂಚರಿಸಿ ಡಾ.ಬಿ.ಆರ್. ಅಂಬೇಡ್ಕರ ಭವನಕ್ಕೆ ಮುಕ್ತಾಯಗೊಳ್ಳುವುದು.

ಮುಂಜಾನೆ 11 ಗಂಟೆಗೆ ಅಂಬೇಡ್ಕರ ಭವನದಲ್ಲಿ ಜರುಗುವ ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಉದ್ಘಾಟಿಸುವರು. ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ನಿವೃತ್ತ ತರಬೇತಿ ಅಧಿಕಾರಿ ಐ.ಕೆ.ಪತ್ತಾರ ವಿಶೇಷ ಉಪನ್ಯಾಸಕರಾಗಿ ಆಗಮಿಸಲಿದ್ದಾರೆ.



ಬಸವಕಲ್ಯಾಣ :- ತಾಲೂಕಿನ ಮಂಠಾಳ ಗ್ರಾಮದಲ್ಲಿ ಶ್ರೀ ಗುರುಲಿಂಗೇಶ್ವರ ಚೌಕಿ ವಿರಕ್ತ ಮಠದ ಪಿಠಾಧಿಪತಿಗಳಾದ ಪೂಜ್ಯ ಶ್ರೀ ಮ ನಿ ಪ್ರ ಅಭಿನವ ಚನ್ನಬಸವ ಮಹಾಸ್ವಾಮಿಗಳವರ ಹುಟ್ಟು ಹಬ್ಬ ಆಚರಿಸಲಾಯಿತು, ಇದೇ ಸಂದರ್ಭದಲ್ಲಿ ಹೊಸ ವರ್ಷದ(2025 )ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪ್ರಮುಖರಾದ ಶಿವಕುಮಾರ ಶಟಗಾರ, ಮಹಾದೇವ ಮಾಲಿ ಪಾಟೀಲ, ಗಿರೀಶ್ ತಾಂಬೋಳೆ,ಮಲ್ಲಿಕಾರ್ಜುನ ಪೊಲೀಸ್ ಪಾಟೀಲ, ಪುಷ್ಪರಾಜ ಹರಕೂಡೆ,ರವೀಂದ್ರ ಶ್ಯಾಯಪ್ಪ,ಧನರಾಜ ಸಾತಬಾಯಿ,ಅರುಣ ಮಸಗಲ್ಲೆ,ಉಮಾಕಾಂತ ಪೊಲೀಸ್ ಪಾಟೀಲ, ಶಿವರಾಚಪ್ಪ ಹತ್ತೆ,ದೇವೇಂದ್ರ ಹರಕೊಡೆ,ಮಹಾರುದ್ರ ಬೊಳಪ್ಪ, ನಾಗೇಶ ತಾಂಬೋಳೆ,ಮಲ್ಲಪ್ಪ ಲೊಡ್ಡೆ,ರಾಮ ಮಾಮಾನೆ,ಸಂತೋಷ ಜವಳಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ವಿಜ್ಞಾನ ವಸ್ತು ಪ್ರದರ್ಶನಕ್ಕೆ ನೋಂದಣಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31-ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಕೂಡಲಸಂಗಮದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಅಂಗವಾಗಿ ವಿಜ್ಞಾನದ ಆವಿಷ್ಕಾರಗಳ ಬಗ್ಗೆ ಜಾಗೃತಿ ಮೂಡಿಸಿ, ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಳ್ಳಲು ಮತ್ತು ವಿಜ್ಞಾನದ ಮಹತ್ವವನ್ನು ಉತ್ತೇಜಿಸಲು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಜನವರಿ 4 ರಂದು ಬೆಳಿಗ್ಗೆ 9 ಗಂಟೆಗೆ ವೈಜ್ಞಾನಿಕ ವಿಜ್ಞಾನ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ.

ವಸ್ತು ಪ್ರದರ್ಶನದಲ್ಲಿ ವಿಜೇತರಿಗೆ ನಗದು ಬಹುಮಾನ ಹಾಗೂ ಪಾರಿತೋಷಕ ಮತ್ತು ಪ್ರಮಾಣ ಪತ್ರ ನೀಡಲಾಗುತ್ತದೆ. ಆಸಕ್ತ ವಿದ್ಯಾರ್ಥಿಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸಲು ಮೊನಂ.9035103019,7411057751ಗೆ ಕರೆ ಮಾಡಿ ಜನವರಿ 2 ರೊಳಗಾಗಿ ನೋಂದಣಿ ಮಾಡಿಕೊಳ್ಳುವಂತೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಣಕಾಸು ಸಂಸ್ಥೆಗಳ ಪರವಾನಿಗೆ ರದ್ದತಿಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.30-ಜಮಖಂಡಿ ಉಪ ವಿಭಾಗದ ಸ್ಥಗಿತಗೊಂಡ ಲೇವಾದೇವಿ, ಗಿರವಿ ಹಾಗೂ ಹಣಕಾಸು ಸಂಸ್ಥೆಯ ಪರವಾನಿಗೆ ರದ್ದುಪಡಿಸಿ ಭದ್ರತಾ ಠೇವಣಿಯನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವದೆಂದು ಜಮಖಂಡಿ ಉಪ ವಿಭಾಗದ ಸಹಾಯಕ ನಿಬಂಧಕರು ಮತ್ತು ಸಹಕಾರ ಸಂಘಗಳ ಸಹಾಯಕ ನಿಬಂಧಕರು ತಿಳಿಸಿದ್ದಾರೆ.

ವಿಜಯಲಕ್ಷ್ಮೀ ಪೈನಾನ್ಸ್ ಕಾರ್ಪೋರೇಶನ ಹುನ್ನೂರ, ಗಜಾನನ ಪೈನಾನ್ಸ್ ಮತ್ತು ಇನ್‌ವೆಸ್ಟಮೆಂಟ ಮಹಾಲಿಂಗಪೂರ ರೋಡ ರಬಕವಿ, ಸಂಗಮೇಶ್ವರ ಪೈನಾನ್ಸ ಕಾರ್ಪೋರೇಶನ ಕಲ್ಲಟ್ಟಿ ಗಲ್ಲಿ ತೇರದಾಳ, ಜೈ ಹನುಮಾನ ಫೈನಾನ್ಸ್ ಕಾರ್ಪೋರೇಶನ್ ಗೋಠೆ ತಾ. ಜಮಖಂಡಿ, ಸಿದ್ದೇಶ್ವರ ಹಣಕಾಸು ಫೈನಾನ್ಸ್ ಕಾರ್ಪೋರೇಶನ್ ಬನಹಟ್ಟಿ ತಾಲೂಕು ಜಮಖಂಡಿ. ನ್ಯೂ ಭಾರತ ಫೈನಾನ್ಸ್ ಕಾರ್ಪೋರೇಶನ್ ಕೋಷ್ಠಿ ಗಲ್ಲಿ ಜಮಖಂಡಿ.

ಪಾಂಡುರಂಗ ಫೈನಾನ್ಸ್ ಕಾರ್ಪೋರೇಶನ್ ಅಂಬೇಡಕರ್ ಸರ್ಕಲ್ ಹತ್ತಿರ ಜಮಖಂಡಿ, ಸಂಗೊಳ್ಳಿ ರಾಯಣ್ಣ ಫೈನಾನ್ಸ್ ಕಾರ್ಪೋರೇಶನ್ ರಬಕವಿ,ಗ್ರಾವಿಟಿ ಫೈನಾನ್ಸ್ ಕಾರ್ಪೋರೇಶನ್ ಹುನ್ನುರು, ಹೆಚ್‌ಕೆಎಚ್‌ಆರ್ ಪೈನಾನ್ಸ್ ಕಾರ್ಪೋರೇಶನ್ ಬನಹಟ್ಟಿ, ಶ್ರೀ ಗುರು ರಾಚೋಟೇಶ್ವರ ಫೈನಾನ್ಸ್ ಕಾರ್ಪೋರೇಶನ್ ಮಧುರಖಂಡಿ,ಲಕ್ಷ್ಮೀ ವೆಂಕಟೇಶ ಫೈನಾನ್ಸ್ ಕಾರ್ಪೋರೇಶನ್ ರಬಕವಿ, ವಿನಾಯಕ ಫೈನಾನ್ಸ್ ಕಾರ್ಪೋರೇಶನ್ ಬಜಾರ್ ರೋಡ್ ಮುಧೋಳ.

ಧನಲಕ್ಷ್ಮೀ ಪೈನಾನ್ಸ ಕಾರ್ಪೋರೇಶನ ಲೋಕಾಪೂರ, ಸದಾಶಿವ ಫೈನಾನ್ಸ್ ಕಾರ್ಪೋರೇಶನ್ ಲೋಕಾಪೂರ, ಗಣೇಶ್ ಫೈನಾನ್ಸ್ ಕಾರ್ಪೋರೇಶನ್ ಮಹಾಲಿಂಗಪುರ, ಕರ್ಜಗಿ ಫೈನಾನ್ಸ್ ಕಾರ್ಪೋರೇಶನ್ ಬೀಳಗಿ, ಲಖಮಿಚಂದ ಹರಕಚಂದ ಓಸ್ವಾಲ ಸರಾಪ್ ಬಜಾರ ಜಮಖಂಡಿ, ಲೆಹರೀಲಾಲ್ ಗುಲಾಬಚಂದ ಜೈನ್ ಸರಾಪ್ ಬಜಾರ ಜಮಖಂಡಿ, ಆನಂದ ಕೇಶವ ಗುಂಡಾ ಲೇವಾದೇವಿದಾರರು ಮಹಾಲಿಂಗಪುರ. ಈ ಎಲ್ಲಾ ಹಣಕಾಸು ಸಂಸ್ಥೆಯವರ ನವೀಕರಣ ಅವಧಿ ಮುಕ್ತಾಯಗೊಂಡಿದೆ.

ಈ ಸಂಸ್ಥೆಗಳಿಗೆ ನೀಡಿದ ಪರವಾನಿಗೆ ಪ್ರಮಾಣ ಪತ್ರ ರದ್ದಾಗಿರುವುದರಿಂದ ಪಾವತಿಸಿದ ಭದ್ರತಾ ಠೇವಣಿ ಮೊತ್ತವನ್ನು ಕರ್ನಾಟಕ ಲೇವಾದೇವಿ ಕಾಯ್ದೆ 1961 ಕಲಂ 7 ಬಿ ರನ್ವಯ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಸಂಸ್ಥೆಯ ನೋಂದಣಿಯನ್ನು ರದ್ದುಗೊಳಿಸಲು ನಿರ್ಧರಿಸಲಾಗಿರುತ್ತದೆ. ಕಾರಣ ಈ ಹಣಕಾಸು ಸಂಸ್ಥೆಯವರು ಈ ಪತ್ರಿಕಾ ಪ್ರಕಟಣೆ ನೀಡಿದ 07 ದಿನದೊಳಗೆ ತಮ್ಮ ಆಕ್ಷೇಪನೆಗಳೇನಾದರೂ ಇದ್ದರೆ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಗಿರೀಶ ನಗರ, ಕೆಜಿಎನ್ ಕಾಂಪ್ಲೆಕ್ಸ ಜಮಖಂಡಿ ಇವರಲ್ಲಿ ಆಕ್ಷೇಪನೆಗಳನ್ನು ಸಲ್ಲಿಸಲು ತಿಳಿಸಿದ್ದು, ಆಕ್ಷೇಪನೆಗಳು ಬರದೇ ಇದ್ದ ಪಕ್ಷದಲ್ಲಿ ನಿಯಮಾನುಸಾರ ಮುಂದಿನ ಕ್ರಮಕೈಗೊಳ್ಳಲಾಗುವುದು.

### ಬಿವಿವಿ ಸಂಘದಿಂದ ಆತ್ಮೀಯ ಸನ್ಮಾನ

# ಶುಶ್ರೂಷಕರ ಸಂಘದ ಅಧ್ಯಕ್ಷರಾಗಿ ಡಾ.ದಿಲೀಪ್ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31-ನಗರದ ಬಿ.ವಿ.ವಿ.ಸಂಘದ ಪ್ರತಿಷ್ಠಿತ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಮತ್ತು ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಾಜಿ ಸೆನೆಟ್ ಸದಸ್ಯರಾದ ಡಾ.ದಿಲೀಪ್ ನಾಟೆಕರ್ ಭಾರತೀಯ ತರಬೇತಿಹೊಂದಿದ ಶುಶ್ರೂಷಕರ ಸಂಘದ (ಟಿಎನ್‌ಎಐ) ಕರ್ನಾಟಕ ಶಾಖೆಯ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. 1908 ರಲ್ಲಿ ದೆಹಲಿಯಲ್ಲಿ ಸ್ಥಾಪನೆಯಾದ ಭಾರತೀಯ ತರಬೇತಿಹೊಂದಿದ ಶುಶ್ರೂಷಕರ ಸಂಘ (ಟಿಎನ್‌ಎಐ) ಶುಶ್ರೂಷಕರ ವೃತ್ತಿಘನತೆಯನ್ನು ಎತ್ತಿಹಿಡಿಯಲು ಕಾರ್ಯನಿರ್ವಹಿಸುತ್ತಿದೆ. ನರ್ಸಿಂಗ್ ಪಠ್ಯಕ್ರಮದಲ್ಲಿ ಹೊಸ ವಿಧಾನಗಳ ಬಳಕೆ ಮತ್ತು ಸಂಶೋಧನೆಗೆ ನೆರವು ನೀಡುವುದರ ಮೂಲಕ ನರ್ಸಿಂಗ್ ಶಿಕ್ಷಣದಲ್ಲಿ ಗುಣಾತ್ಮಕತೆಯನ್ನು ತರಲು ಶ್ರಮಿಸುತ್ತಿದೆ.

ನರ್ಸಿಂಗ್ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಹಾಗೂ ಈಗಾಗಲೇ ತರಬೇತಿ ಹೊಂದಿ ಕಾರ್ಯನಿರ್ವಹಿಸುತ್ತಿರುವ ಶುಶ್ರೂಷಕರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸಿ ಕಾರ್ಯರೂಪಕ್ಕೆ ತಂದಿದೆ. ಭಾರತೀಯ ತರಬೇತಿ ಹೊಂದಿದ ಶುಶ್ರೂಷಕರ ಸಂಘದ ಕರ್ನಾಟಕ ಶಾಖೆ 1956 ರಲ್ಲಿ ಅಸ್ತಿತ್ವಕ್ಕೆ ಬಂದಿತು. ಕಳೆದ ಎಂಟು ದಶಕಗಳಿಂದ ಈ ಶಾಖೆ ಕರ್ನಾಟಕದಲ್ಲಿ ನರ್ಸಿಂಗ್ ಶಿಕ್ಷಣದಲ್ಲಿ ಸಾಕಷ್ಟು ಬದಲಾವಣೆಗಳು ಮತ್ತು ಬೆಳವಣಿಗೆಗಳಾಗಲು ಕಾರಣವಾಗಿದೆ. ಇಂಥ ಪ್ರತಿಷ್ಠಿತ ಸಂಘಕ್ಕೆ ಉತ್ತರ ಕರ್ನಾಟಕದಿಂದ ಪ್ರಥಮ ಬಾರಿಗೆ ಡಾ.ದಿಲೀಪ್ ನಾಟೆಕರ್ ಅವರು ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಪ್ರತಿಷ್ಠಿತ ಸಂಘಕ್ಕೆ ಆಯ್ಕೆಯಾಗಿರುವ ಡಾ.ದಿಲೀಪ್ ನಾಟೆಕರ್ ಅವರನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ.ಚರಂತಿಮಠ ಸನ್ಮಾನಿಸಿ, ಜವಾಬ್ದಾರಿ ಸ್ಥಾನ ಪಡೆದಿರುವ ತಾವು ಹೊಸ ಹೊಸ ಯೋಜನೆಗಳನ್ನು ರೂಪಿಸಿ ನರ್ಸಿಂಗ್ ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ಕಾರ್ಯ ಮಾಡಿ ಎಂದು ಡಾ.ನಾಟೆಕರ್ ಅವರಿಗೆ ಸಲಹೆ ನೀಡಿದರು. ಈ ಸಂದರ್ಭ ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಮೆಡಿಕಲ್ ಕಾಲೇಜ್ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಭೂಮಿ ತಾಯಿಗೆ 'ಚರಗ'ದ ನೈವೇದ್ಯ ಸಡಗರ, ಸಂಭ್ರಮದ ಎಳ್ಳು ಅಮವಾಸ್ಯೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31-ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಸೋಮವಾರ ಎಲ್ಲೆಲ್ಲೂ ಎಳ್ಳು ಅಮವಾಸ್ಯೆಯ ಸಂಭ್ರಮ, ಸಡಗರ ಮನೆ ಮಾಡಿತ್ತು. ಮನೆ ಮಂದಿಯ ಜೊತೆ ಬಂಧು-ಬಾಂಧವರು, ನೆರೆ ಹೊರೆಯವರು ಸೇರಿ ಚಕ್ಕಡಿಯಲ್ಲೋ, ಟ್ರ್ಯಾಕ್ಟರ್‌ಗಳಲ್ಲೋ ತೆರಳಿ ಹಸಿರು ಫಸಲು ಹೊದ್ದು ನಿಂತಿರುವ ಭೂಮಿ ತಾಯಿಗೆ ಚರಗದ ನೈವೇದ್ಯ ಅರ್ಪಿಸಿ ಮೃಷ್ಠಾನ ಭೋಜನ ಸವಿದರು.

ಗ್ರಾಮೀಣ ಪ್ರದೇಶಗಳಲ್ಲಿ ಭಾನುವಾರದಿಂದಲೇ ಎಳ್ಳು ಅಮವಾಸ್ಯೆಯ ತಯಾರಿ ನಡೆದಿದ್ದು, ಸೋಮವಾರ ಬೆಳಿಗ್ಗೆ ರೈತರು ಎತ್ತುಗಳ ಮೈತೊಳೆದು, ಬಣ್ಣ ಹಚ್ಚಿ, ರಿಬ್ಬನ್ ಕಟ್ಟಿ, ಕೊರಳಿಗೆ ಗೆಜ್ಜೆ ಹಾಕಿ ಶೃಂಗಾರಗೊಳಿಸಿ, ಚಕ್ಕಡಿಗೆ ತಟ್ಟಿನ ಚೀಲ ಹಾಕಿ ಮನೆ ಮಂದಿಯಲ್ಲರನ್ನು ಕೂಡ್ರಿಸಿಕೊಂಡು ಹೊಲಗಳಿಗೆ ತೆರಳಿದರು.

ಈ ವರ್ಷ ಮಳೆ ಉತ್ತಮವಾಗಿ ಬಂದಿದ್ದು, ಬಿಳಿಜೋಳ, ಕಡಲೆ ಬೆಳೆಗಳು ಸಮೃದ್ಧವಾಗಿ ಬೆಳೆದು ನಿಂತಿವೆ. ಹೀಗಾಗಿ ರೈತರು ಈ ಬಾರಿಯ ಎಳ್ಳು ಅಮವಾಸ್ಯೆಯನ್ನು ಅತ್ಯಂತ ಉತ್ಸಾಹದಿಂದ ಆಚರಿಸುತ್ತಿದ್ದು, ಪ್ರತಿ ಹೊಲಗಳಲ್ಲೂ ಜನ ಜಂಗುಳಿ ಕಾಣುತ್ತಿತ್ತು. ಹೊಲದಲ್ಲಿನ ಬನ್ನಿ ಗಿಡಕ್ಕೆ ಪೂಜೆ ಸಲ್ಲಿಸಿ, ಬೆಳೆಗಳಲ್ಲಿ ಅಡ್ಡಾಡಿ 'ಹುಲ್ಲಲಿಗೋ.. ಚಲಾಂಬರಿಗೋ.. ಎಂದು ಹೇಳುತ್ತ ಕಡಬು, ಕರ್ಚಿಕಾಯಿ, ರೊಟ್ಟಿ, ಪಲ್ಯೆ ಎಲ್ಲವನ್ನೂ ಸಮರ್ಪಿಸಿ ಸಂಭ್ರಮಿಸಿದರು. ಮಕ್ಕಳು ಉತ್ಸಾಹದಿಂದ ಹೊಲಗಳಲ್ಲಿ ಓಡಾಡಿದರು. ನಂತರ ಎಲ್ಲರೂ ಸೇರಿ ಮನೆಯಿಂದ ತಯಾರಿಸಿಕೊಂಡು ಬಂದಿದ್ದ ಸಜ್ಜಿ, ಜೋಳದ ಕಡಕ್ ರೊಟ್ಟಿ, ಚಪಾತಿ, ಕಡಬು, ವಿವಿಧ ತರದ ಪಲ್ಲೆ, ಸೊಪ್ಪು, ಬಜ್ಜಿ, ಸೇಂಗಾ ಹೋಳಿಗೆ, ಎಳ್ಳು ಹೋಳಿಗೆ, ಕರ್ಚಿಕಾಯಿ, ಸೆಂಡಿಗೆ, ಹಪ್ಪಳ, ಅನ್ನ, ಕಟ್ಟಿನ ಸಾರು ಸವಿದು ಸಾಯಂಕಾಲದ ಹೊತ್ತಿಗೆ ಮನೆಗೆ ಮರಳಿದರು.

# ಪ್ರಯೋಗಾಲಯ ಸದುಪಯೋಗಕ್ಕೆ ವಿದ್ಯಾರ್ಥಿಗಳಿಗೆ ಕರೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಡಿ.31- ಅಧುನಿಕತೆಗೆ ತಕ್ಕಂತೆ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರಯೋಗಾಲಯವನ್ನು ನವೀಕರಣಗೊಳಿಸಲಾಗಿದೆ ಅದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ಬಿ.ವಿ.ವಿ.ಸಂಘದ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದಲ್ಲಿ ಮಂಗಳವಾರ ನೂತನ ಗಣಕ ಯಂತ್ರಗಳ ಗಣಿತಶಾಸ್ತ್ರದ ಪ್ರಯೋಗಾಲಯವನ್ನು ಉದ್ಘಾಟಿಸಿ ಮಾತನಾಡಿ, ಪ್ರಯೋಗಾಲಯಗಳನ್ನು ನವೀಕರಿಸುವ ಜೊತೆಗೆ ಅವುಗಳಿಗೆ ಅತ್ಯಾಧುನಿಕ ಯಂತ್ರಗಳ ಸೌಲಭ್ಯ ಒದಗಿಸಲಾಗಿದೆ ಎಂದರು.

ದೂರ ಸಂಪರ್ಕ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿರುವ ಮಹಾವಿದ್ಯಾಲಯದ ಹಳೆ ವಿದ್ಯಾರ್ಥಿ ಮಹಾಂತೇಶ ಬಣಗಾರ ಅವರು ಮಹಾವಿದ್ಯಾಲಯಕ್ಕೆ ಸುಮಾರು 30ಕ್ಕೂ ಹೆಚ್ಚು ಅತ್ಯಾಧುನಿಕ ಗಣಕ ಯಂತ್ರಗಳನ್ನು ದೇಣಿಗೆ-ಯಾಗಿ ನೀಡಿದ್ದು ಅವುಗಳನ್ನು ಈ ಪ್ರಯೋಗಾಲಯದಲ್ಲಿ ಅಳವಡಿಸಲಾಗಿದೆ. ಈ ಎಲ್ಲ ಸೌಲಭ್ಯಗಳನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕು ಎಂದು ಚರಂತಿಮಠ ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾಂತೇಶ ಬಣಕಾರ, ನಮಗೆ ಜ್ಞಾನ ನೀಡಿದ ತಂದೆ ತಾಯಿ ಹಾಗೂ ಗುರು ಮತ್ತು ಮಹಾವಿದ್ಯಾಲಯಗಳು ಸದಾಕಾಲ ಸ್ಮರಣಿಯರು, ಅವರುಗಳ ಋಣ ತೀರಿಸಲಾಗದು ಎಂದರು.

ಕಾರ್ಯಕ್ರಮದಲ್ಲಿ ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿ ಕಾಯಾಧ್ಯಕ್ಷ ಗುರುಬಸವ ಸೂಳಿಬಾವಿ, ಪ್ರಾಚಾರ್ಯ ಡಾ.ಎಸ್. ಆರ್.ಗಾಂವಕರ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಮಹಾಂತೇಶ ಬಣಕಾರವರನ್ನು ಸನ್ಮಾನಿಸಲಾಯಿತು.

## ಆರೋಗ್ಯ ಕುರಿತ ಉಪನ್ಯಾಸ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಡಿಸೆಂಬರ್ 31 ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ (ನಿಮ್ಹಾನ್ಸ್), ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಮಾನಸಿಕ ಆರೋಗ್ಯ ಮತ್ತು ನರ ರೋಗಗಳ ಬಗ್ಗೆ ನುರಿತ ವೈದ್ಯರಿಂದ ಉಪನ್ಯಾಸಗಳನ್ನು ಹಮ್ಮಿಕೊಂಡಿದೆ.

ಈ ಉಪನ್ಯಾಸಗಳು ಜನವರಿ ಮಾಹೆಯಿಂದ ಸೆಪ್ಟೆಂಬರ್ ಮಾಹೆಯವರೆಗೆ ಪ್ರತಿ ಬುಧವಾರ ಬೆಳಿಗ್ಗೆ 7.15 ರಿಂದ 7.30ರವರೆಗೆ ಎಫ್ ಎಂ ರೈನ್‌ಬೋ ಬೆಂಗಳೂರು - 101.3 Hz ನಲ್ಲಿ ಪ್ರಸಾರ ಮಾಡಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

# ಮಲ್ಲಮ್ಮ ನುಡಿ ಕನ್ನಡ ದಿನಪತ್ರಿಕೆ ರಾಜ್ಯಮಟ್ಟದ ಪತ್ರಿಕೆಯಾಗಲಿ



ಮಲ್ಲಮ್ಮ ನುಡಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆ 12 ವರ್ಷ ಪೂರೈಸಿ 13 ನೇ ವಸಂತಕ್ಕೆ ಕಾಲಿಡುತ್ತಿರುವುದು ಸಂತಸದ ಗಳಿಗೆ. ಈ ಅವಧಿಯಲ್ಲಿ ಪತ್ರಿಕೆ ಬಹಳಷ್ಟು ಬೆಳೆದಿದ್ದು, ಹೊಸ ಹೊಸ ಯೋಜನೆಗಳ ಮೂಲಕ ಓದುಗರಿಗೆ ನಿತ್ಯ ಗುಣಮಟ್ಟದ ಸುದ್ದಿಗಳನ್ನು ನೀಡುತ್ತ ಸಾಗಿ ಬಂದಿದೆ. ಈಗ ಡಿಜಿಟಲೀಕರಣಗೊಂಡಿದ್ದು, ಮನೆಯಲ್ಲೇ ಪತ್ರಿಕೆ ಕೈಗೆಟುಕುತ್ತಿದೆ. ಇದರೊಂದಿಗೆ ಜನೇವರಿ 1 ರಿಂದ ಪ್ರತಿನಿತ್ಯ ಕಲರ ಪತ್ರಿಕೆಯಾಗಿ ಹೊರಬರುತ್ತಿರುವುದು ಸಂತಸದ ಸಂಗತಿ. ಇದು ಪತ್ರಿಕೆಯ ಇನ್ನೊಂದು ದಿಟ್ಟ ಹೆಜ್ಜೆಯಾಗಿದೆ. ಈ ಸಂದರ್ಭದಲ್ಲಿ ಪತ್ರಿಕೆ ಹಾಗೂ ಸಂಪಾದಕ ರಮೇಶರಡ್ಡಿ ಅವರನ್ನು ಅಭಿನಂದಿಸಿ, ಪತ್ರಿಕೆ ಇನ್ನೂ ರಾಜ್ಯಮಟ್ಟದ ವ್ಯಾಪ್ತಿಗೆ ಬೆಳೆಯಲಿ ಎಂದು ಶುಭಾಶಯ ಕೋರುತ್ತೇನೆ.

**- ರಾಜಶೇಖರ ಬಿ. ಪಾಟೀಲ**
**ಮಾಜಿ ಸಚಿವರು**

